24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 12 | ನವದೆಹಲಿ | ಬೆಲೆ ₹10 | ಜುಲೈ 8 2026, ಬುಧವಾರ

## ಒಳಪುಟಗಳಲ್ಲಿ


ಕರೂರ್ ಕಾಲ್ತುಳಿತ: ಸಿಎಂ ವಿಜಯ್ ಸಂತ್ರಸ್ತರ ಭೇಟಿ ಪ್ರಶ್ನಿಸಿದ್ದ ಡಿಎಂಕೆ ಅರ್ಜಿ ವಜಾಗೊಳಿಸಿದ ಸುಪ್ರೀಂ - ಪು.4

ಮೇಕೆದಾಟು ಯೋಜನೆಗೆ ತಮಿಳುನಾಡು ಆಕ್ಷೇಪ ಜು.15ರಂದು ಅತ್ತಿಬೆಲೆ ಬಂದ್‌ಗೆ ವಾಟಾಳ್ ಕರೆ - ಪು.5

ಮಲ್ಲಳ್ಳಿ ಜಲಪಾತದ ನೀರಿನಲ್ಲಿ ಸಿಲುಕಿದ್ದ ಇಬ್ಬರು ವಿದ್ಯಾರ್ಥಿಗಳ ರಕ್ಷಣೆ - ಪು.6


# ಭಾರತ–ಇಂಡೋನೇಷ್ಯಾ ನಡುವೆ ಮಹತ್ವದ 14 ಒಪ್ಪಂದಗಳಿಗೆ ಸಹಿ

**ನವದೆಹಲಿ, ಜು.7:** ಮಂಗಳವಾರ ಪ್ರಧಾನಿ ನರೇಂದ್ರ ಮೋದಿಯವರ ಇಂಡೋನೇಷ್ಯಾ ಭೇಟಿಯು ದ್ವಿಪಕ್ಷೀಯ ಸಂಬಂಧಗಳಲ್ಲಿ ಮಹತ್ವದ ಮೈಲಿಗಲ್ಲನ್ನು ಗುರುತಿಸಿದೆ, ಭಾರತ ಮತ್ತು ಇಂಡೋನೇಷ್ಯಾ 14 ಒಪ್ಪಂದಗಳಿಗೆ ಸಹಿ ಹಾಕಿವೆ ಮತ್ತು ರಕ್ಷಣೆ, ಕಡಲ ಭದ್ರತೆ, ಆರೋಗ್ಯ ರಕ್ಷಣೆ, ಕೃಷಿ, ಬಾಹ್ಯಾಕಾಶ, ಡಿಜಿಟಲ್ ತಂತ್ರಜ್ಞಾನ, ನಿರ್ಣಾಯಕ ಖನಿಜಗಳು, ಶಿಕ್ಷಣ ಮತ್ತು ಸಾಂಸ್ಕೃತಿಕ ರಾಜತಾಂತ್ರಿಕತೆಯನ್ನು ಒಳಗೊಂಡ ಆರು ಪ್ರಮುಖ ಉಪಕ್ರಮಗಳನ್ನು ಘೋಷಿಸಿವೆ,

ಎರಡು ಇಂಡೋ–ಪೆಸಿಫಿಕ್ ಪ್ರಜಾಪ್ರಭುತ್ವಗಳ ನಡುವೆ ಬೆಳೆಯುತ್ತಿರುವ ಕಾರ್ಯತಂತ್ರದ ಹೊಂದಾಣಿಕೆ ಮತ್ತು ಭದ್ರತೆ, ಆರ್ಥಿಕ ಮತ್ತು ತಾಂತ್ರಿಕ ಕ್ಷೇತ್ರಗಳಲ್ಲಿ ಸಹಯೋಗವನ್ನು ಬಲಪಡಿಸುವ ಅವರ ಬದ್ಧತೆಯನ್ನು ಒತ್ತಿಹೇಳುತ್ತವೆ.

ಶಾಂತಿಯುತ ಉದ್ದೇಶಗಳಿಗಾಗಿ ಬಾಹ್ಯಾಕಾಶದ ಅನ್ವೇಷಣೆ ಮತ್ತು ಬಳಕೆಯಲ್ಲಿ ಸಹಕಾರದ ಕುರಿತಾದ ಚೌಕಟ್ಟಿನ ಒಪ್ಪಂದದ ವಿಸ್ತರಣೆಯು ಒಂದು ಪ್ರಮುಖ ಅಂಶವಾಗಿತ್ತು, ಇದು ಬಾಹ್ಯಾಕಾಶ ಸಂಶೋಧನೆಯಲ್ಲಿ ಎರಡೂ ದೇಶಗಳ ನಡುವಿನ ದೀರ್ಘಕಾಲದ ಪಾಲುದಾರಿಕೆಯನ್ನು ಪುನರುಚ್ಚರಿಸಿತು.



2018ರಲ್ಲಿ ಸ್ಥಾಪನೆಯಾದ ನಮ್ಮ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ಈಗ ಹೊಸ ಎತ್ತರವನ್ನು ತಲುಪುತ್ತಿದೆ. ನಮ್ಮ ಎರಡೂ ರಾಷ್ಟ್ರಗಳ ಬಾಗಿಲುಗಳನ್ನು ಈಗ ಸುವರ್ಣ ಯುಗ ತಟ್ಟುತ್ತಿದೆ. ನಮ್ಮ ಇತಿಹಾಸದಲ್ಲಿ ನಾವು ಸಾಮಾನ್ಯ ಸಂಸ್ಕೃತಿಯನ್ನು ಹಂಚಿಕೊಳ್ಳುತ್ತೇವೆ. ನಮ್ಮ ವರ್ತಮಾನದಲ್ಲಿ ನಾವು ಪರಸ್ಪರ ನಂಬಿಕೆಯನ್ನು ಹಂಚಿಕೊಳ್ಳುತ್ತೇವೆ. ಮತ್ತು ನಮ್ಮ ಭವಿಷ್ಯಕ್ಕಾಗಿ ಸಾಮಾನ್ಯ ಸಮೃದ್ಧಿಯ ದೃಷ್ಟಿಕೋನವನ್ನು ನಾವು ಹಂಚಿಕೊಳ್ಳುತ್ತೇವೆ. ಇಂಡೋನೇಷ್ಯಾ ಎಮಾಸ್ ಮತ್ತು ವಿಕಸಿತ ಭಾರತ ದೃಷ್ಟಿಕೋನವನ್ನು ಒಟ್ಟಾಗಿ ಸಾಕಾರಗೊಳಿಸುತ್ತೇವೆ ಎಂಬ ವಿಶ್ವಾಸವಿದೆ.
– ನರೇಂದ್ರ ಮೋದಿ, ಪ್ರಧಾನಮಂತ್ರಿ

## ಮೋದಿಗೆ ಮತ್ತೊಂದು ಪ್ರಶಸ್ತಿ



ಜಕಾರ್ತಾದಲ್ಲಿ ನಡೆದ ಸಮಾರಂಭದಲ್ಲಿ ಇಂಡೋನೇಷ್ಯಾದ ಅತ್ಯುನ್ನತ ನಾಗರಿಕ ಗೌರವ 'ದಿ ಬಿಂಟಂಗ್ ಆದಿಪೂರ್ಣ ಆಫ್ ದಿ ರಿಪಬ್ಲಿಕ್ ಆಫ್ ಇಂಡೋನೇಷ್ಯಾ'ವನ್ನು ಅಧ್ಯಕ್ಷ ಪ್ರಬೊವೊ ಸುಬಿಯಾಂಟ್ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪ್ರದಾನ ಮಾಡಿದರು.

## ಯಾವ್ಯಾಯ ಒಪ್ಪಂದ?

ಭಾರತ ಮತ್ತು ಇಂಡೋನೇಷ್ಯಾ ಭವಿಷ್ಯಕ್ಕೆ ಸಿದ್ಧವಾಗಿರುವ ವಲಯಗಳ ಮೇಲೆ ಕೇಂದ್ರೀಕರಿಸಿದ ಹಲವಾರು ಒಪ್ಪಂದಗಳಿಗೆ ಸಹಿ ಹಾಕಿದವು.ಇವುಗಳಲ್ಲಿ ಎಐ, ದೂರಸಂಪರ್ಕ, ನವೋದ್ಯಮ ಪರಿಸರ ವ್ಯವಸ್ಥೆಗಳು ಮತ್ತು ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯದಲ್ಲಿನ ಪಾಲುದಾರಿಕೆಗಳು ಸೇರಿವೆ. ಬಾಹ್ಯಾಕಾಶ ಕ್ಷೇತ್ರದಲ್ಲಿ ಸಹಕಾರವನ್ನು ಇನ್ನಷ್ಟು ಹೆಚ್ಚಿಸಲು ಉಭಯ ನಾಯಕರು ಒಪ್ಪಿಕೊಂಡರು. ಪ್ರಧಾನಿ ಮೋದಿ ಅವರ ಪ್ರಕಾರ, ಎರಡೂ ದೇಶಗಳು ದಶಕಗಳಿಂದ ಬಾಹ್ಯಾಕಾಶ ಸಂಶೋಧನೆಯಲ್ಲಿ ವಿಶ್ವಾಸಾರ್ಹ ಪಾಲುದಾರಿಕೆಯನ್ನು ಹಂಚಿಕೊಂಡಿವೆ ಮತ್ತು ಈಗ ಜಂಟಿ ಸಂಶೋಧನೆ, ತಂತ್ರಜ್ಞಾನ ಹಂಚಿಕೆ ಮತ್ತು ಸಾಮರ್ಥ್ಯ ವರ್ಧನೆ ಉಪಕ್ರಮಗಳ ಮೂಲಕ ಸಹಯೋಗವನ್ನು ವಿಸ್ತರಿಸಲಿವೆ. ಚರ್ಚೆಗಳು ಸುಸ್ಥಿರ ಕೃಷಿ ಮತ್ತು ಕೃಷಿ ತಂತ್ರಜ್ಞಾನವನ್ನು ಸಹ ಒಳಗೊಂಡಿವೆ, ಎರಡೂ ರಾಷ್ಟ್ರಗಳು ಕೃಷಿ ಅಭಿವೃದ್ಧಿಯನ್ನು ಬೆಂಬಲಿಸುವ ಅತ್ಯುತ್ತಮ ಪದ್ಧತಿಗಳನ್ನು ವಿನಿಮಯ ಮಾಡಿಕೊಳ್ಳಲು ಒಪ್ಪಿಕೊಂಡಿವೆ ಎಂದರು. ಆರೋಗ್ಯ ರಕ್ಷಣೆ ಸಹಯೋಗದ ಮತ್ತೊಂದು ಪ್ರಮುಖ ಕ್ಷೇತ್ರವಾಗಿ ಹೊರಹೊಮ್ಮಿತು. ಭಾರತದ ಕೇಂದ್ರ ಔಷಧ ಗುಣಮಟ್ಟ ನಿಯಂತ್ರಣ ಸಂಸ್ಥೆ ಮತ್ತು ಇಂಡೋನೇಷ್ಯಾದ ಔಷಧ ಮತ್ತು ಆಹಾರ ನಿಯಂತ್ರಣ ರಾಷ್ಟ್ರೀಯ ಸಂಸ್ಥೆ ನಿಯಂತ್ರಕ ಸಹಕಾರವನ್ನು ಹೆಚ್ಚಿಸಲು ಮತ್ತು ಕೈಗೆಟುಕುವ, ಉತ್ತಮ ಗುಣಮಟ್ಟದ ಔಷಧಿಗಳಿಗೆ ಹೆಚ್ಚಿನ ಪ್ರವೇಶವನ್ನು ಒದಗಿಸಲು ವೈದ್ಯಕೀಯ ಉತ್ಪನ್ನ ನಿಯಂತ್ರಣದ ಕುರಿತು ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಭಾರತವು ತನ್ನ ಕೃಷಿ ಅಭಿವೃದ್ಧಿಯನ್ನು ಬೆಂಬಲಿಸಲು ಇಂಡೋನೇಷ್ಯಾಕ್ಕೆ 100 ಟನ್ ಉತ್ತಮ ಗುಣಮಟ್ಟದ ಡಿಡಬ್ಲ್ಯುಆರ್–162 ಗೋಧಿಯನ್ನು ಪೂರೈಸುವುದಾಗಿ ಘೋಷಿಸಿತು.




ಇಂಡೋನೇಷ್ಯಾದ ಕರಾವಳಿ ರಕ್ಷಣಾ ಸಾಮರ್ಥ್ಯವನ್ನು ಹೆಚ್ಚಿಸಲು ವಿನ್ಯಾಸಗೊಳಿಸಲಾದ ಎರಡು ಬ್ರಹ್ಮೋಸ್ ಕ್ಷಿಪಣಿ ಬ್ಯಾಟರಿಗಳ ಪೂರೈಕೆಗೆ 20 ದಶಲಕ್ಷ ಡಾಲರ್ ಮೊತ್ತದ ಒಪ್ಪಂದಕ್ಕೆ ಎರಡೂ ದೇಶಗಳ ನಡುವೆ ಒಪ್ಪಂದ ಏರ್ಪಟ್ಟಿತು.ಎರಡೂ ದೇಶಗಳ ನಡುವಿನ ಮಾತುಕತೆಗಳಲ್ಲಿ ಈ ವ್ಯಾಪಾರ ಒಪ್ಪಂದವು ಮಹತ್ವದ್ದಾಗಿದೆ. ಜಾಗತಿಕ ರಕ್ಷಣಾ ಮಾರುಕಟ್ಟೆಯಲ್ಲಿ ನವದೆಹಲಿಯ ವಿಸ್ತರಿಸುತ್ತಿರುವ ಹೆಜ್ಜೆಗುರುತನ್ನು ಪ್ರತಿಬಿಂಬಿಸುತ್ತದೆ. ಬ್ರಹ್ಮೋಸ್ ಒಪ್ಪಂದದ ಹೊರತಾಗಿ, ಭಾರತ ಮತ್ತು ಇಂಡೋನೇಷ್ಯಾ ಅಸ್ತ್ರ ಏರ್–ಟು–ಏರ್ ಕ್ಷಿಪಣಿ ವ್ಯವಸ್ಥೆ, ರಕ್ಷಣಾ ತಂತ್ರಜ್ಞಾನಗಳ ವರ್ಗಾವಣೆ, ಕಡಲ ಭದ್ರತಾ ಸಹಕಾರ ಮತ್ತು ಎರಡೂ ದೇಶಗಳ ರಕ್ಷಣಾ ಕೈಗಾರಿಕೆಗಳ ನಡುವಿನ ಸಹಯೋಗವನ್ನು ಒಳಗೊಂಡ ರಕ್ಷಣಾ ಸಂಬಂಧಿತ ಒಪ್ಪಂದಗಳಿಗೆ ಸಹಿ ಹಾಕಿದವು.

## ಐಐಎಂ ಮೊದಲ ಸಾಗರೋತ್ತರ ಕ್ಯಾಂಪಸ್

ಇಂಡೋನೇಷ್ಯಾದ ಸಿಂಘಸಾರಿ ವಿಶೇಷ ಆರ್ಥಿಕ ವಲಯದಲ್ಲಿ ಭಾರತೀಯ ನಿರ್ವಹಣಾ ಸಂಸ್ಥೆ (ಐಐಎಂ) ಬೆಂಗಳೂರು ಇದರ ಮೊದಲ ಸಾಗರೋತ್ತರ ಕ್ಯಾಂಪಸ್ ಸ್ಥಾಪಿಸಲಿದೆ. ಇದು ಆಗ್ನೇಯ ಏಷ್ಯಾದಲ್ಲಿ ಭಾರತದ ಉನ್ನತ ಶಿಕ್ಷಣದ ಉಪಸ್ಥಿತಿಯ ಗಮನಾರ್ಹ ವಿಸ್ತರಣೆಯನ್ನು ಗುರುತಿಸುತ್ತದೆ. ಎರಡೂ ದೇಶಗಳು ಜಂಟಿಯಾಗಿ "ಟ್ಯಾಗೋರ್–ದೇವಂತರ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ರಾಜತಾಂತ್ರಿಕ ವರ್ಷ"ವನ್ನು ಆಚರಿಸುತ್ತವೆ.

# ನಾಳೆಯಿಂದ 2 ದಿನ ಸಿಎಂ ಬೆಳಗಾವಿ ಜಿಲ್ಲಾ ಪ್ರವಾಸ

**ಬೆಳಗಾವಿ, ಜು.7:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಜುಲೈ 9, 10ರಂದು ಬೆಳಗಾವಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.9ರಂದು ಬೆಳಿಗ್ಗೆ 10.40ಕ್ಕೆ ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಬಂದಿಳಿಯುವ ಅವರು, 11ಕ್ಕೆ ಸುವರ್ಣ ವಿಧಾನಸೌಧದಲ್ಲಿ ಬೆಳಗಾವಿ ವಿಭಾಗಮಟ್ಟದ ಪ್ರಗತಿ ಪರಿಶೀಲನೆ ಸಭೆ ನಡೆಸುವರು. ಸಂಜೆ 4ಕ್ಕೆ ಸೌಧದಲ್ಲೇ ಸೌಥ್ ಇಂಡಿಯನ್ ಶುಗರ್ ಮಿಲ್ಸ್ ಅಸೋಸಿಯೇಷನ್ ಪ್ರತಿನಿಧಿಗಳ ಜತೆ ಸಭೆ ಮಾಡುವರು. ಸಂಜೆ 6ಕ್ಕೆ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ, ಕಾರ್ಯಕರ್ತರೊಂದಿಗೆ ಸಮಾಲೋಚನೆ ನಡೆಸುವರು.ಅಂದು ಬೆಳಗಾವಿಯಲ್ಲೇ ವಾಸ್ತವ್ಯ ಹೂಡಿ, 10ರಂದು ಬೆಳಿಗ್ಗೆ 9.30ಕ್ಕೆ ಸಾಂಬ್ರಾ ವಿಮಾನ ನಿಲ್ದಾಣದಿಂದ ಬೆಂಗಳೂರಿಗೆ ಪ್ರಯಾಣ ಬೆಳಸುವರು.

# ಜನಪರ ಕೆಲಸ ಮಾಡದವರನ್ನು ಸಹಿಸಲ್ಲ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಚ್ಚರಿಕೆ

- ಬರ ನಿರ್ವಹಣೆ ಸಿದ್ಧತೆ ಕುರಿತು ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕ ಜಿಲ್ಲೆಗಳ ಅಧಿಕಾರಿಗಳ ಜತೆ ಸಭೆ



**ಕಲಬುರಗಿ, ಜು.7:** ರಾಜ್ಯವನ್ನು ಕಾಡುತ್ತಿರುವ ಬರಗಾಲ ಪರಿಸ್ಥಿತಿ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಎಚ್ಚರಿಸಿದರು.

ನಗರದ ಹೊರವಲಯದ ಗುಲಬರ್ಗಾ ವಿವಿಯ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿನ ಬರ ಸನ್ನದ್ಧತೆ ಕುರಿತು ಅಧಿಕಾರಿಗಳ ಜತೆ ಮಂಗಳವಾರ ಸಭೆ ನಡೆಸಿ ಮಾತನಾಡಿ, ಸರ್ವರನ್ನೂ ಒಳಗೊಂಡ ಪರಿಶುದ್ಧ ಆಡಳಿತ, ಅಭಿವೃದ್ಧಿ ಮತ್ತು ಕಟ್ಟಕಡೆಯ ವ್ಯಕ್ತಿಗೂ ಅವರ ನಾಗರಿಕ ಹಕ್ಕುಗಳನ್ನು ತಲುಪಿಸುವುದು ನನ್ನ ಸರ್ಕಾರದ ಪ್ರಮುಖ ಗುರಿ. ಈ ಗುರಿ ಸಾಧಿಸಲು ಅಧಿಕಾರಿ ವರ್ಗ ಅತ್ಯಂತ ಕ್ರಿಯಾಶೀಲ, ಜನಪರ ಮತ್ತು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಜನಪರ ಕೆಲಸ ಮಾಡದ ಅಧಿಕಾರಿಗಳನ್ನು ಸಹಿಸಿಕೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ನಾನು ಬಸವಾದಿ ಶರಣರ ಸಮಾನತೆಯ ತತ್ವವನ್ನು ನಂಬುವವನು. ಆದ್ದರಿಂದಲೇ ನನ್ನ ಮೊದಲ ಉತ್ತರ ಕರ್ನಾಟಕ ಪ್ರವಾಸವನ್ನು ಬಸವಕಲ್ಯಾಣದಿಂದ ಆರಂಭಿಸಿದ್ದೇನೆ. ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಅಭಿವೃದ್ಧಿ ಒಂದೇ ವೇಗದಲ್ಲಿ ಸಾಗಬೇಕು ಎಂದರು.

ಬೀದರ್, ಕಲಬುರಗಿ ಜಿಲ್ಲೆಯ ಜನರು ನೀಡಿರುವ ಅಭೂತಪೂರ್ವ ಬೆಂಬಲ, ಪ್ರೀತಿ ಮತ್ತು ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿದ ಅವರು, ಜನತೆ ನಮ್ಮ ಮೇಲೆ ಇಟ್ಟಿರುವ ನಂಬಿಕೆಯು ನಮ್ಮ ಜವಾಬ್ದಾರಿಯನ್ನು ಹೆಚ್ಚಿಸಿದೆ. ನಮ್ಮನ್ನು ಈ ಸ್ಥಾನದಲ್ಲಿ ಕೂರಿಸಿರುವ ಜನರ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುವುದು ನಮ್ಮೆಲ್ಲರ ಕರ್ತವ್ಯ ಎಂದರು.

ತಾಪಂ ಅಧ್ಯಕ್ಷ ಸ್ಥಾನದಿಂದ ಆರಂಭವಾಗಿ ಮುಖ್ಯಮಂತ್ರಿ ಹುದ್ದೆಯವರೆಗೆ ಎಲ್ಲಾ ಹಂತಗಳನ್ನು ದಾಟಿಕೊಂಡು ಬಂದಿದ್ದೇನೆ. ಹೀಗಾಗಿ ಆಡಳಿತದ ಪ್ರತಿಯೊಂದು ಹಂತದಲ್ಲಿ ಏನು ನಡೆಯುತ್ತದೆ ಎಂಬುದು ಚೆನ್ನಾಗಿ ಗೊತ್ತಿದೆ. ಅಭಿವೃದ್ಧಿ ವಿಚಾರದಲ್ಲಿ ಯಾವುದೇ ನೆಪಗಳನ್ನು ಕೇಳಲು ನಾನು ಸಿದ್ಧನಿಲ್ಲ. ಫಲಿತಾಂಶವೇ ಮುಖ್ಯ ಎಂದು ಅಧಿಕಾರಿಗಳಿಗೆ ಸ್ಪಷ್ಟ ಸಂದೇಶ ನೀಡಿದರು. ನಿಮ್ಮ ಕಾರ್ಯಕ್ಷಮತೆ ಉತ್ತಮವಾಗಿದ್ದರೆ ನಾಡಿನ ಜನತೆಯ ಋಣ ತೀರಿಸಿದಂತಾಗುತ್ತದೆ. ಆದರೆ ಜನಪರವಾಗಿ ಕೆಲಸ ಮಾಡದಿದ್ದರೆ, ಕ್ರಮ ಕೈಗೊಳ್ಳುವುದು ಅನಿವಾರ್ಯವಾಗುತ್ತದೆ ಎಂದೂ ಖಡಕ್ ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಏಳೂ ಜಿಲ್ಲೆಗಳ ಹಲವು ಶಾಸಕರು, ಎಲ್ಲ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಅಧಿಕಾರಿಗಳು, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದಾರೆ.

# ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸರ್ಕಾರದ ಹಸ್ತಕ್ಷೇಪವಿಲ್ಲ

**ಕಲಬುರಗಿ, ಜು.7:** ರಾಜ್ಯದಲ್ಲಿ ಎಸ್‌ಐಆರ್ ನಡೆಯುತ್ತಿದ್ದು, ನಮ್ಮ ಸರ್ಕಾರ ಪಾರದರ್ಶಕವಾಗಿ ಮತದಾರರ ಹಕ್ಕು ಉಳಿಸಲು ತೀರ್ಮಾನಿಸಿದೆ. ಈ ವಿಚಾರದಲ್ಲಿ ರಾಜಕಾರಣ ಮಾಡುವ ಅಗತ್ಯ ನಮಗಿಲ್ಲ. ಅದರಲ್ಲಿ ಆಸಕ್ತಿಯೂ ಇಲ್ಲ. ಬೇರೆಯವರು ಏನಾದರೂ ಟೀಕೆ ಮಾಡಿಕೊಳ್ಳಲಿ. ರಾಜ್ಯದ ಪ್ರತಿಯೊಬ್ಬ ವ್ಯಕ್ತಿಯ ಮತದಾನದ ಹಕ್ಕು ಉಳಿಸುವುದು ನಮ್ಮ ಸರ್ಕಾರದ ಬದ್ಧತೆ. ಆಮೂಲಕ ಸರ್ಕಾರದ ಯೋಜನೆಗಳು ಜನರಿಗೆ ತಲುಪುವಂತೆ ಮಾಡಬೇಕು. ಎಸ್‌ಐಆರ್ ವಿಚಾರವಾಗಿ ನಮ್ಮ ಆಕ್ಷೇಪಗಳನ್ನು ನಾವು ನ್ಯಾಯಾಲಯದಲ್ಲಿ ಮಂಡಿಸುತ್ತಿದ್ದೇವೆ. ವಿರೋಧ ಪಕ್ಷದವರು ನಮ್ಮ ಸರ್ಕಾರದ ಎಸ್‌ಐಆರ್‌ಗೆ ಸಹಕಾರ ನೀಡುವುದಿಲ್ಲ ಎಂದು ಭಾವಿಸಿದ್ದರು. ನಮಗೆ ಭಿನ್ನಾಭಿಪ್ರಾಯವಿದೆ ಎಂಬ ಕಾರಣಕ್ಕೆ ಜನರ ಮತದಾನದ ಹಕ್ಕು ಕಳೆದುಕೊಳ್ಳಲು ಅವಕಾಶ ನೀಡಲು ಸಾಧ್ಯವಿಲ್ಲ. ಹೀಗಾಗಿ ನಮ್ಮ ಸರ್ಕಾರ ದೇಶದ ಬೇರೆ ಯಾವುದೇ ರಾಜ್ಯದಲ್ಲಿ ನೀಡದ ಸಹಕಾರವನ್ನು ನೀಡುತ್ತಿದೆ. ಕಾನೂನು ಹೊರತಾಗಿ ಪ್ರಕ್ರಿಯೆ ನಡೆಸಲು ನಮ್ಮ ಸರ್ಕಾರ ಅವಕಾಶ ನೀಡುವುದಿಲ್ಲ. ಬಿಎಲ್‌ಓಗಳು ಪ್ರತಿ ಮನೆಗೆ ಮೂರು ಬಾರಿ ಸಂಪರ್ಕ ಮಾಡಬೇಕು. ಈ ಅರ್ಜಿ ತುಂಬುವ ಪ್ರಕ್ರಿಯೆಯಲ್ಲಿ ಜನರಿಗೆ ನೆರವು ನೀಡಲು ಬಿಎಲ್‌ಎ2ಗಳ ಮೂಲಕ ರಾಜಕೀಯ ಪಕ್ಷಗಳಿಗೆ ಅವಕಾಶ ಕಲ್ಪಿಸಲಾಗಿದೆ. ಈ ಪ್ರಕ್ರಿಯೆಯನ್ನು ಬಿಎಲ್‌ಓಗಳು ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಕಾನೂನು ಚೌಕಟ್ಟಿನಲ್ಲಿ ಕೆಲಸ ಮಾಡಬೇಕು ಎಂದು ತಿಳಿಸಿದರು.

# ಜಾಗತಿಕ ಕಚ್ಚಾ ತೈಲ ಬೆಲೆಯಲ್ಲಿ ಮತ್ತೆ ಏರಿಕೆ

**ವಾಷಿಂಗ್ಟನ್, ಜು.7:** ಇರಾನ್‌ನ ಐಆರ್‌ಜಿಸಿ ನಡೆಸಿದೆ ಎನ್ನಲಾದ ದಾಳಿಯಲ್ಲಿ ಹಾರ್ಮುಜ್ ಜಲಸಂಧಿಯಲ್ಲಿ ಹಲವು ಹಡಗುಗಳ ಮೇಲೆ ದಾಳಿ ನಂತರ ಉದ್ವಿಗ್ನತೆ ಹೆಚ್ಚಿದ್ದು, ಜಾಗತಿಕ ತೈಲ ಬೆಲೆಯಲ್ಲಿ ಮಂಗಳವಾರ ಮತ್ತೊಮ್ಮೆ ಏರಿಕೆ ಉಂಟಾಗಿದೆ. ಬ್ರೆಂಟ್ ಕಚ್ಚಾ ತೈಲದ ಬೆಲೆ ಸುಮಾರು 2.5% ಹೆಚ್ಚಾಗಿ ಪ್ರತಿ ಬ್ಯಾರೆಲ್‌ಗೆ $73.83ಕ್ಕೆ ತಲುಪಿದ್ದರೆ, ವೆಸ್ಟ್ ಟೆಕ್ಸಾಸ್ ಇಂಟರ್ಮೀಡಿಯೆಟ್ (WTI) ಕೂಡ ಸರಿಸುಮಾರು ಅಷ್ಟೇ ಪ್ರಮಾಣದಲ್ಲಿ ಏರಿಕೆಯಾಗಿ ಪ್ರತಿ ಬ್ಯಾರೆಲ್‌ಗೆ $70 ತಲುಪಿದೆ.

ಶಿಪ್ಪಿಂಗ್ ಅನ್ನು ಸಹಜ ಸ್ಥಿತಿಗೆ ತರಲು ಮತ್ತು ಜಾಗತಿಕ ಆತಂಕಗಳನ್ನು ದೂರ ಮಾಡಲು ಅಮೆರಿಕ ಮತ್ತು ಇರಾನ್ ನಡುವೆ ಒಪ್ಪಂದ ಸಹಿಯಾದ ಕೆಲವೇ ವಾರಗಳಲ್ಲಿ ಈ ಘಟನೆ ನಡೆದಿದ್ದು, ಪರ್ಷಿಯನ್ ಗಲ್ಫ್‌ನಿಂದ ಇಂಧನ ರಫ್ತಿಗೆ ಅಡಚಣೆಯಾಗಬಹುದು ಎಂಬ ಆತಂಕವನ್ನು ಇದು ಮತ್ತೆ ಹುಟ್ಟುಹಾಕಿದೆ.

ಹೆಚ್ಚುತ್ತಿರುವ ತೈಲ ಬೆಲೆಗಳು ಹಣದುಬ್ಬರದ ಮೇಲೆ ಒತ್ತಡ ಹೇರುತ್ತಿದ್ದು, ಬಾಂಡ್ ಮಾರುಕಟ್ಟೆಯಲ್ಲಿ ಯುಎಸ್ ಟ್ರೆಜರಿ ಇಳುವರಿ ಮೇಲಕ್ಕೆ ಏರಿದೆ. 10 ವರ್ಷಗಳ ಟ್ರೆಜರಿ ಆದಾಯವು 4.48%ರಿಂದ 4.51%ಕ್ಕೆ ಏರಿಕೆಯಾಗಿದೆ.

ಬೇಸಿಗೆ ಆರಂಭದಲ್ಲಿ ಇರಾನ್ ಯುದ್ಧದ ಸಮಯದಲ್ಲಿ ಕಚ್ಚಾತೈಲ ಬೆಲೆ ಪ್ರತಿ ಬ್ಯಾರೆಲ್‌ಗೆ $100 ಕ್ಕಿಂತ ಹೆಚ್ಚಾಗಿದ್ದರಿಂದ, ಜಾಗತಿಕ ಬೆಳವಣಿಗೆ ಮತ್ತು ಹಣದುಬ್ಬರದ ಮೇಲಾಗುವ ಪರಿಣಾಮಗಳ ಬಗ್ಗೆ ಹೂಡಿಕೆದಾರರು ಇಂಧನ ಮಾರುಕಟ್ಟೆಯ ಏರಿಳಿತಗಳ ಬಗ್ಗೆ ತೀವ್ರ ನಿಗಾ ವಹಿಸಿದ್ದಾರೆ.

# ಇಂದಿನಿಂದ ಕೊಚ್ಚಿಯಲ್ಲಿ ಬ್ರಿಕ್ಸ್ ಮಹಿಳಾ ಸಚಿವರ ಸಭೆ

**ನವದೆಹಲಿ, ಜು.7:** ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ನಡುವೆ ಸಹಕಾರವನ್ನು ಬಲಪಡಿಸಲು ಮತ್ತು ಮಹಿಳಾ ನೇತೃತ್ವದ ಅಭಿವೃದ್ಧಿಯ ಹಂಚಿಕೆಯ ಕಾರ್ಯಸೂಚಿಯನ್ನು ಮುನ್ನಡೆಸಲು ಭಾರತವು ಜುಲೈ 8ರಿಂದ ಕೇರಳದ ಕೊಚ್ಚಿಯಲ್ಲಿ ಎರಡು ದಿನಗಳ ಬ್ರಿಕ್ಸ್ ಮಹಿಳಾ ಸಚಿವರ ಸಭೆಯನ್ನು ಆಯೋಜಿಸಿದೆ.

ಈ ಸಭೆಯು ಮಹಿಳಾ ಸಬಲೀಕರಣವನ್ನು ಉತ್ತೇಜಿಸುವ ಮತ್ತು ಒಳಗೊಳ್ಳುವ, ಸ್ಥಿತಿಸ್ಥಾಪಕ ಹಾಗೂ ಸುಸ್ಥಿರ ಅಭಿವೃದ್ಧಿಯ ಕಡೆಗೆ ಬ್ರಿಕ್ಸ್ ರಾಷ್ಟ್ರಗಳ ಬದ್ಧತೆಯನ್ನು ಪುನರುಚ್ಚರಿಸುವತ್ತ ಗಮನ ಹರಿಸಲಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ಪ್ರಕಾರ, ಭಾರತದ ಬ್ರಿಕ್ಸ್ ಅಧ್ಯಕ್ಷತೆಯು ನಾಲ್ಕು ಪ್ರಮುಖ ಸ್ತಂಭಗಳಾದ ಸ್ಥಿತಿಸ್ಥಾಪಕತ್ವ, ಆವಿಷ್ಕಾರ, ಸಹಕಾರ ಮತ್ತು ಸುಸ್ಥಿರತೆ ಮೇಲೆ ಆಧಾರಿತವಾಗಿದೆ. ಪ್ರತಿಯೊಂದು ಕ್ಷೇತ್ರಗಳಲ್ಲೂ ಮಹಿಳಾ ಸಬಲೀಕರಣವನ್ನು ಉತ್ತೇಜಿಸುವಂತೆ ಬ್ರಿಕ್ಸ್ ಮಹಿಳಾ ಕಾರ್ಯಸೂಚಿಯನ್ನು ರೂಪಿಸಲಾಗಿದೆ. ಈ ಸಚಿವ ಮಟ್ಟದ ಸಭೆಯು ಜುಲೈ 6–7 ರಂದು ಕೊಚ್ಚಿಯಲ್ಲಿ ನಡೆದ ಬ್ರಿಕ್ಸ್ ಮಹಿಳಾ ಕಾರ್ಯನಿರತ ಗುಂಪಿನ ಸಭೆಯ ಮುಂದುವರಿದ ಭಾಗವಾಗಿದೆ.

ಸಚಿವ ಮಟ್ಟದ ಈ ಚರ್ಚೆಗಳು ಕಾರ್ಯನಿರತ ಗುಂಪಿನ ಸಭೆಯ ಫಲಿತಾಂಶಗಳನ್ನು ಆಧರಿಸಿ, ಬ್ರಿಕ್ಸ್ ರಾಷ್ಟ್ರಗಳ ನಡುವಿನ ಭವಿಷ್ಯದ ಸಹಕಾರಕ್ಕೆ ಕಾರ್ಯತಂತ್ರದ ನಿರ್ದೇಶನವನ್ನು ನೀಡುವ ನಿರೀಕ್ಷೆಯಿದೆ. ಈ ಚರ್ಚೆಗಳು ಪ್ರಾಯೋಗಿಕ ಸಹಕಾರವನ್ನು ಆಳವಾಗಿಸಲು ಮತ್ತು ಲಿಂಗ ಸಮಾನತೆ ಹಾಗೂ ಮಹಿಳಾ ನೇತೃತ್ವದ ಅಭಿವೃದ್ಧಿಯತ್ತ ಪ್ರಗತಿಯನ್ನು ಬಲಪಡಿಸಲು ಬ್ರಿಕ್ಸ್ ಸದಸ್ಯ ದೇಶಗಳ ಸಾಮೂಹಿಕ ಆಕಾಂಕ್ಷೆಯನ್ನು ಪ್ರತಿಬಿಂಬಿಸುವ ನಿರೀಕ್ಷೆಯಿದೆ.

ಕಾರ್ಯಕ್ರಮದ ಭಾಗವಾಗಿ, ಗ್ರಾಮೀಣಾಭಿವೃದ್ಧಿ, ವಿಜ್ಞಾನ ಮತ್ತು ತಂತ್ರಜ್ಞಾನ, ಪೌಷ್ಟಿಕಾಂಶ, ಶಿಕ್ಷಣ ಮತ್ತು ಉದ್ಯಮಶೀಲತೆಯಂತಹ ಕ್ಷೇತ್ರಗಳಲ್ಲಿ ಮಹಿಳಾ ನೇತೃತ್ವದ ಅಭಿವೃದ್ಧಿಯಲ್ಲಿ ಭಾರತದ ಸಾಧನೆಗಳನ್ನು ಬಿಂಬಿಸುವ ಪ್ರದರ್ಶನಗಳನ್ನು ಆಯೋಜಿಸಲಾಗುವುದು ಹಾಗೂ ಯಶಸ್ಸಿನ ಕಥೆಗಳನ್ನು ಪ್ರದರ್ಶಿಸಲಾಗುವುದು.

# ಎಸ್‌ಐಆರ್‌ನಲ್ಲಿ ಅಕ್ರಮ ಆರೋಪ: ಕೇಂದ್ರ ಚುನಾವಣಾ ಆಯೋಗಕ್ಕೆ ಬಿಜೆಪಿ-ಜೆಡಿಎಸ್ ದೂರು

## ವೀಕ್ಷಕರ ನೇಮಕ, ನಿಯಮಾನುಸಾರ ಪರಿಶೀಲನೆಗೆ ಆಗ್ರಹ



**ನವದೆಹಲಿ, ಜು.7:** ಕರ್ನಾಟಕದಲ್ಲಿ ನಡೆಯುತ್ತಿರುವ ಮತಗಳ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ವ್ಯಾಪಕ ಅಕ್ರಮಗಳು ನಡೆಯುತ್ತಿವೆ ಎಂದು ಆರೋಪಿಸಿರುವ ಬಿಜೆಪಿ ಮತ್ತು ಜೆಡಿಎಸ್ ನಾಯಕರು, ಕೇಂದ್ರ ಚುನಾವಣಾ ಆಯೋಗಕ್ಕೆ ಜಂಟಿಯಾಗಿ ದೂರು ಸಲ್ಲಿಸಿದರು. ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಪ್ರತಿಪಕ್ಷ ನಾಯಕ ಆರ್. ಅಶೋಕ್, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ರಾಜ್ಯ ಸರ್ಕಾರ ಮತ್ತು ಅಧಿಕಾರಿಗಳ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಮಾತನಾಡಿ, ಮುಖ್ಯ ಚುನಾವಣಾ ಆಯುಕ್ತರನ್ನು ಭೇಟಿ ಮಾಡಿ ಎಸ್‌ಐಆರ್ ಪ್ರಕ್ರಿಯೆಯಲ್ಲಿ ನಡೆಯುತ್ತಿದೆ ಎನ್ನಲಾದ ಅಕ್ರಮಗಳ ಬಗ್ಗೆ ವಿವರಿಸಿದ್ದೇವೆ ಎಂದರು. ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಷಡ್ಯಂತ್ರ ನಡೆಸುತ್ತಿದ್ದು, ಎಸ್‌ಐಆರ್ ಪ್ರಕ್ರಿಯೆಯನ್ನು ಬುಡಮೇಲು ಮಾಡುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

ನಿಯಮಾನುಸಾರ ಮತದಾರರ ಪರಿಶೀಲನೆ ವೇಳೆ ಅಧಿಕಾರಿಗಳು ಮನೆಮನೆಗೆ ತೆರಳಿ ಅರ್ಜಿಗಳನ್ನು ವಿತರಿಸಬೇಕು. ಕನಿಷ್ಠ ಮೂರು ಬಾರಿ ಮನೆಗಳಿಗೆ ಭೇಟಿನೀಡಿ, ಮತದಾರರಿಂದಲೇ ಅರ್ಜಿಗಳನ್ನು ಭರ್ತಿ ಮಾಡಿಸಬೇಕು. ಆದರೆ ಮದರಸಾಗಳು, ಮಸೀದಿಗಳು, ದರ್ಗಾಗಳು ಹಾಗೂ ಕಾಂಗ್ರೆಸ್ ನಾಯಕರ ನಿವಾಸಗಳಲ್ಲಿ ಸಾಮೂಹಿಕವಾಗಿ ಅರ್ಜಿಗಳನ್ನು ಭರ್ತಿ ಮಾಡಲಾಗುತ್ತಿದೆ ಎಂದು ದೂರಿದರು. ಇದು ಒಂದು ರೀತಿಯ ಸಾಮೂಹಿಕ ನಕಲು ಪ್ರಕ್ರಿಯೆಯಾಗಿದೆ ಎಂದು ಆರೋಪಿಸಿದರು.

ಬೂತ್‌ಮಟ್ಟದ ಏಜೆಂಟರಿಗೆ ಸೂಕ್ತ ಮಾಹಿತಿಯನ್ನೇ ನೀಡುತ್ತಿಲ್ಲ. ಅಧಿಕಾರಿಗಳು ಉದ್ಧಟತನದಿಂದ ವರ್ತಿಸುತ್ತಿದ್ದಾರೆ. ಯಾವುದೇ ಮತಗಳು ಅಳಿಸದಂತೆ ಸರ್ಕಾರ ಸೂಚನೆ ನೀಡಿದೆ ಎಂಬ ಮಾಹಿತಿಯನ್ನೂ ಚುನಾವಣಾ ಆಯೋಗದ ಗಮನಕ್ಕೆ ತಂದಿದ್ದೇವೆ ಎಂದು ಹೇಳಿದರು. ಎಸ್‌ಐಆರ್ ಪ್ರಕ್ರಿಯೆಯನ್ನು ನ್ಯಾಯಸಮ್ಮತವಾಗಿ ನಡೆಸಲು ಕೇಂದ್ರ ಚುನಾವಣಾ ಆಯೋಗ ವೀಕ್ಷಕರನ್ನು ನೇಮಿಸಬೇಕು ಎಂದು ಒತ್ತಾಯಿಸಿದ್ದೇವೆ. ಕಾನೂನಿನ ಪ್ರಕಾರವೇ ಕ್ರಮ ಕೈಗೊಳ್ಳುವ ಭರವಸೆಯನ್ನು ಆಯೋಗ ನೀಡಿದೆ ಎಂದು ಜೋಶಿ ತಿಳಿಸಿದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮಾತನಾಡಿ, ಬಿಜೆಪಿ ಮತ್ತು ಜೆಡಿಎಸ್ ಪರವಾಗಿ ಜಂಟಿ ಮನವಿ ಪತ್ರವನ್ನು ಕೇಂದ್ರ ಚುನಾವಣಾ ಆಯೋಗಕ್ಕೆ ಸಲ್ಲಿಸಲಾಗಿದೆ ಎಂದರು. ರಾಜ್ಯ ಚುನಾವಣಾ ಆಯೋಗಕ್ಕೂ ಈಗಾಗಲೇ ದೂರು ನೀಡಲಾಗಿದ್ದು, ಇದೀಗ ಕೇಂದ್ರ ಆಯೋಗದ ಮಧ್ಯಪ್ರವೇಶ ಕೋರಲಾಗಿದೆ ಎಂದು ಹೇಳಿದರು. ಈಗಾಗಲೇ ಇಬ್ಬರು ವೀಕ್ಷಕರನ್ನು ನೇಮಿಸಲಾಗಿದೆ. ರಾಜ್ಯ ಸರ್ಕಾರ ಅಧಿಕಾರಿಗಳನ್ನು ದುರುಪಯೋಗಪಡಿಸಿಕೊಂಡು ನಕಲಿ ಮತದಾರರನ್ನು ಸೃಷ್ಟಿಸುವ ಪ್ರಯತ್ನ ನಡೆಸುತ್ತಿದೆ. ಗ್ಯಾರಂಟಿ ಯೋಜನೆಗಳು ಸ್ಥಗಿತಗೊಳ್ಳುತ್ತವೆ ಎಂಬ ಭಯ ಹುಟ್ಟಿಸಿ ಜನರನ್ನು ಅನಗತ್ಯವಾಗಿ ಗಾಬರಿಗೊಳಿಸಲಾಗುತ್ತಿದೆ ಎಂದು ಆರೋಪಿಸಿದರು. ಎಸ್‌ಐಆರ್ ಸಂಪೂರ್ಣ ನ್ಯಾಯಯುತ ಹಾಗೂ ಪಾರದರ್ಶಕವಾಗಿ ನಡೆಯಬೇಕು ಎಂಬುದೇ ತಮ್ಮ ಒತ್ತಾಯ ಎಂದು ಹೇಳಿದರು.

ಪ್ರತಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ, ಮತದಾನದ ಹಕ್ಕನ್ನು ರಕ್ಷಿಸಲು ಎಸ್‌ಐಆರ್ ನಡೆಸಲಾಗುತ್ತಿದೆ. ಆದರೆ ಸಂವಿಧಾನಬದ್ಧ ಎಸ್‌ಐಆರ್ ಬದಲಿಗೆ ಕಾಂಗ್ರೆಸ್ ಎಸ್‌ಐಆರ್ ನಡೆಯುತ್ತಿದೆ ಎಂದು ಟೀಕಿಸಿದರು. ಜಿಲ್ಲಾಧಿಕಾರಿಗಳಿಗೆ ಮೌಖಿಕ ಆದೇಶಗಳನ್ನು ನೀಡಿ ಕೆಲವು ಮತಗಳನ್ನು ಅಳಿಸದಂತೆ ಸೂಚಿಸಲಾಗಿದೆ ಎಂದು ಆರೋಪಿಸಿದ ಅವರು, ಸತ್ತವರು, ಸ್ಥಳಾಂತರಗೊಂಡವರು, ವಿದೇಶದಲ್ಲಿರುವವರು ಹಾಗೂ ಅನರ್ಹರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಬೇಕಾದರೂ, ಈ ನಿಯಮಗಳನ್ನು ಪಾಲಿಸಲಾಗುತ್ತಿಲ್ಲ ಎಂದು ಹೇಳಿದರು. ರಾಜ್ಯದಲ್ಲಿ ಜನರಿಗೆ ವಿವಿಧ ರೀತಿಯ ಆಮಿಷ ಮತ್ತು ಭಯ ಹುಟ್ಟಿಸುವ ಪ್ರಯತ್ನಗಳು ನಡೆಯುತ್ತಿವೆ. ಚುನಾವಣಾ ಆಯೋಗದ ಬಾಗಿಲು ತಟ್ಟಿದ್ದು, ಆಯೋಗ ಸೂಕ್ತವಾಗಿ ಸ್ಪಂದಿಸಿದೆ. ಎಸ್‌ಐಆರ್ ಪ್ರಕ್ರಿಯೆ ಸಂಪೂರ್ಣ ನಿಯಮಾನುಸಾರ ನಡೆಯಬೇಕು ಎಂಬುದು ನಮ್ಮ ಆಗ್ರಹ ಎಂದು ತಿಳಿಸಿದರು.

ಬೆಂಗಳೂರು ಸೇರಿದಂತೆ ರಾಜ್ಯದ ಕೆಲವು ಭಾಗಗಳಲ್ಲಿ ಬಾಂಗ್ಲಾದೇಶ ಮೂಲದ ವ್ಯಕ್ತಿಗಳಿಗೆ ಆಧಾರ್ ಹಾಗೂ ಮತದಾರರ ಗುರುತಿನ ಚೀಟಿಗಳನ್ನು ನೀಡಲಾಗಿದೆ ಎಂದು ಕಾಂಗ್ರೆಸ್ ನಾಯಕರೇ ಒಪ್ಪಿಕೊಂಡಿದ್ದಾರೆ ಎಂದು ಅಶೋಕ್ ಆರೋಪಿಸಿದರು. ಅಂತಹ ಅನರ್ಹರನ್ನು ಗುರುತಿಸಿ ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಬೇಕು ಎಂದು ಅವರು ಒತ್ತಾಯಿಸಿದರು. ಚುನಾವಣಾ ಆಯೋಗವು ಎಲ್ಲ ಆರೋಪಗಳನ್ನು ಕೂಲಂಕಷವಾಗಿ ಪರಿಶೀಲಿಸುವ ಭರವಸೆ ನೀಡಿದ್ದು, ಎಸ್‌ಐಆರ್ ಪ್ರಕ್ರಿಯೆ ಕಾನೂನುಬದ್ಧವಾಗಿ ನಡೆಯುವಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ನಾಯಕರಿಗೆ ತಿಳಿಸಿದೆ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕೇಂದ್ರ ಸಚಿವರಾದ ಪ್ರಲ್ಹಾದಜೋಶಿ, ವಿ.ಸೋಮಣ್ಣ, ವಿಧಾನಸಭೆ, ಪರಿಷತ್ತ ಪ್ರತಿಪಕ್ಷ ನಾಯಕರಾದ ಆರ್.ಅಶೋಕ್, ಚಲವಾದಿ ನಾರಾಯಣಸ್ವಾಮಿ, ವಿಧಾನಸಭೆಯ ಜೆಡಿಎಸ್ ನಾಯಕ ಸಿ.ಬಿ. ಸುರೇಶ್ ಬಾಬು, ಸಂಸದರಾದ ಎಂ.ಮಲ್ಲೇಶ್ ಬಾಬು, ಕೋಟ ಶ್ರೀನಿವಾಸ್ ಪೂಜಾರಿ, ಮಾಜಿ ಸಚಿವ ಬಂಡೆಪ್ಪ ಕಾಶಂಪುರ್, ಶಾಸಕ ಅರವಿಂದ್ ಬೆಲ್ಲದ ಮುಂತಾದವರು ನಿಯೋಗದಲ್ಲಿ ಇದ್ದರು.

## ನಿತ್ಯ ಪಂಚಾಂಗ 8.07.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ - ಜ್ಯೇಷ್ಠ ಮಾಸ

ನಿಜ ಜ್ಯೇಷ್ಠ ಬಹುಳ, ಅಷ್ಟಮಿ, ರೇವತಿ ನಕ್ಷತ್ರ, ನವಮಿ, ಕಾಲಾಷ್ಟಮಿ, ಅಂಗಾಂಬುಧೀಶ್ವರ ರಥ, ಅಗಳಿ ಗ್ರಾಮ ಆರಾಧನೆ, ಮಲ್ಲಾರಿಧೀಕ್ಷಿತರ ಪುಣ್ಯದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04-6.33 | 12.00-1.30 | 3.00-4.00 |
| ಸೋಮ | ಬೆ.7.20-9.04 | 10.30-12.00 | 1.30-12.00 |
| ಮಂಗಳ | ಮ.3.25-4.59 | 9.00-10.30 | 12.00-1.30 |
| ಬುಧ | ಮ.12.16-1.50 | 7.30-9.00 | 10.30-12.00 |
| ಗುರು | ಮ.1.50-3.29 | 6.00-7.30 | 9.00-10.30 |
| ಶುಕ್ರ | ಬೆ.10.42-12.16 | 3.00-4.30 | 7.30-9.00 |
| ಶನಿ | ಬೆ.9.07-10.41 | 1.30-3.00 | 6.00-7.30 |

# ಎಸ್‌ಐಆರ್ ಗೊಂದಲ: ಕೆಪಿಸಿಸಿ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಅಸಮಾಧಾನ




**ಬೆಂಗಳೂರು, ಜು.7:** ಬಿ.ಕೆ.ಹರಿಪ್ರಸಾದ್ ಕೆಪಿಸಿಸಿಗೆ ಅಧ್ಯಕ್ಷರಾದ ಬಳಿಕ ಇದೇ ಮೊದಲ ಬಾರಿಗೆ ಪಕ್ಷದ ಕಾರ್ಯಕಾರಿ ಸಮಿತಿ ಸದಸ್ಯರ ಸಮಾವೇಶ ನಡೆಸಿದರು.

ಅರಮನೆ ಮೈದಾನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ವೀರಪ್ಪ ಮೊಯ್ಲಿ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ನಾಯಕ ರಣದೀಪ್ ಸಿಂಗ್ ಸುರ್ಜೇವಾಲಾ, ಸಚಿವರಾದ ಸತೀಶ್ ಜಾರಕಿಹೊಳಿ, ಕೃಷ್ಣಬೈರೇಗೌಡ, ಮಾಜಿ ಸಚಿವರಾದ ಎಚ್.ಕೆ.ಪಾಟೀಲ್, ಆರ್.ವಿ. ದೇಶಪಾಂಡೆ, ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಸಭೆಯಲ್ಲಿ ಕಾಂಗ್ರೆಸ್ ನಾಯಕರು, ರಾಜ್ಯದಲ್ಲಿ ನಡೆಯುತ್ತಿರುವ ಎಸ್‌ಐಆರ್ ಗೊಂದಲಗಳ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕಾಂಗ್ರೆಸ್ ಪಕ್ಷ ಎಚ್ಚೆತ್ತುಕೊಂಡು 54 ಸಾವಿರ ಬೂತ್‌ಗಳಿಗೂ ಬಿಎಲ್‌ಎ 2ಗಳನ್ನು ನೇಮಿಸಿದೆ. ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಬಿಎಲ್‌ಎಗಳ ನೇಮಕಾತಿಯಲ್ಲಿ ನಿರ್ಲಕ್ಷ್ಯ ವಹಿಸಿವೆ. ಹೀಗಾಗಿ ಈಗ ನಡೆದಿರುವ ಎಸ್‌ಐಆರ್ ಪ್ರಕ್ರಿಯೆಗಳನ್ನು ರದ್ದುಗೊಳಿಸಬೇಕೆಂದು ಬಿಜೆಪಿ-ಜೆಡಿಎಸ್ ಆಗ್ರಹಿಸುತ್ತಿವೆ ಎಂದರು.

ಬಿಹಾರ, ಪಶ್ಚಿಮ ಬಂಗಾಳ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಬಿಜೆಪಿಗೆ ಅನುಕೂಲಕರವಾದ ಎಸ್‌ಐಆರ್ ನಡೆದಿತ್ತು. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ವ್ಯಾಪಕವಾದ ಜನಜಾಗೃತಿ ಮೂಡಿಸಿದ್ದರಿಂದ ಮತ್ತು ಬಿಎಲ್‌ಎಗಳನ್ನು ನೇಮಿಸಿದ್ದರಿಂದ ಬಿಜೆಪಿಯವರು ಅಂದುಕೊಂಡಂತೆ ಅಲ್ಪಸಂಖ್ಯಾತರ, ದಲಿತರ, ಹಿಂದುಳಿದವರ್ಗ ಹಾಗೂ ಬಡವರನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಲು ಸಾಧ್ಯವಾಗಿಲ್ಲ. ಇದರಿಂದ ಹತಾಶರಾಗಿ ಟೀಕೆ ಮಾಡುತ್ತಿದ್ದಾರೆ. ಇಲ್ಲಿ ಅವ್ಯವಹಾರಗಳು ನಡೆದಿವೆ ಎಂದು ಬಿಂಬಿಸಲು ಪ್ರಯತ್ನಿಸುತ್ತಿದ್ದಾರೆ. ತನ್ಮೂಲಕ ಕೇಂದ್ರ ಸರ್ಕಾರದ ಅಧಿಕಾರಿಗಳನ್ನೇ ಸಂಪೂರ್ಣವಾಗಿ ಬಳಸಿಕೊಂಡು ಎಸ್‌ಐಆರ್ ನಡೆಸುವ ಹುನ್ನಾರ ನಡೆದಿದೆ. ಈ ರೀತಿಯ ಸಂಚನ್ನು ಕಾಂಗ್ರೆಸ್ ಪ್ರಬಲವಾಗಿ ಎದುರಿಸಬೇಕು ಎಂದು ನಾಯಕರು ಕರೆ ನೀಡಿದರು.

ಕೋಮುವಾದಿ ಶಕ್ತಿಗಳು ಅಶಾಂತಿಯ ವಾತಾವರಣ ನಿರ್ಮಿಸಿ ರಾಜಕೀಯ ಲಾಭ ಪಡೆದುಕೊಳ್ಳಲು ಹವಣಿಸುತ್ತಿವೆ. ಈ ವಿಷಯವಾಗಿ ಕಾಂಗ್ರೆಸ್ ಕಾರ್ಯಕರ್ತರು ಕಟ್ಟೆಚ್ಚರ ವಹಿಸಬೇಕು ಎಂದು ಕರೆ ನೀಡಿದರು.

ಸಿದ್ದರಾಮಯ್ಯ ಅವರು ಕಳೆದ 8 ವರ್ಷದಲ್ಲಿ ಮುಖ್ಯಮಂತ್ರಿಯಾಗಿ ತಾವು ಕೈಗೊಂಡ ಜನಪ್ರಿಯ ಯೋಜನೆಗಳ ಬಗ್ಗೆ ವಿವರಣೆ ನೀಡಿದರು.ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೇವಾಲ ಪಕ್ಷದಲ್ಲಿನ ಒಗ್ಗಟ್ಟು ಪಾಲನೆ ಬಗ್ಗೆ ಹಿತವಚನದ ಮಾತಗಳನ್ನಾಡಿದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಕಲ್ಯಾಣ ಕರ್ನಾಟಕ ಭಾಗದ ಸಚಿವರು, ಶಾಸಕರು ಕಲಬುರಗಿ ಪ್ರವಾಸದಲ್ಲಿರುವುದರಿಂದ ಸರ್ವ ಸದಸ್ಯರ ಸಮಾವೇಶದಲ್ಲಿ ಅವರ ಗೈರುಹಾಜರಿ ಎದ್ದು ಕಾಣುತ್ತಿತ್ತು.

# ಗ್ರಾಮೀಣ ಜನರ ವಲಸೆ ತಪ್ಪಿಸಲು ಉದ್ಯಮ ಸ್ಥಾಪನೆಗೆ ತೀರ್ಮಾನ

**ನಗರಾಭಿವೃದ್ಧಿ ಸಚಿವಾಲಯದಿಂದ ಅಗತ್ಯ ತಿದ್ದುಪಡಿ ಮಾಡಲಾಗುವುದು: ಸಿಎಂ ಡಿ.ಕೆ. ಶಿವಕುಮಾರ್**



ಕಲಬುರಗಿ, ಜು.7: ನಗರಗಳತ್ತ ಜನರು ವಲಸೆ ಹೋಗುವುದನ್ನು ತಪ್ಪಿಸಲು ಎರಡು ಹಾಗೂ 3ನೇ ಹಂತದ ನಗರಗಳಲ್ಲಿ ಉದ್ಯಮಗಳ ಸೃಷ್ಟಿಗೆ ಉತ್ತೇಜನ ನೀಡಲು ಸರ್ಕಾರ ತೀರ್ಮಾನಿಸಿದೆ. ಜತೆಗೆ ಗ್ರಾಮೀಣ ಭಾಗಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಸಿಎಸ್‌ಆರ್ ಶಾಲೆಗಳ ನಿರ್ಮಾಣಕ್ಕೆ ಒತ್ತು ನೀಡುತ್ತಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು. ಕಲಬುರಗಿಯಲ್ಲಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಉದ್ಯೋಗ ಸೃಷ್ಟಿಸಲು ಉದ್ಯಮಗಳ ಆಕರ್ಷಣೆಗೆ ಕ್ರಮ. ಎರಡು ಹಾಗೂ ಮೂರನೇ ಹಂತದ ನಗರಗಳಲ್ಲಿ ಉದ್ಯಮ ಸೃಷ್ಟಿಸಲು ಉತ್ತೇಜನ ನೀಡಿ ಉದ್ಯೋಗ ಸೃಷ್ಟಿಸುವುದು ಸರ್ಕಾರದ ಗುರಿಯಾಗಿದೆ. ಗ್ರಾಮೀಣ ಜನರು ಉದ್ಯೋಗ ಅರಸಿ ನಗರಗಳತ್ತ ವಲಸೆ ಹೋಗುವುದನ್ನು ತಪ್ಪಿಸಿ ಅವರು ಇರುವ ಜಾಗದಲ್ಲೇ ಉದ್ಯೋಗ ಸೃಷ್ಟಿಸಬೇಕು ಎಂಬ ಉದ್ದೇಶದಿಂದ ಅನೇಕ ಕ್ರಮಗಳನ್ನು ಕೈಗೊಂಡಿದ್ದೇವೆ. ಕಲಕಬುರಗಿ ಸೇರಿದಂತೆ ಎರಡು ಹಾಗೂ ಮೂರನೇ ಹಂತದ ನಗರಗಳಲ್ಲಿ ಉದ್ಯಮದವರನ್ನು ಆಕರ್ಷಿಸಲು 0.6ರಷ್ಟು ಪ್ರೀಮಿಯಂ ಎಫ್‌ಎಆರ್ ಹಾಗೂ 2 ಪಟ್ಟು ಎಫ್‌ಎಆರ್ ನೀಡಲು ತೀರ್ಮಾನಿಸಿದೆ. ಇದರಿಂದ ಕಡಿಮೆ ದರದಲ್ಲಿ ಉದ್ಯಮದವರಿಗೆ ಜಾಗ ಸಿಗುವಂತಾಗುತ್ತದೆ. ಇದಕ್ಕೆ ಅಗತ್ಯ ತಿದ್ದುಪಡಿಯನ್ನು ನಗರಾಭಿವೃದ್ಧಿ ಸಚಿವಾಲಯದಿಂದ ತರಲಾಗುವುದು ಎಂದು ತಿಳಿಸಿದರು.

### ಗ್ರಾಪಂ ಮಟ್ಟದಲ್ಲಿ ಸಿಎಸ್‌ಆರ್ ಶಾಲೆ

ಶಿಕ್ಷಣಕ್ಕಾಗಿ ಗ್ರಾಮೀಣ ಭಾಗದ ಮಕ್ಕಳು ನಗರಗಳತ್ತ ವಲಸೆ ಹೋಗುವುದನ್ನು ತಪ್ಪಿಸಲು ಸಿಎಸ್‌ಆರ್ ಶಾಲೆಗಳನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆರಂಭಿಸಲು ತೀರ್ಮಾನಿ ಸಿದ್ದೇವೆ. ಕಂಪನಿಗಳು 10-15 ಕೋಟಿ ಬಂಡವಾಳ ಹಾಕಿ ನಮಗೆ ಶಾಲೆ ಕಟ್ಟಡ ಹಾಗೂ ಮೂಲಸೌಕರ್ಯ ಒದಗಿಸಿದರೆ ಸಾಕು. ಈ ರೀತಿ 2 ಸಾವಿರ ಶಾಲೆಗಳನ್ನು ನಿರ್ಮಿಸ ಲಾಗುವುದು. ಈ ಕಂಪನಿಗಳು ನಮಗೆ ಹಣ ನೀಡುವುದು ಬೇಡ. ಅವರೇ ಶಾಲೆ ನಿರ್ಮಿಸಿಕೊಡಬೇಕು. ಶಿಕ್ಷಕರ ನೇಮಕ ಪ್ರಕ್ರಿಯೆಗೆ ಪ್ರತ್ಯೇಕ ಮಾರ್ಗಸೂಚಿ ಹೊರಡಿಸಲಾಗುವುದೆಂದು ಸಿಎಂ. ಡಿ.ಕೆ. ಶಿವಕುಮಾರ್ ಹೇಳಿದರು.

### ಯುವಸೇತು ಯೋಜನೆ

ಖಾಸಗಿ ವಲಯದಲ್ಲಿ ಉದ್ಯೋಗ ನೇಮಕಾತಿ ವಿನಿಮಯ ವ್ಯವಸ್ಥೆಯನ್ನು ರೂಪಿಸಲು ಯುವ ಸೇತು ಯೋಜನೆ ರೂಪಿಸಲಾಗಿದೆ. ಯಾವುದೇ ಕಂಪನಿಗಳಲ್ಲಿ ನೇಮಕಾತಿ ಮಾಡಿಕೊಳ್ಳ ಬೇಕಾದರೆ ಈ ಉದ್ಯೋಗ ಸೇತು ಮೂಲಕ ಕೌಶಲ್ಯಾಧಾರಿತ ಯುವಕರನ್ನು ಆಯ್ಕೆ ಮಾಡಿಕೊಳ್ಳಬಹುದು. ಸರ್ಕಾರದ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಅವರಿಗೆ ಅಗತ್ಯ ತರಬೇತಿ ನೀಡಲಾಗುವುದು. ಸ್ಥಳೀಯರಿಗೆ ಇಂತಿಷ್ಟು ಪ್ರಮಾಣದಲ್ಲಿ ಆದ್ಯತೆ ನೀಡಲು ಸೂಚನೆ ನೀಡಲಾಗುವುದು. ಇದರ ಹೊರತಾಗಿ ನೇಮಕಾತಿ ಪ್ರಕ್ರಿಯೆಯಲ್ಲಿ ಸರ್ಕಾರ ಹಸ್ತಕ್ಷೇಪ ಮಾಡುವುದಿಲ್ಲ. ಇದರ ಪ್ರಮಾಣವನ್ನು ಕಂಪನಿಗಳ ಆಡಳಿತ ಮಂಡಳಿ ಸದಸ್ಯರ ಜೊತೆ ಚರ್ಚಿಸಿ ತೀರ್ಮಾನ ಮಾಡಲಾಗುವುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

# ಪ್ರಾಂತ ಪ್ರಚಾರಕರ ಸಭೆಗಾಗಿ ಬೆಳಗಾವಿಗೆ ಆಗಮಿಸಿದ ಆರೆಸ್ಸೆಸ್ ಮುಖ್ಯಸ್ಥ ಮೋಹನ್ ಭಾಗವತ್



**ಬೆಳಗಾವಿ, ಜು.7:** ಆರ್‌ಎಸ್‌ಎಸ್ ಅಖಿಲ ಭಾರತೀಯ ಪ್ರಾಂತ ಪ್ರಚಾರಕರ ಸಭೆಯಲ್ಲಿ ಭಾಗವಹಿಸಲು ರಾಷ್ಟ್ರೀಯ ಸ್ವಯಂಸೇವಕ ಸಂಘದ ಸರಸಂಘಚಾಲಕ ಮೋಹನ ಭಾಗವತ್ ಅವರು ಸೋಮವಾರ ಬೆಳಗಾವಿಗೆ ಆಗಮಿಸಿದರು. ಹೈದರಾಬಾದ್‌ನಿಂದ ವಿಶೇಷ ವಿಮಾನದಲ್ಲಿ ಬಂದಿಳಿದ ಅವರು, ಜು.14ರವರೆಗೆ ಬೆಳಗಾವಿಯಲ್ಲಿ ವಾಸ್ತವ್ಯ ಮಾಡಲಿದ್ದಾರೆ. ಜು.10ರಿಂದ 12ರವರೆಗೆ ಮೂರು ದಿನ ಸಭೆ ಆಯೋಜಿಸಿದ್ದು, ಸರಸಂಘಚಾಲಕರೊಬ್ಬರು ಇಷ್ಟು ಸುದೀರ್ಘ ದಿನಗಳ ಕಾಲ ಬೆಳಗಾವಿಯಲ್ಲಿ ತಂಗುತ್ತಿರುವುದು ಇತಿಹಾಸದಲ್ಲೇ ಇದೇ ಮೊದಲು. ಭಾಗವತ ವಾಸದ ಹಿನ್ನೆಲೆಯಲ್ಲಿ ಶಾಸ್ತ್ರೀನಗರದ ಗೂಡ್ಸ್‌ಶೆಡ್ ರಸ್ತೆಯಲ್ಲಿರುವ ಸಂಘದ ಕಚೇರಿಯ ಜಗನ್ನಾಥರಾವ್ ಜೋಶಿ ಸ್ಮಾರಕ ಭವನದ ಸುತ್ತಮುತ್ತ ತೀವ್ರ ನಿಗಾ ವಹಿಸಲಾಗಿದೆ. ಸಂಘದ ಕಚೇರಿ ಜತೆಗೆ ಉದ್ಯಮಬಾಗದ ಕ್ಲಸ್ಟರ್, ಅನಗೋಳದ ಸಂತಮೀರಾ ಶಾಲೆಯಲ್ಲಿ ಮೂರು ದಿನ ಸಭೆಗಳಾಗಲಿದ್ದು, 2 ಕಿಮೀ ವ್ಯಾಪ್ತಿಯಲ್ಲಿ ಡ್ರೋನ್ ಹಾರಾಟ ನಿಷೇಧಿಸಲಾಗಿದೆ. ಒಟ್ಟು 250 ಪ್ರತಿನಿಧಿಗಳು ಬೈಠಕ್‌ಗಳಲ್ಲಿ ಭಾಗಿಯಾಗಲಿದ್ದಾರೆ.

# ಬಸವಧರ್ಮ, ಸಂಸ್ಕೃತಿ ವಿಶ್ವ ಧರ್ಮ, ಸಂಸ್ಕೃತಿಯಾಗಬೇಕು

**ಅಖಿಲ ಭಾರತ 14ನೇ ಶರಣ ಸಾಹಿತ್ಯ ಸಮ್ಮೇಳನದಲ್ಲಿ ಸಚಿವ ಎಂ.ಬಿ.ಪಾಟೀಲ್ ಆಶಯ**




**ಬೆಂಗಳೂರು, ಜು.7:** 12ನೇ ಶತಮಾನದಲ್ಲಿ ಬಸವಾದಿ ಶರಣರು ತಮ್ಮ ವಚನಗಳ ಮೂಲಕ ಸಮಾಜದಲ್ಲಿ ಬೃಹತ್ ಸಾಮಾಜಿಕ ಕ್ರಾಂತಿಗೆ ನಾಂದಿ ಹಾಡಿದರು. ಕಾರ್ಲ್‌ಮಾರ್ಕ್ಸ್ ಸಮಾಜವಾದದ ಪರಿಕಲ್ಪನೆಯನ್ನು ಜಗತ್ತಿಗೆ ಪ್ರತಿಪಾದಿಸುವುದಕ್ಕೂ ಸುಮಾರು 800 ವರ್ಷಗಳ ಮುನ್ನವೇ ಬಸವಣ್ಣನವರು ಸರ್ವ ಸಮಾನತೆಯ ತತ್ವಗಳನ್ನು ಬೋಧಿಸಿದ್ದರು. ಕಾಯಕ ಮತ್ತು ದಾಸೋಹದ ಮೌಲ್ಯಗಳನ್ನು ಸಮಾಜದಲ್ಲಿ ಬಿತ್ತಿ ಬೆಳೆಸಿದ ಮಹಾನ್ ಶರಣರ ಚಿಂತನೆಗಳು ಇಂದಿಗೂ ಅತ್ಯಂತ ಪ್ರಸ್ತುತವಾಗಿವೆ ಎಂದು ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ. ವಿಜಯನಗರದಲ್ಲಿ ನಡೆಯುತ್ತಿರುವ ಅಖಿಲ ಭಾರತ 14ನೇ ಶರಣ ಸಾಹಿತ್ಯ ಸಮ್ಮೇಳನದಲ್ಲಿ ಮಾತನಾಡಿ, ಬಸವ ಧರ್ಮ ಜಗದ ಧರ್ಮವಾಗಬೇಕು; ಬಸವ ಸಂಸ್ಕೃತಿ ವಿಶ್ವಸಂಸ್ಕೃತಿಯಾಗಬೇಕು. ಶರಣರ ವಚನಗಳು ಹಾಗೂ ತತ್ವಚಿಂತನೆಗಳು ಮುಂದಿನ ಪೀಳಿಗೆಗೂ ತಲುಪುವಂತೆ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ತಿಳಿಸಿದ್ದಾರೆ.

ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರಮಹಾಸ್ವಾಮಿಗಳವರ ಸಾನ್ನಿಧ್ಯ, ಸಿದ್ದಗಂಗಾ ಮಠದ ಸಿದ್ಧಲಿಂಗ ಮಹಾಸ್ವಾಮಿಗಳ ಉಪಸ್ಥಿತಿ ಹಾಗೂ ನಾಡೋಜ, ಶತಮಾನದ ಅಂಚಿನಲ್ಲಿರುವ ಜ್ಞಾನತಪಸ್ವಿ ಡಾ. ಗೊ.ರು. ಚನ್ನಬಸಪ್ಪ ಅವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾದ ಅಖಿಲ ಭಾರತ 14ನೇ ಶರಣ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿದ್ದಕ್ಕೆ ಎಂ.ಬಿ. ಪಾಟೀಲ್ ಸಂತಸ ವ್ಯಕ್ತಪಡಿಸಿದ್ದಾರೆ. ಕಾರ್ಯಕ್ರಮದಲ್ಲಿ ನಾಡು,ನುಡಿ ಮತ್ತು ಸಮಾಜದ ಒಳಿತನ್ನು ಬಯಸಿ ಹಲವು ನಿರ್ಣಯಗಳನ್ನು ಕೈಗೊಳ್ಳಲಾಯಿತು. ಕಲ್ಯಾಣ ಸಂಗಮ, ಮಹಾಮನೆ ಕೃತಿಗಳನ್ನು ಲೋಕಾರ್ಪಣೆಗೊಳಿಸಲಾಯಿತು.

ಈ ವೇಳೆ ಶಾಸಕ ಎಂ. ಕೃಷ್ಣಪ್ಪ, ಆಲಮಟ್ಟಿಯ ಡಾ. ರುದ್ರಮುನಿ ಸ್ವಾಮಿಗಳು, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಸಿ.ಸೋಮಶೇಖರ್, ಬೆಂಗಳೂರು ನಗರ ಘಟಕದ ಅಧ್ಯಕ್ಷ ನಾಗರಾಜಮೂರ್ತಿ, ಹಿರಿಯ ಸಾಹಿತಿ ಡಾ. ಮರುಳಸಿದ್ದಪ್ಪ, ಶಶಿಕಲಾ ವೀರಯ್ಯ ಸ್ವಾಮಿ, ಪ್ರೊ. ಎಸ್.ಜಿ.ಸಿದ್ದರಾಮಯ್ಯ, ನ್ಯಾಯವಾದಿ ಚಂದ್ರಮೌಳಿ, ಬಸವರಾಜ ಬಿಂದು, ಮಾಜಿ ಶಾಸಕ ರುದ್ರಣ್ಣಗೌಡರು, ಮಾಜಿ ಮೇಯರ್ ಗಂಗಾಂಬಿಕೆ ಮಲ್ಲಿಕಾರ್ಜುನ್, ಮಾಜಿ ಉಪಮೇಯರ್ ಪುಟ್ಟರಾಜು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ್ದ ನೂರಾರು ಶರಣ-ಶರಣೆಯರು, ಬಸವಭಕ್ತರು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡು ಸಮ್ಮೇಳನವನ್ನು ಯಶಸ್ವಿಗೊಳಿಸಿದರು. ಬೆಂಗಳೂರು ವಿಜಯನಗರದ ಬಸವೇಶ್ವರ ಸುಜ್ಞಾನ ಕಲ್ಯಾಣ ಮಂಟಪದಲ್ಲಿ ನಡೆಯುತ್ತಿರುವ ಈ ಸಮ್ಮೇಳನ ನಾಳೆಯೂ ಮುಂದುವರಿಯಲಿದೆ.

# ಅನಕ್ಷರಸ್ಥರಿಗೆ ನೆರವಾಗಲು ಬಿಎಲ್‌ಓಗಳು ಅರ್ಜಿ ಭರ್ತಿ ಮಾಡುತ್ತಿದ್ದಾರೆ: ಜಾರ್ಜ್



**'ಎಸ್‌ಐಆರ್‌ನಲ್ಲಿ ಅಕ್ರಮ ನಡೆಯುತ್ತಿದೆ ಎಂಬ ಬಿಜೆಪಿ-ಜೆಡಿಎಸ್ ನಾಯಕರ ಆರೋಪಕ್ಕೆ ಸಚಿವ ಕೆ.ಜೆ. ಜಾರ್ಜ್ ಪ್ರತಿಕ್ರಿಯೆ'**

**ಬೆಂಗಳೂರು, ಜು.7:** ರಾಜ್ಯದಲ್ಲಿ ನಡೆಯುತ್ತಿರುವ ಚುನಾವಣೆ ಆಯೋಗದ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮ ನಡೆಯುತ್ತಿದೆ ಎಂದು ಬಿಜೆಪಿ-ಜೆಡಿಎಸ್ ನಾಯಕರ ಆರೋಪಕ್ಕೆ ಪ್ರತಿಕ್ರಿಯೆ ನೀಡಿರುವ ಸಚಿವ ಕೆ.ಜೆ.ಜಾರ್ಜ್, ಅನಕ್ಷರಸ್ಥರಿಗೆ ಸಹಾಯ ಆಗಲಿ ಎಂದು ಬಿಎಲ್‌ಓಗಳು ಫಾರಂ ತುಂಬುತ್ತಿದ್ದಾರೆ, ತಪ್ಪೇನಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ.

ಹೊಸಪೇಟೆಯಲ್ಲಿ ಸುದ್ದಿಗಾರ ರೊಂದಿಗೆ ಮಾತನಾಡಿರುವ ಅವರು, ಪಶ್ಚಿಮ ಬಂಗಾಳ, ಬಿಹಾರ ಸೇರಿ ಹಲವು ರಾಜ್ಯಗಳಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆದಿದೆ. ಅಲ್ಲಿ ಲಕ್ಷಾಂತರ ಜನರ ಹೆಸರನ್ನು ಪಟ್ಟಿಯಿಂದ ಡಿಲೀಟ್ ಮಾಡಿದ್ದರು. ಹಾಗಾಗಿ ನಮ್ಮಲ್ಲೂ ಆ ರೀತಿ ಆಗಬಾರದು ಎಂಬ ಉದ್ದೇಶದಿಂದ ನಾವು ಎಚ್ಚರಿಕೆಯಿಂದ ಇದ್ದೇವೆ. ಆ ರಾಜ್ಯಗಳಲ್ಲಿ ಮಾಡಿದಂತೆ ಇಲ್ಲೂ ಕುತಂತ್ರ ಮಾಡಲು ಯೋಜಿಸಿದ್ದರು. ಆದರೆ ನಾವು ಅದನ್ನು ತಡೆದ ಹಿನ್ನೆಲೆ ಈಗ ಅಕ್ರಮ ಎಂದು ಆರೋಪ ಮಾಡುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಎಸ್‌ಐಆರ್ ನಡೆಸುತ್ತಿರೋದು ಚುನಾವಣಾ ಆಯೋಗ. ಅದರ ಪ್ರಕ್ರಿಯೆಯಲ್ಲಿ ಮೂರು ಪಕ್ಷಗಳು ಭಾಗಿಯಾಗಿವೆ. ಕಾಂಗ್ರೆಸ್, ಬಿಜೆಪಿ ಜೆಡಿಎಸ್ ಸೇರಿ ಎಲ್ಲಾ ರಾಜಕೀಯ ಪಕ್ಷಗಳು ಬಿಎಲ್‌ಓ ಗಳು ಸಹಕಾರ ಮಾಡ್ತಿದ್ದಾರೆ. ಕೆಲವು ಪ್ರದೇಶಗಳಲ್ಲಿ ಅನಕ್ಷರಸ್ತ ಅನಕ್ಷರಸ್ಥರಿಗೆ ಸಹಾಯ ಆಗಲಿ ಎಂದು ಬಿಎಲ್‌ಓಗಳು ಫಾರಂ ತುಂಬುವ ಕೆಲಸ ಮಾಡ್ತಿದ್ದಾರೆ. ಅದರಲ್ಲಿ ಯಾವುದೇ ತಪ್ಪಿಲ್ಲ ಎಂದು ಹೇಳಿದ್ದಾರೆ.

# ಹೊಲಿಗೆ ಯಂತ್ರ ಖರೀದಿಯಲ್ಲಿ ಭ್ರಷ್ಟಾಚಾರ: ವಾಲ್ಮೀಕಿ ನಿಗಮದ ಬಳಿಕ ದೇವರಾಜ ಅರಸು ನಿಗಮದಲ್ಲೂ ಗೋಲ್‌ಮಾಲ್

**ನಿಷ್ಪಕ್ಷಪಾತ ತನಿಖೆಗೆ ವಿಪಕ್ಷ ನಾಯಕ ಆರ್. ಅಶೋಕ್ ಒತ್ತಾಯ**

**ಬೆಂಗಳೂರು, ಜು.7:** ವಾಲ್ಮೀಕಿ ನಿಗಮದ ಬಳಿಕ ಇದೀಗ ದೇವರಾಜ ಅರಸು ನಿಗಮದಲ್ಲೂ ಕೇಳಿಬರುತ್ತಿರುವ ಅಕ್ರಮದ ಆರೋಪಗಳು ರಾಜ್ಯ ಕಾಂಗ್ರೆಸ್ ಸರ್ಕಾರದ ಬ್ರಹ್ಮಾಂಡ ಭ್ರಷ್ಟಾಚಾರಕ್ಕೆ ಮತ್ತೊಂದು ನಿದರ್ಶನವಾಗಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತಂತೆ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ಹಿಂದುಳಿದ ಸಮುದಾಯಗಳ ಕಲ್ಯಾಣಕ್ಕಾಗಿ ಬಡ ಮಹಿಳೆಯರಿಗೆ ತಲುಪಬೇಕಿದ್ದ ಹೊಲಿಗೆ ಯಂತ್ರ ಖರೀದಿಯ ಮೇಲೆಯೂ ಭ್ರಷ್ಟಾಚಾರದ ಆರೋಪಗಳು ಕೇಳಿಬರುತ್ತಿರುವುದು ಅತ್ಯಂತ ಖಂಡನೀಯ. ಜನರ ಕಲ್ಯಾಣಕ್ಕಾಗಿ ರೂಪಿಸಲಾದ ಯೋಜನೆಗಳಲ್ಲೇ ಗೋಲ್‌ಮಾಲ್ ನಡೆದಿರುವ ಆರೋಪಗಳಿಗೆ ರಾಜ್ಯ ಸರ್ಕಾರ ಉತ್ತರಿಸಲೇಬೇಕು. ಸತ್ಯಾಸತ್ಯತೆಯನ್ನು ಬಹಿರಂಗಪಡಿಸಿ, ತಪ್ಪಿತಸ್ಥರ ವಿರುದ್ಧ ನಿಷ್ಪಕ್ಷಪಾತ ತನಿಖೆ ನಡೆಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

**10 ಸಾವಿರ ಮೌಲ್ಯದ ಯಂತ್ರಕ್ಕೆ 17 ಸಾವಿರ ನಿಗದಿ**

ದೇವರಾಜ ಅರಸು ನಿಗಮದಲ್ಲಿ ಭಾರೀ ಗೋಲ್‌ಮಾಲ್ ನಡೆದಿರುವ ಬಗ್ಗೆ ವ್ಯಕ್ತಿಯೊಬ್ಬರು ಸರ್ಕಾರದ ಮುಖ್ಯಕಾರ್ಯದರ್ಶಿಗೆ ದೂರು ನೀಡಿದ್ದಾರೆ. ಹೊಲಿಗೆ ಯಂತ್ರ ಖರೀದಿ ಟೆಂಡರ್‌ನಲ್ಲಿ ಕಿಕ್‌ಬ್ಯಾಕ್ ಪಡೆದಿರುವ ಆರೋಪ ಕೇಳಿಬಂದಿದೆ. ರಾಜ್ಯದ ವ್ಯಕ್ತಿಯೊಬ್ಬರಿಗೆ ನೀಡಿದ ಟೆಂಡರ್‌ನಲ್ಲಿ ಅಕ್ರಮ ಎಸಗಲಾಗಿದೆ ಎಂದು ಹೇಳಲಾಗುತ್ತಿದೆ. ಹತ್ತು ಸಾವಿರ ರೂ. ಮೌಲ್ಯದ ಹೊಲಿಗೆ ಯಂತ್ರಕ್ಕೆ ಹದಿನೇಳು ಸಾವಿರ ರೂ. ನಿಗದಿಪಡಿಸಲಾಗಿದೆ. ಟೆಂಡರ್ ಪ್ರಕ್ರಿಯೆ ಪಾರದರ್ಶಕವಾಗಿ ನಡೆದಿಲ್ಲ. ಹೀಗಾಗಿ ಇದರಿಂದ ಸುಮಾರು ಐದಾರು ಕೋಟಿ ರೂ. ಹಗರಣ ಆಗಿದೆ ಎಂದು ಪರಮೇಶ್ ಎಂಬುವವರು ಸರ್ಕಾರದ ಮುಖ್ಯಕಾರ್ಯದರ್ಶಿಗೆ ದೂರು ನೀಡಿದ್ದಾರೆ. ಜೊತೆಗೆ ಈ ಕೂಡಲೇ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

# ಪಕ್ಷದ ಶಿಸ್ತು ಉಲ್ಲಂಘಿಸಿದ ಸುಧಾಕರ್, ವಿಶ್ವನಾಥ್, ರೇಣುಕಾಚಾರ್ಯಗೆ ನೋಟೀಸ್ ಜಾರಿಗೆ ತೀರ್ಮಾನ

**ಬೆಂಗಳೂರು, ಜು.7:** ಪಕ್ಷದ ಶಿಸ್ತು ಉಲ್ಲಂಘಿಸಿದ ಹಿನ್ನೆಲೆಯಲ್ಲಿ ಯಲಹಂಕ ಶಾಸಕ ಎಸ್.ಆರ್. ವಿಶ್ವನಾಥ್ ಮತ್ತು ಚಿಕ್ಕಬಳ್ಳಾಪುರ ಸಂಸದ ಡಾ. ಕೆ. ಸುಧಾಕರ್ ಮತ್ತು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಅವರಿಗೆ ನೋಟಿಸ್ ಜಾರಿ ಮಾಡಿ ವಿವರಣೆ ಪಡೆಯಲು ರಾಜ್ಯ ಬಿಜೆಪಿ ಕೋರ್ ಸಮಿತಿ ತೀರ್ಮಾನಿಸಿದೆ. ಭಾನುವಾರ ನಡೆದ ರಾಜ್ಯ ಬಿಜೆಪಿ ಕೋರ್ ಸಮಿತಿ ಸಭೆಯು ಸುಮಾರು ಎರಡೂವರೆ ಗಂಟೆ ಕಾಲ ಬಿಜೆಪಿಯಲ್ಲಿನ ಬೆಳವಣಿಗೆಗಳ ಕುರಿತು ಮಹತ್ವದ ಚರ್ಚೆ ನಡೆಯಿತು. ಪಕ್ಷದ ಆಂತರಿಕ ವಿಷಯದ ಕುರಿತು ಹೇಳಿಕೆ ನೀಡಿ ಪಕ್ಷಕ್ಕೆ ಮುಜುಗರ ತಂದಿದ್ದಕ್ಕಾಗಿ ಅವರಿಗೆ ನೋಟಿಸ್ ಜಾರಿ ಮಾಡಿದ್ದಾರೆ. ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ಅವರ ಒಕ್ಕಲಿಗ ಸಮುದಾಯವು ಹಳೆಯ ಮೈಸೂರು ಪ್ರದೇಶದಲ್ಲಿ ಪ್ರಭಾವಿಯಾಗಿಲ್ಲ ಎಂದು ಎಸ್.ಆರ್.ವಿಶ್ವನಾಥ್ ಹೇಳಿದ್ದರು ಎಂದು ಮೂಲಗಳು ತಿಳಿಸಿವೆ. ಶಾಸಕರನ್ನು ನಿರ್ಲಕ್ಷಿಸಿ ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ಆಯೋಜಿಸಿದ್ದರಿಂದ, ಈ ಪ್ರದೇಶದ ಮೇಲೆ ಹಿಡಿತ ಸಾಧಿಸುವ ಸಂಬಂಧ ಎಸ್.ಆರ್.ವಿಶ್ವನಾಥ್ ಮತ್ತು ಸುಧಾಕರ್ ನಡುವಿನ ಜಗಳ ನಡೆಯುತ್ತಿದೆ ಎಂದು ಸದಾನಂದಗೌಡ ಕಿಡಿಕಾರಿದ್ದಾರೆ.

# ಮಾಣಿ-ಸಂಪಾಜೆ ರಸ್ತೆ ದುರಸ್ತಿಗೆ ಕೇಂದ್ರ ಸರ್ಕಾರದಿಂದ 49.22 ಕೋಟಿ ರೂ. ವಿಶೇಷ ಅನುದಾನ ಮಂಜೂರು

**ದ.ಕ.ಜಿಲ್ಲೆಯ ಪ್ರಮುಖ ಹೆದ್ದಾರಿ ಯೋಜನೆಗಳ ತ್ವರಿತ ಅನುಷ್ಠಾನಕ್ಕೆ ಸಚಿವಾಲಯ ಕಾರ್ಯದರ್ಶಿ ಭೇಟಿಯಾದ ದ.ಕ. ಸಂಸದ ಕ್ಯಾ.ಚೌಟ**



ನವದೆಹಲಿ, ಜು.7: ದಕ್ಷಿಣ ಕನ್ನಡ ಹಾಗೂ ಒಳನಾಡು ಪ್ರದೇಶಗಳ ಸಂಪರ್ಕ ಕೊಂಡಿಯಾಗಿರುವ ರಾ.ಹೆ. 275ರ ಮಾಣಿ-ಸಂಪಾಜೆ ಹೆದ್ದಾರಿಯ ದುರಸ್ತಿ ಕಾಮಗಾರಿಗಳಿಗಾಗಿ ಕೇಂದ್ರ ಸರ್ಕಾರವು 49.22 ಕೋಟಿ ರೂ.ಗಳ ವಿಶೇಷ ಅನುದಾನ ಮಂಜೂರು ಮಾಡಿದೆ. ಇದರ ಬೆನ್ನಲ್ಲೇ ಈ ಹೆದ್ದಾರಿಯನ್ನು ಚತುಷ್ಪಥವಾಗಿ ಮೇಲ್ದರ್ಜೆಗೇರಿಸುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ಪ್ರಕ್ರಿಯೆ ತ್ವರಿತಗೊಳಿಸುವಂತೆ ಕೋರಿ ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಮಂಗಳವಾರ ಹೆದ್ದಾರಿ ಸಚಿವಾಲಯದ ಕಾರ್ಯದರ್ಶಿ ಬಿ. ಉಮಾಶಂಕರ್ ಅವರನ್ನು ಭೇಟಿಯಾಗಿ ಮಹತ್ವದ ಚರ್ಚೆ ನಡೆಸಿದ್ದಾರೆ.

ನವದೆಹಲಿಯಲ್ಲಿ ಸಚಿವಾಲಯದ ಕಾರ್ಯದರ್ಶಿಯವನ್ನು ಮಂಗಳವಾರ ಖುದ್ದು ಭೇಟಿ ಮಾಡಿರುವ ಸಂಸದರು, ದಕ್ಷಿಣ ಕನ್ನಡ ಜಿಲ್ಲೆಯ ಪ್ರಮುಖ ರಸ್ತೆ ಮೂಲಸೌಕರ್ಯಗಳನ್ನು ಮತ್ತಷ್ಟು ಬಲಪಡಿಸಲು ನಿಟ್ಟಿನಲ್ಲಿ ಸುಧೀರ್ಘ ಸಮಾಲೋಚನೆ ನಡೆಸಿದ್ದಾರೆ. ಕರಾವಳಿ ಮತ್ತು ಒಳನಾಡು ಪ್ರದೇಶಗಳ ನಡುವಿನ ಸಂಪರ್ಕವನ್ನು ಸುಧಾರಿಸಿ ವಾಹನ ಸಂಚಾರ ಸುಗಮಗೊಳಿಸುವ ಅತ್ಯಂತ ನಿರ್ಣಾಯಕ ಹಾಗೂ ದೀರ್ಘಕಾಲದಿಂದ ಬಾಕಿ ಉಳಿದಿರುವ ಓಊ-275ರ ಮಾಣಿ-ಸಂಪಾಜೆ ರಸ್ತೆಯ ಮೇಲ್ದರ್ಜೀಕರಣ ಯೋಜನೆಗೆ ಶೀಘ್ರದಲ್ಲೇ ಅಲೈನ್‌ಮೆಂಟ್ ಅನುಮೋದನೆ ಮತ್ತು ಹಾಗೂ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕಾರ್ಯದರ್ಶಿ ಉಮಾಶಂಕರ್ ಅವರನ್ನು ಒತ್ತಾಯಿಸಿದ್ದಾರೆ. ಈ ಮಾರ್ಗದಲ್ಲಿ ಸಂಚಾರ ಸುರಕ್ಷತೆ ಹೆಚ್ಚಿಸಲು ಹಾಗೂ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸುವ ಮೂಲಕ ಪ್ರಾದೇಶಿಕ ಆರ್ಥಿಕ ಬೆಳವಣಿಗೆಗೆ ಈ ಯೋಜನೆ ಕಾಲಮಿತಿಯೊಳಗೆ ಅನುಷ್ಠಾನಗೊಳ್ಳಬೇಕಾದ ಅತ್ಯಗತ್ಯತೆಯಿದೆ ಎಂದು ಕ್ಯಾ.ಚೌಟ ಇದೇ ಸಂದರ್ಭದಲ್ಲಿ ಕಾರ್ಯದರ್ಶಿಗಳಿಗೆ ಮನವರಿಕೆ ಮಾಡಿದ್ದಾರೆ.

ಇದೇ ವೇಳೆ, ಮಂಗಳೂರು -ಬೆಂಗಳೂರು ಎಕ್ಸ್‌ಪ್ರೆಸ್ ವೇಗೆ ಸಂಬಂಧಿಸಿದಂತೆಯೂ ಚರ್ಚಿಸಿದ್ದು, ಈ ಯೋಜನೆಯ ಮಹತ್ವದ ಭಾಗವಾಗಿರುವ ಶಿರಾಡಿ ಘಾಟ್ ವಿಭಾಗದ ನೂತನ ರಸ್ತೆ ವಿನ್ಯಾಸಕ್ಕೆ ಅಲೈನ್‌ಮೆಂಟ್ ಅಪ್ರೂವಲ್ ಕಮಿಟಿ ಅನುಮೋದನೆಯನ್ನು ಕ್ಯಾ. ಚೌಟ ಶ್ಲಾಘಿಸಿದ್ದಾರೆ.

ಪ್ರಸ್ತುತ ಈ ಯೋಜನೆಯು DPR ತಯಾರಿ ಹಂತದಲ್ಲಿದ್ದು, ಇದರೊಂದಿಗೆ ಪರಿಸರ, ಅರಣ್ಯ ಮತ್ತು ವನ್ಯಜೀವಿ ಇಲಾಖೆ ಅನುಮತಿ ಪಡೆಯುವ ಪ್ರಕ್ರಿಯೆಗಳು ಕೂಡ ಪ್ರಗತಿಯಲ್ಲಿವೆ.

ದಕ್ಷಿಣ ಕನ್ನಡದ ರಸ್ತೆಗಳ ಮೂಲಸೌಕರ್ಯ ಅಭಿವೃದ್ಧಿಯ ಜೊತೆಗೆ ಮಂಗಳೂರು- ಬೆಂಗಳೂರು ನಡುವಿನ ಸಂಪರ್ಕವನ್ನು ಇನ್ನಷ್ಟು ಬಲಪಡಿಸುವುದು ಪ್ರಮುಖ ಆದ್ಯತೆಗಳಲ್ಲಿ ಒಂದಾಗಿದೆ ಎಂದು ಪುನರುಚ್ಚರಿಸಿದ ಸಂಸದರು, ಜಿಲ್ಲೆಯ ಹಾಗೂ ಕರಾವಳಿ ಪ್ರದೇಶದ ಹಿತದೃಷ್ಟಿಯಿಂದ ಈ ನಿರ್ಣಾಯಕ ಮೂಲಸೌಕರ್ಯ ಯೋಜನೆಗಳನ್ನು ಸಮಯಕ್ಕೆ ಸರಿಯಾಗಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದ ಸಂಬಂಧಪಟ್ಟ ಸಚಿವಾಲಯಗಳ ಜತೆಗೆ ನಿರಂತರ ಫಾಲೋಅಪ್ ಮಾಡುವುದಾಗಿ ಭರವಸೆ ನೀಡಿದ್ದಾರೆ. ಭೇಟಿ ಬಳಿಕ ಪ್ರತಿಕ್ರಿಯಿಸಿದ ಸಂಸದ ಕ್ಯಾ.ಚೌಟ ಅವರು, ಹೆಚ್ಚಿನ ಜನರು "ಬ್ಯಾಕ್ ಟು ಊರಿಗೆ" ಬರಬೇಕಾದರೆ ನಾವು ಮೊದಲನೆಯದಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಿಶ್ವದರ್ಜೆಯ ಸಂಪರ್ಕ ವ್ಯವಸ್ಥೆ ಕಲ್ಪಿಸಬೇಕು.

ಉತ್ತಮ ರಸ್ತೆ ಸಂಪರ್ಕವೂ, ಹೂಡಿಕೆ, ಆರ್ಥಿಕ ಮತ್ತು ಉದ್ಯೋಗ ಅವಕಾಶಗಳಿಗೆ ಹೆಬ್ಬಾಗಿಲುಗಳಾಗಿವೆ. ಇವು ದಕ್ಷಿಣ ಕನ್ನಡದಲ್ಲಿ ವಾಸಿಸಲು, ಕೆಲಸ ಮಾಡಲು ಮತ್ತು ಉತ್ತಮ ಭವಿಷ್ಯವನ್ನು ನಿರ್ಮಿಸಲು ಸೂಕ್ತವಾದ ಸ್ಥಳವನ್ನಾಗಿ ಮಾಡುತ್ತವೆ. ಅದಕ್ಕಾಗಿಯೇ ಈ ಯೋಜನೆಗಳು ಸಾಕಾರಗೊಳ್ಳುವವರೆಗೆ ನಾನು ನಿರಂತರವಾಗಿ ಶ್ರಮಿಸಲು ಬದ್ಧನಾಗಿದ್ದೇನೆ" ಎಂಬುದನ್ನು ಅವರು ಒತ್ತಿ ಹೇಳಿದ್ದಾರೆ.

### ಮಾಣಿ-ಸಂಪಾಜೆ ಹೆದ್ದಾರಿಯ ದುರಸ್ತಿಗಾಗಿ 49.22 ಕೋಟಿ ವಿಶೇಷ ಅನುದಾನ

ದ.ಕ. ಸಂಸದರ ನಿರಂತರ ಪ್ರಯತ್ನದ ಫಲವಾಗಿ, ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯವು ಮಾಣಿ-ಸಂಪಾಜೆ ವಿಭಾಗದ ಒಟ್ಟು 71.60 ಕಿ.ಮೀ. ರಸ್ತೆಯ ವಿಶೇಷ ತುರ್ತು ದುರಸ್ತಿ ಕಾಮಗಾರಿಗಾಗಿ ಇಪಿಸಿ ಮಾದರಿಯಲ್ಲಿ ಒಟ್ಟು 49.22 ಕೋಟಿ ರೂ.ಗಳ ವಿಶೇಷ ಅನುದಾನವನ್ನು ಮಂಜೂರು ಮಾಡಿದೆ. ವಾಹನಗಳ ಸುಗಮ ಮತ್ತು ಸುರಕ್ಷಿತ ಸಂಚಾರಕ್ಕಾಗಿ ಇಡೀ ರಸ್ತೆಗೆ 40 ಮಿ.ಮೀ ದಪ್ಪದ ಬಿಟುಮಿನಸ್, ರಸ್ತೆ ಇಕ್ಕೆಲಗಳ ನಿರ್ವಹಣೆ, ಸಂಚಾರ ಸೂಚಕ ಫಲಕಗಳು ಮತ್ತು ರೋಡ್ ಮಾರ್ಕಿಂಗ್ ಸೇರಿದಂತೆ ಅಗತ್ಯ ಅಭಿವೃದ್ಧಿ ಕಾಮಗಾರಿಗಳು ನಡೆಯುವ ಸಾಧ್ಯತೆ ಇದ್ದು, ಸಚಿವಾಲಯದಿಂದ ಆರ್ಥಿಕ ಮಂಜೂರಾತಿ ಮತ್ತು ಟೆಂಡರ್ ದಾಖಲೆಗಳ ಅನುಮೋದನೆ ಸಿಕ್ಕ ತಕ್ಷಣವೇ ಅತ್ಯಂತ ಶೀಘ್ರದಲ್ಲಿ ಟೆಂಡರ್ ಕರೆಯಲಾಗುವುದು. ಇದರ ಜೊತೆಯಲ್ಲೇ, ಈ ಹೆದ್ದಾರಿಯನ್ನು ಪೇವ್ಡ್ ಶೋಲ್ಡರ್ ಒಳಗೊಂಡ ಚತುಷ್ಪಥ (4-ಲೇನ್) ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸುವ ಮಹತ್ವದ ಯೋಜನೆಯನ್ನು ಈಗಾಗಲೇ 2026-27ರ ವಾರ್ಷಿಕ ಯೋಜನೆಯಲ್ಲಿ ಸೇರಿಸಲಾಗಿದ್ದು, ಪ್ರಸ್ತುತ ಇದರ ವಿಸ್ತೃತ ಯೋಜನಾ ವರದಿ ಸಿದ್ಧತೆಯ ಹಂತದಲ್ಲಿದ್ದು ಶೀಘ್ರದಲ್ಲೇ ರಸ್ತೆ ವಿನ್ಯಾಸಕ್ಕೆ ಅನುಮೋದನೆ ಸಿಗುವ ನಿರೀಕ್ಷೆಯಿದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಪರಿಸ್ಥಿತಿ ಅವಲೋಕಿಸಿ ಬರಪೀಡಿತ ಪ್ರದೇಶ ಘೋಷಣೆ

## ಸರಕಾರದಿಂದ ಜನರಿಗೆ ನ್ಯಾಯ ಒದಗಿಸುವ ಕೆಲಸ: ಸಿಎಂ ಡಿ.ಕೆ. ಶಿವಕುಮಾರ್



**ಕಲಬುರಗಿ, ಜು.7:** ಬರಗಾಲ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲು ಕಾನೂನು ಚೌಕಟ್ಟಿದೆ. ರಾಜ್ಯದ ಎಲ್ಲಾ ಭಾಗಗಳ ಪರಿಸ್ಥಿತಿ ಪರಿಶೀಲಿಸಿ ನಂತರ ಘೋಷಣೆ ಮಾಡಲಾಗುವುದು ಎಂದು ಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ಕಲಬುರಗಿ ಸರ್ಕಾರಿ ಅತಿಥಿ ಗೃಹದ ಆವರಣದಲ್ಲಿ ಮಾಧ್ಯಮಗಳ ಜತೆ ಮಂಗಳವಾರ ಮಾತನಾಡಿದ ಅವರು, ಬರಗಾಲ ಪರಿಸ್ಥಿತಿ ಅವಲೋಕಿಸಲು ಕಲ್ಯಾಣ ಕರ್ನಾಟಕ ಭಾಗಕ್ಕೆ ಬಂದಿದ್ದೇನೆ. ಇಲ್ಲಿನ ಜನರು ಮತ್ತು ಜನಪ್ರತಿನಿಧಿಗಳನ್ನು ಭೇಟಿ ಮಾಡಿದ್ದೇನೆ. ಇಲ್ಲಿನ ಪರಿಸ್ಥಿತಿಯ ಅವಲೋಕನಕ್ಕೆ ಸಭೆ ನಡೆಸುತ್ತಿದ್ದೇನೆ. ಅದೇರೀತಿ ಎರಡು ಮೂರು ದಿನ ಬಿಟ್ಟು ಬೆಳಗಾವಿಗೂ ಭೇಟಿ ನೀಡುತ್ತಿದ್ದೇನೆ ಎಂದರು.

ಸಮಸ್ಯೆ ಬಗೆಹರಿಸಬೇಕು ಎಂದು ಜನರು ಬೇಡಿಕೆಗಳನ್ನು ಮಂಡಿಸಿದ್ದಾರೆ. ಅವರ ಸಮಸ್ಯೆ ಆಲಿಸಲು ಹೊಸದಾಗಿ ಪ್ರಜಾಸೇವಾ ಇಲಾಖೆ ಸ್ಥಾಪಿಸಿ, ಸಚಿವರನ್ನು ನೇಮಕ ಮಾಡಿ, ಜನರ ಅರ್ಜಿಗಳನ್ನು ಪರಿಶೀಲಿಸಿ ಅವರಿಗೆ ಸಾಧ್ಯವಾದಷ್ಟು ನ್ಯಾಯ ಒದಗಿಸುವ ಕೆಲಸವನ್ನು ಸರ್ಕಾರ ಮಾಡುತ್ತದೆ ಎಂದರು.

ಇದಕ್ಕೂ ಮೊದಲು ಮುಖ್ಯಮಂತ್ರಿಯವರು ಕಲಬುರ್ಗಿ ಸರಕಾರಿ ಅತಿಥಿ ಗೃಹದ ಆವರಣದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ರೈತರು ಕಬ್ಬಿನ ಜಲ್ಲೆ ಜತೆಗೆ ತಮ್ಮ ಅಹವಾಲುಗಳನ್ನು ನೀಡಿದರು. ಮಳೆ ಕೊರತೆ ಉಂಟಾಗಿದೆ, ಬರಗಾಲ ಪೀಡಿತ ಎಂದು ಘೋಷಣೆ ಮಾಡಿ ಎಂದು ರೈತರು ಮನವಿ ಮಾಡಿದರು. ಈ ಪರಿಸ್ಥಿತಿಯನ್ನು ಕಣ್ಣಾರೆ ನೋಡಲೆಂದೇ ನಾನು ಇಲ್ಲಿಗೆ ಬಂದಿದ್ದೇನೆ. ನಿಮ್ಮ ಪರಿಸ್ಥಿತಿ ನನಗೆ ಅರ್ಥವಾಗುತ್ತದೆ ಎಂದರು.

ರೈತರ ಸಾಲಮನ್ನಾ ವಿಚಾರ ಹಾಗೂ ತಮಿಳುನಾಡು, ಮಹಾರಾಷ್ಟ್ರಗಳಲ್ಲಿ ರೈತರ ಸಾಲಮನ್ನಾ ಮಾಡಿರುವ ಬಗ್ಗೆ ಕೇಳಿದಾಗ, ಎಲ್ಲಿಯ ಸಾಲ, ಯಾವ ಸಾಲ ಎಂಬುದನ್ನು ಪರಿಶೀಲನೆ ಮಾಡೋಣ ಎಂದರು.

# ಶೀಘ್ರವೇ ಖಾಲಿ ಇರುವ 57 ಸಾವಿರ ಹುದ್ದೆಗಳ ಭರ್ತಿ ಮುಖ್ಯಮಂತ್ರಿ ಘೋಷಣೆ

**ಕಲಬುರಗಿ, ಜು.7:** ರಾಜ್ಯದಲ್ಲಿ ಖಾಲಿಹುದ್ದೆಗಳ ಭರ್ತಿಗೆ ಶೀಘ್ರ ಕ್ರಮ ಕೈಗೊಳ್ಳಲಾಗುವುದು, ಮುಂಬರುವ ಮೂರು ತಿಂಗಳ ಅವಧಿಯಲ್ಲಿ 57 ಸಾವಿರ ಉದ್ಯೋಗಗಳನ್ನು ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಇದೇ ವೇಳೆ ಸಚಿವ ಸಂಪುಟ ಪುನಾರಚನೆ ಅಥವಾ ಮಂತ್ರಿಮಂಡಲದ ವಿಚಾರಗಳ ಕುರಿತು ಎದ್ದಿರುವ ವದಂತಿಗಳಿಗೆ ತೆರೆ ಎಳೆದ ಮುಖ್ಯಮಂತ್ರಿಗಳು, ಮಂತ್ರಿ ಮಂಡಲದ ವಿಚಾರದಲ್ಲಿ ಯಾರಲ್ಲೂ ಯಾವುದೇ ಅಪಸ್ವರವಿಲ್ಲ. ಎಲ್ಲವೂ ಸುಸೂತ್ರವಾಗಿ ನಡೆಯುತ್ತಿದೆ ಎಂದು ಸ್ಪಷ್ಟಪಡಿಸಿದರು. ಸರ್ಕಾರದ ಯೋಜನೆಗಳು ಹಾಗೂ ಕಾರ್ಯವೈಖರಿಯ ಬಗ್ಗೆ ಮಾತನಾಡಿದ ಅವರು, ನಮ್ಮ ಸರ್ಕಾರವು ಎಸ್ಐಆರ್ ಅನ್ನು ಅತ್ಯಂತ ಸಮರ್ಪಕವಾಗಿ ನಿರ್ವಹಿಸುತ್ತಿದೆ. ಇದಕ್ಕೆ ಸರ್ಕಾರದಿಂದ ಅಗತ್ಯವಿರುವ ಎಲ್ಲಾ ರೀತಿಯ ಪ್ರೋತ್ಸಾಹ ಮತ್ತು ಬೆಂಬಲವನ್ನು ನೀಡಲಾಗುತ್ತಿದೆ. ಯಾರೂ ಮತದ ಹಕ್ಕಿನಿಂದ ವಂಚಿತರಾಗಬಾರದು. ಬಿಎಲ್ಒಗಳಿಗೆ ಸೂಚನೆ ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ಪ್ರಜಾಪ್ರಭುತ್ವದ ಹಕ್ಕುಗಳ ರಕ್ಷಣೆಗೆ ಸರ್ಕಾರ ಬದ್ಧವಾಗಿದೆ. ಈ ನಿಟ್ಟಿನಲ್ಲಿ ಹಲವು ನಿರ್ದೇಶನಗಳನ್ನು ನೀಡಲಾಗಿದೆ ಎಂದರು.

**ಮತದಾನದ ಹಕ್ಕು:** ಅರ್ಹರಾದ ಯಾವುದೇ ಒಬ್ಬ ನಾಗರಿಕನೂ ಸಹ ಮತದ ಹಕ್ಕಿನಿಂದ ವಂಚಿತರಾಗಬಾರದು.ಕಾನೂನು ಬಾಹಿರ ಚಟುವಟಿಕೆಗೆ ಬ್ರೇಕ್: ಮತದಾರರ ಪಟ್ಟಿ ಸೇರ್ಪಡೆ ಅಥವಾ ಯಾವುದೇ ಪ್ರಕ್ರಿಯೆಯಲ್ಲಿ ಕಾನೂನು ಬಾಹಿರ ಚಟುವಟಿಕೆಗಳಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು.

**ಬಿಎಲ್ಒಗಳಿಗೆ ಖಡಕ್ ಸೂಚನೆ:** ಈ ಬಗ್ಗೆ ಜಾಗರೂಕರಾಗಿ ಕೆಲಸ ನಿರ್ವಹಿಸುವಂತೆ ಈಗಾಗಲೇ ಎಲ್ಲಾ ಬಿಎಲ್ಒಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.



ಇಂಡೋನೇಷ್ಯಾದ ನಾಗರಿಕ ಪ್ರಶಸ್ತಿ ಪಡೆದ ಬಳಿಕ ಪ್ರಧಾನಿ ನರೇಂದ್ರ ಮೋದಿ ಜಕಾರ್ತದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು.

# ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಜೊತೆ, ಮಹಾರಾಷ್ಟ್ರ ಸಿಎಂ ಫಡ್ನವಿಸ್ ಭೇಟಿ ಮಾಡಿದ ಸಂಸದ ರಾಘವೇಂದ್ರ ನೇತೃತ್ವದ ನಿಯೋಗ



**ಮಹಾರಾಷ್ಟ್ರದಲ್ಲಿ ತಡೆಹಿಡಲ್ಪಟ್ಟಿರುವ ಅಡಿಕೆ ಸಾಗಣೆ ಸರಕುಗಳನ್ನು ತ್ವರಿತವಾಗಿ ಬಿಡುಗಡೆ ಮಾಡಲು ಮತ್ತು ಲಕ್ಷಾಂತರ ಅಡಿಕೆ ಬೆಳೆಗಾರರ ಜೀವನೋಪಾಯವನ್ನು ರಕ್ಷಿಸಲು ಸುವ್ಯವಸ್ಥಿತ ಸಾಗಣೆ ಕಾರ್ಯವಿಧಾನವನ್ನು ಜಾರಿಗೊಳಿಸುವಂತೆ ಕೋರಿ MAMCOS, CAMPCO, TUMCOS ಮತ್ತು ಕರ್ನಾಟಕ ರಾಜ್ಯ ಅಡಿಕೆ ಮಾರುಕಟ್ಟೆ ಸಹಕಾರ ಸಂಘಗಳ ಒಕ್ಕೂಟದ ಪರವಾಗಿ ಬೇಡಿಕೆ ಮಂಡಿಸಿದ ಸಂಸದ ರಾಘವೇಂದ್ರ**

**ನವದೆಹಲಿ, ಜು.7:** ದಕ್ಷಿಣ ಭಾರತದ ಅಡಿಕೆ ಬೆಳೆಗಾರರ ಸಹಕಾರಿ ನಿಯೋಗದ ಜೊತೆಗೆ ಶಿವಮೊಗ್ಗ ಸಂಸತ್ ಸದಸ್ಯ ಬಿ.ವೈ.ರಾಘವೇಂದ್ರ ಮಂಗಳವಾರ ನವದೆಹಲಿಯಲ್ಲಿ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರೊಂದಿಗೆ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರನ್ನು ಭೇಟಿಯಾದರು. ಮಲ್ನಾಡ್ ಅಡಿಕೆ ಮಾರ್ಕೆಟಿಂಗ್ ಕೋ–ಆಪರೇಟಿವ್ ಸೊಸೈಟಿ (MAMCOS), ಸೆಂಟ್ರಲ್ ಅಡಿಕೆ ಮತ್ತು ಕೋಕೋ ಮಾರ್ಕೆಟಿಂಗ್ ಅಂಡ್ ಪ್ರೊಸೆಸಿಂಗ್ ಕೋ–ಆಪರೇಟಿವ್ ಲಿಮಿಟೆಡ್, ತೋಟ ಉತ್ಪನ್ನಗಳ ಮರಾಟ ಸಹಕಾರ ಸಂಘ ನಿಯಮಿತ ಮತ್ತು ಕರ್ನಾಟಕ ರಾಜ್ಯ ಅಡಿಕೆ ಮಾರ್ಕೆಟಿಂಗ್ ಕೋ–ಆಪರೇಟಿವ್ ಸೊಸೈಟಿಗಳ ಒಕ್ಕೂಟ ಸೇರಿದಂತೆ ದಕ್ಷಿಣ ಭಾರತದ ಪ್ರಮುಖ ಅಡಿಕೆ ಸಹಕಾರಿ ಸಂಸ್ಥೆಗಳನ್ನು ಪ್ರತಿನಿಧಿಸುವ ನಿಯೋಗದೊಂದಿಗೆ ಭೇಟಿ ಮಾಡಿದರು. ಮಹಾರಾಷ್ಟ್ರದಲ್ಲಿ ಉತ್ತಮ ಅಡಿಕೆ ಸಾಗಣೆ ಸರಕುಗಳನ್ನು ದೀರ್ಘಕಾಲದವರೆಗೆ ತಡೆಹಿಡಿಯಲಾಗಿರು ವುದರಿಂದ ಕರ್ನಾಟಕದಾದ್ಯಂತ ಮತ್ತು ದಕ್ಷಿಣ ಭಾರತದ ವ್ಯಾಪಕ ಅಡಿಕೆ ಬೆಳೆಯುವ ಪ್ರದೇಶಗಳಲ್ಲಿ ಬೆಳೆಗಾರರಿಗೆ ಗಣನೀಯ ತೊಂದರೆ ಉಂಟಾಗಿದೆ ಎಂದು ನಿಯೋಗ ಮುಖ್ಯಮಂತ್ರಿಗಳ ಮಧ್ಯಪ್ರವೇಶವನ್ನು ಕೋರಿತು.

ಮಹಾರಾಷ್ಟ್ರದ ಆಹಾರ ಮತ್ತು ಔಷಧ ಆಡಳಿತ ಅಧಿಕಾರಿಗಳು, ಮಹಾರಾಷ್ಟ್ರದ ವಿವಿಧ ಸಾರಿಗೆ ಕೇಂದ್ರಗಳಲ್ಲಿ, ಉತ್ತರ ಭಾರತದ ಮಾರುಕಟ್ಟೆಗಳಿಗೆ ಹೋಗುವ ಮಾರ್ಗದಲ್ಲಿ ಮಹಾರಾಷ್ಟ್ರದ ಮೂಲಕ ಹಾದುಹೋಗುತ್ತಿದ್ದ, ಸೂಕ್ತ ದಾಖಲೆ ಹೊಂದಿರುವ, ಸುಮಾರು 50ಕ್ಕೂ ಅಧಿಕ ಅಡಿಕೆ ಸರಕು ಸಾಗಣೆ ಟ್ರಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ನಿಯೋಗವು ವಿವರಿಸಿತು. ಸಭೆಯಲ್ಲಿ ನಿಯೋಗದ ಪರವಾಗಿ ಮಾತನಾಡಿದ ಸಂಸದ ರಾಘವೇಂದ್ರ, ಭಾರತದ ಅಡಿಕೆ ಕೃಷಿಯ ಶೇ. 70 ಕ್ಕಿಂತ ಹೆಚ್ಚು ಪಾಲನ್ನು ಕರ್ನಾಟಕ ಹೊಂದಿದೆ ಮತ್ತು ದಕ್ಷಿಣ ಭಾರತದಾದ್ಯಂತ ಲಕ್ಷಾಂತರ ರೈತ ಕುಟುಂಬಗಳ ಜೀವನೋಪಾಯವು ಅಡಿಕೆ ಮೇಲೆ ಅವಲಂಬಿತವಾಗಿದೆ ಎಂದು ಒತ್ತಿ ಹೇಳಿದರು. ಪ್ರಸಕ್ತ ತಡೆಹಿಡಲ್ಪಟ್ಟಿರುವ ಸರಕುಗಳು, ಉಖಖಿ ಇನ್ವಾಯ್ಸ್‌ಗಳು, ಇ–ವೇ ಬಿಲ್ಗಳು ಮತ್ತು ಈಖಖಂಖ ನೋಂದಣಿಗಳು ಸೇರಿದಂತೆ ಶಾಸನಬದ್ಧ ದಾಖಲೆಗಳನ್ನು ಹೊಂದಿವೆ ಮತ್ತು ಉತ್ತರ ಭಾರತದ ಮಾರುಕಟ್ಟೆಗಳಿಗೆ ಹೋಗುವ ಮಾರ್ಗದಲ್ಲಿ ಮಹಾರಾಷ್ಟ್ರದ ಮೂಲಕ ಕೇವಲ ಹಾದು ಹೋಗುತ್ತವೆ ಎಂದು ಅವರು ವಿವರಿಸಿದರು.

ಅಂತಹ ಸರಕುಗಳನ್ನು ದೀರ್ಘಕಾಲದವರೆಗೆ ತಡೆಹಿಡಿಯುವುದು ಪೂರೈಕೆಯನ್ನು ಅಡ್ಡಿಪಡಿಸುವ ಮಾರುಕಟ್ಟೆ ಬೆಲೆಗಳ ಮೇಲೆ ಪರಿಣಾಮ ಬೀರುತ್ತದೆ ಮತ್ತು ರೈತರು ಮತ್ತು ಸಹಕಾರಿ ಸಂಸ್ಥೆಗಳ ಮೇಲೆ ಅನಗತ್ಯ ಆರ್ಥಿಕ ಹೊರೆಯನ್ನುಂಟುಮಾಡುತ್ತದೆ ಎಂದು ನಿಯೋಗ ಹೇಳಿತು. ಜೊತೆಗೆ, ಆಧುನಿಕ ಅಡಿಕೆ ಸಂಸ್ಕರಣೆಯ ಅಂತರ್ಗತ ನಿಯಮಿತ ಯಾಂತ್ರಿಕ ಸಿಪ್ಪೆ ತೆಗೆಯುವ ಗುರುತುಗಳು ಮುಟ್ಟುಗೋಲು ಹಾಕಿಕೊಳ್ಳಲು ಅಥವಾ ಉತ್ತಮ ಸರಕುಗಳನ್ನು ದೀರ್ಘಕಾಲದವರೆಗೆ ತಡೆಹಿಡಿಯಲು ಕಾರಣವಾಗಬಾರದು ಎಂದು ವಿನಂತಿಸಿತು.

"ಪ್ರತಿಯೊಂದು ಟ್ರಕ್‌ನಲ್ಲಿರುವ ಅಡಿಕೆಯ ಹಿಂದೆ ನೂರಾರು ಶ್ರಮಿಕ ಕೃಷಿ ಕುಟುಂಬಗಳಿವೆ, ಅವರ ಜೀವನೋಪಾಯ, ಸಕಾಲಿಕ ಮಾರುಕಟ್ಟೆ ವ್ಯಾಪಾರವನ್ನು ಅವಲಂಬಿಸಿದೆ. ದಕ್ಷಿಣ ಭಾರತದಾದ್ಯಂತ ಲಕ್ಷಾಂತರ ಕುಟುಂಬಗಳಿಗೆ, ಅಡಿಕೆ ಕೇವಲ ಬೆಳೆಯಲ್ಲ – ಅದು ಅವರ ಜೀವನಾಧಾರವಾಗಿದೆ. ಸೂಕ್ತ ದಾಖಲೆಗಳೊಂದಿಗೆ ಕೇವಲ ಮಹಾರಾಷ್ಟವನ್ನು ಹಾದುಹೋಗುವ ನೈಜ ಅಡಿಕೆ ಸರಕು ಸಾಗಣೆ ವಾಹನಗಳನ್ನು ತಡೆಹಿಡಯದಂತೆ ಗೌರವಪೂರ್ವಕವಾಗಿ ಕೋರುತ್ತೇವೆ ಎಂದು ಸಂಸದ ರಾಘವೇಂದ್ರ ಹೇಳಿದ್ದಾರೆ. ಈ ಸಂದರ್ಭದಲ್ಲಿ ಮಾಜಿಗೃಹ ಸಚಿವ ಅರಗ ಜ್ಞಾನೇಂದ್ರ , ಸಂಸದರಾದ ಶ್ರೀನಿವಾಸ ಪೂಜಾರಿ, ಕ್ಯಾಪ್ಟನ್ ಬ್ರಿಜೇಶ್ ಚೌಟ ಹಾಜರಿದ್ದರು.

# ಗ್ಲೋಬಲ್ ಡೆಸ್ಟಿನೇಷನ್ ಡೆವಲಪ್‌ಮೆಂಟ್‌ಗೆ ಹಂಪಿ, ಮೈಸೂರು, ಲಕ್ಕುಂಡಿ: ಸಚಿವ ಕೆ.ಜೆ. ಜಾರ್ಜ್




## ಕೇಂದ್ರ ಪ್ರವಾಸೋದ್ಯಮ ಸಚಿವಾಲಯಕ್ಕೆ ಶಿಫಾರಸು ಮಾಡಲು ಕರ್ನಾಟಕ ಸರ್ಕಾರ ನಿರ್ಧಾರ

**ವಿಜಯನಗರ, ಜು.7:** ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ 'ಗ್ಲೋಬಲ್ ಡೆಸ್ಟಿನೇಷನ್ ಡೆವಲಪ್ ಮೆಂಟ್' ಯೋಜನೆಯಡಿ ಹಂಪಿ, ಮೈಸೂರು ಹಾಗೂ ಲಕ್ಕುಂಡಿ ಸೇರಿದಂತೆ ರಾಜ್ಯದ ಮೂರು ಪ್ರಮುಖ ಐತಿಹಾಸಿಕ ಹಾಗೂ ಸಾಂಸ್ಕೃತಿಕ ತಾಣಗಳನ್ನು ಕೇಂದ್ರ ಪ್ರವಾಸೋದ್ಯಮ ಸಚಿವಾಲಯಕ್ಕೆ ಶಿಫಾರಸು ಮಾಡಲು ಕರ್ನಾಟಕ ಸರ್ಕಾರ ನಿರ್ಧಸಿದೆ ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

**ಮೈಸೂರು ದಸರಾ ಮಾದರಿ ಹಂಪಿ ಉತ್ಸವ**

**ಮೈಸೂರು ದಸರೆಯ ಮಾದರಿಯಲ್ಲಿ ಹಂಪಿ ಉತ್ಸವವನ್ನು ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಇನ್ನಷ್ಟು ವೈಭವಯುತವಾಗಿ ಆಯೋಜಿಸಲು ಸರ್ಕಾರ ಬದ್ಧವಾಗಿದೆ. ಉತ್ಸವದ ದಿನಾಂಕ ಹಾಗೂ ಕಾರ್ಯಕ್ರಮಗಳ ಕುರಿತು ಮುಖ್ಯಮಂತ್ರಿ ಅವರೊಂದಿಗೆ ಸಮಾಲೋಚಿಸಿ ಶೀಘ್ರದಲ್ಲೇ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸಚಿವ ಕೆ.ಜೆ. ಜಾರ್ಜ್ ತಿಳಿಸಿದರು.**

ಹಂಪಿಯಲ್ಲಿ ನಡೆದ ರಾಜ್ಯಮಟ್ಟದ ಉನ್ನತ ಮಟ್ಟದ ಸಮಾಲೋಚನಾ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದಿಂದ ಸಲ್ಲಿಸಲಾಗುವ ಸಮಗ್ರ ಪ್ರಸ್ತಾವನೆಯನ್ನು ಪರಿಶೀಲಿಸಿದ ಬಳಿಕ ಯೋಜನೆಯಡಿ ಅಭಿವೃದ್ಧಿಪಡಿಸಲಾಗುವ ಅಂತಿಮ ತಾಣಗಳನ್ನು ಕೇಂದ್ರ ಪ್ರವಾಸೋದ್ಯಮ ಸಚಿವಾಲಯ ಆಯ್ಕೆ ಮಾಡಲಿದೆ ಎಂದು ಹೇಳಿದರು.

ಆಯ್ಕೆಯಾಗುವ ಪ್ರವಾಸಿ ತಾಣಗಳಿಗೆ ಮೊದಲ ಹಂತದಲ್ಲಿ 500 ಕೋಟಿ ಹಾಗೂ ಎರಡನೇ ಹಂತದಲ್ಲಿ 300 ಕೋಟಿ ಸೇರಿದಂತೆ ಒಟ್ಟು 800 ಕೋಟಿ ಕೇಂದ್ರ ನೆರವು ದೊರೆಯುವ ನಿರೀಕ್ಷೆಯಿದೆ. ಇದರೊಂದಿಗೆ ರಾಜ್ಯ ಸರ್ಕಾರ ಹಾಗೂ ಖಾಸಗಿ ವಲಯದ ಸಹಭಾಗಿತ್ವದ ಮೂಲಕ ಹೆಚ್ಚುವರಿ ಹೂಡಿಕೆಯನ್ನು ಆಕರ್ಷಿಸಿ, ಆಯ್ಕೆಯಾದ ತಾಣಗಳನ್ನು ವಿಶ್ವದರ್ಜೆಯ ಪ್ರವಾಸೋದ್ಯಮ ಕೇಂದ್ರಗಳಾಗಿ ಅಭಿವೃದ್ಧಿಪಡಿಸುವ ಗುರಿ ಹೊಂದಲಾಗಿದೆ ಎಂದು ಸಚಿವರು ತಿಳಿಸಿದರು.

ಹಂಪಿ, ಮೈಸೂರು ಹಾಗೂ ಲಕ್ಕುಂಡಿಯ ಐತಿಹಾಸಿಕ, ಸಾಂಸ್ಕೃತಿಕ ಹಾಗೂ ಪ್ರವಾಸೋದ್ಯಮ ಸಾಮರ್ಥ್ಯ ವನ್ನು ಆಧರಿಸಿ ವಿಶ್ವದರ್ಜೆಯ ಮೂಲಸೌಕರ್ಯ, ಪ್ರವಾಸಿಗರ ಅನುಭವ, ಸಂಪರ್ಕ ವ್ಯವಸ್ಥೆ, ಪರಂಪರೆ ಸಂರಕ್ಷಣೆ, ಸುಸ್ಥಿರ ಅಭಿವೃದ್ಧಿ ಹಾಗೂ ಖಾಸಗಿ ಹೂಡಿಕೆಗೆ ಆದ್ಯತೆ ನೀಡುವ ಸಮಗ್ರ ಕಾರ್ಯಯೋಜನೆ ಯನ್ನು ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಅವರು ಹೇಳಿದರು.

ಹಂಪಿಯ ಅಭಿವೃದ್ಧಿಯು ಪ್ರವಾಸೋದ್ಯಮ ಇಲಾಖೆಯೊಂದರ ಜವಾಬ್ದಾರಿಯಲ್ಲ. ನಗರಾಭಿವೃದ್ಧಿ ಇಲಾಖೆ, ಹಂಪಿ ಅಭಿವೃದ್ಧಿ ಪ್ರಾಧಿಕಾರ, ಭಾರತೀಯ ಪುರಾತತ್ವ ಸರ್ವೇಕ್ಷಣ, ರಾಜ್ಯ ಪುರಾತತ್ವ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಸಮಗ್ರ ಅಭಿವೃದ್ಧಿ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.ಈ ನಿಟ್ಟಿನಲ್ಲಿ ನಗರಾಭಿವೃದ್ಧಿ ಸಚಿವರು ಹಾಗೂ ಪಂಚಾಯತ್‌ರಾಜ್ ಸಚಿವರ ನೇತೃತ್ವದಲ್ಲಿ ಶೀಘ್ರದಲ್ಲೇ ಜಂಟಿ ಸಭೆ ನಡೆಸಿ, ಹಂಪಿಯ ಅಭಿವೃದ್ಧಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲಾಗುವುದು ಎಂದರು.



ನವದೆಹಲಿಯಲ್ಲಿ ಟಾಯ್ ಅಸೋಸಿಯೇಷನ್ ಆಫ್ ಇಂಡಿಯಾ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಗುಂಪು ಛಾಯಾಚಿತ್ರದಲ್ಲಿ.

# ಎಚ್.ಎಂ.ಟಿ.ಯಿಂದಲೇ ಅರಣ್ಯಭೂಮಿ ಅತಿಕ್ರಮಣ

## ರಿಯಲ್ ಎಸ್ಟೇಟ್ ದಂಧೆಗೆ ಅವಕಾಶವೇ ಇಲ್ಲ: ಕುಮಾರಸ್ವಾಮಿ ಆರೋಪಗಳಿಗೆ ಖಂಡ್ರೆ ತಿರುಗೇಟು

**ಬೀದರ್, ಜು.7:** ಕೇಂದ್ರ ಸರ್ಕಾರಿ ಸ್ವಾಮ್ಯದ ಎಚ್.ಎಂ.ಟಿ. ಭೂಪರಿವರ್ತನೆ ಆಗದ ಅರಣ್ಯ ಭೂಮಿಯನ್ನು ಅಕ್ರಮವಾಗಿ ರಿಯಲ್ ಎಸ್ಟೇಟ್ ಸಂಸ್ಥೆಗಳಿಗೆ ಮಾರಾಟ ಮಾಡಿದೆ. ಈಗ ಅದು ಅರಣ್ಯಭೂಮಿ ತೆರವಿಗೆ ಆದೇಶವಾಗಿದ್ದು, ಇಲ್ಲಿ ರಿಯಲ್ ಎಸ್ಟೇಟ್ ದಂಧೆಗೆ ಅವಕಾಶವೇ ಇರುವುದಿಲ್ಲ. ಹೀಗಾಗಿ ಎಚ್.ಡಿ. ಕುಮಾರಸ್ವಾಮಿ ಆರೋಪಕ್ಕೆ ಅರ್ಥವೇ ಇಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಈಶ್ವರ ಖಂಡ್ರೆ ತಿರುಗೇಟು ನೀಡಿದ್ದಾರೆ.

ಎಚ್‌ಡಿಕೆ ಆರೋಪಗಳ ಬಗ್ಗೆ ಸುದ್ದಿಗಾರರ ಪ್ರಶ್ನೆಗಳಿಗೆ ಉತ್ತರಿಸಿ, ಭೂ ಪರಿವರ್ತನೆ ಆಗದ ಅರಣ್ಯ ಭೂಮಿಯನ್ನು ಅತಿಕ್ರಮಣ ಮಾಡಿರುವುದು ಎಚ್.ಎಂ.ಟಿ.ಯೋ ಹೊರತು ಅರಣ್ಯ ಇಲಾಖೆಯಲ್ಲ. ಇನ್ನು ಒಂದು ಬಾರಿ ಅರಣ್ಯ ಭೂಮಿ ಎಂದು ಕರ್ನಾಟಕ ಅರಣ್ಯ ಕಾಯಿದೆ 1963ರ ಸೆಕ್ಷನ್ 64 ಎ ಅಡಿಯಲ್ಲಿ ತೆರವು ಮಾಡಿದ ಬಳಿಕ ಅಲ್ಲಿ ರಿಯಲ್ ಎಸ್ಟೇಟ್ ದಂಧೆ ನಡೆಸಲು ಸಾಧ್ಯವೇ ಎಂದು ಪ್ರಶ್ನಿಸಿದರು.

ಕೆಲವು ಅಧಿಕಾರಿಗಳು ಮುಖ್ಯಕಾರ್ಯದರ್ಶಿ ನೇತೃತ್ವದ ಉನ್ನತ ಮಟ್ಟದ ಸಮಿತಿಯ, ಅರಣ್ಯ ಸಚಿವರ ಅಥವಾ ಸಚಿವ ಸಂಪುಟದ ಅನುಮತಿ ಇಲ್ಲದೆ ಎಚ್‌ಎಂಟಿ ವಶದಲ್ಲಿರುವ ಅರಣ್ಯ ಭೂಮಿ ಡಿನೋಟಿಫಿಕೇಷನ್‌ಗೆ ಸುಪ್ರೀಂಕೋರ್ಟ್‌ನಲ್ಲಿ ಐ.ಎ. ಹಾಕಿದ್ದರು, ಅಂತಹ ಅಧಿಕಾರಿಗಳನ್ನು ಅಮಾನತು ಮಾಡಲಾಗಿತ್ತು. ಶೋಕಾಸ್ ನೋಟಿಸ್ ನೀಡಲಾಗಿತ್ತು. ಜೊತೆಗೆ ಈ ಐ.ಎ. ಹಿಂಪಡೆಯಲು ರಾಜ್ಯ ಸರ್ಕಾರ ಸಚಿವ ಸಂಪುಟದ ಅನುಮತಿಯನ್ನೂ ಪಡೆದಿದೆ.



**ಎಚ್.ಡಿ.ಕೆ. ಮೊದಲು ಎನ್ಎಂಡಿಸಿ, ವಿ.ಐಎಸ್ಎಲ್ ಪುನಶ್ಚೇತನ ಮಾಡಲಿ:**

ಪಕ್ಕದ ರಾಜ್ಯದವರನ್ನು ನೋಡಿ ಕಲಿಯಿರಿ ಎಂದು ಕುಮಾರಸ್ವಾಮಿ ಹೇಳಿದ್ದಾರೆ. ಅದರ ಅಗತ್ಯ ನಮಗಿಲ್ಲ. ಕುಮಾರಸ್ವಾಮಿ ಅವರಿಗೆ ರಾಜ್ಯದ ಬಗ್ಗೆ ಅಷ್ಟು ಕಾಳಜಿ ಇದ್ದರೆ ಹಿಂದುಳಿದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸಿ ಜನರಿಗೆ ಉದ್ಯೋಗ ನೀಡಲಿ, ಉಕ್ಕು ಸಚಿವಾಲಯದ ವ್ಯಾಪ್ತಿಗೆ ಬರುವ ರಾಷ್ಟ್ರೀಯ ಖನಿಜ ಅಭಿವೃದ್ಧಿ ನಿಗಮ (ಎನ್.ಎಂ.ಡಿ.ಸಿ.) ಉಕ್ಕು ಮತ್ತು ಕಬ್ಬಿಣದ ಕಾರ್ಖಾನೆ ಪುನಶ್ಚೇತನ ಮಾಡಲಿ ಎಂದರು.

2014ರಲ್ಲಿ ಎನ್.ಎಂ.ಡಿ.ಸಿ. ಬಳ್ಳಾರಿ ಜಿಲ್ಲೆಯಲ್ಲಿ ಉಕ್ಕು ಕಾರ್ಖಾನೆ ಆರಂಭಿಸಿ, 50 ಸಾವಿರ ಜನರಿಗೆ ಉದ್ಯೋಗ ನೀಡುವುದಾಗಿ ಹೇಳಿ ಸಾವಿರಾರು ಎಕರೆ ಭೂಮಿ ಪಡೆದಿದೆ. 12 ವರ್ಷವಾದರೂ ಈ ಕಾರ್ಖಾನೆ ಆರಂಭ ಆಗಿಲ್ಲ. ಮೊದಲು ಈ ಕಾರ್ಖಾನೆ ಪುನಶ್ಚೇತನ ಮಾಡಲಿ. ಭದ್ರಾವತಿಯಲ್ಲಿ ವಿಐಎಸ್ಎಲ್ ಕಾರ್ಖಾನೆ ಪುನಶ್ಚೇತನ ಮಾಡಲಿ ಎಂದು ಖಂಡ್ರೆ ತಾಕೀತು ಮಾಡಿದರು.

ಕೋರ್ಟ್ ಮೊರೆ ಹೋಗಿದೆ. ಅರಣ್ಯ ಸಂರಕ್ಷಣಾ ಕಾಯಿದೆ 1980ರ ಜಾರಿಯ ಬಳಿಕ ಭೂ ಪರಿವರ್ತನೆ ಆಗದ ಯಾವುದೇ ಅರಣ್ಯ ಭೂಮಿ ಅರಣ್ಯವಾಗೇ ಉಳಿಯುತ್ತದೆ ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿದೆ. ಹೀಗಾಗಿ ಇದು ಅರಣ್ಯವಾಗೇ ಉಳಿಯುತ್ತದೆ ಎಂದು ಸ್ಪಷ್ಟಪಡಿಸಿದರು..

**ಅತಿಕ್ರಮಣ ಹೇಗಾಗುತ್ತದೆ?**

ಎಚ್.ಎಂ.ಟಿ. ವಶದಲ್ಲಿರುವ ಭೂಮಿಯಲ್ಲಿ ಅರಣ್ಯ ಇದೆಯೇ, ಕಟ್ಟಡಗಳು ಮಾತ್ರ ಇವೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ. ನಾನೇ ಖುದ್ದು ಈ ಪ್ರದೇಶಕ್ಕೆ ಅಧಿಕಾರಿಗಳೊಂದಿಗೆ ಭೇಟಿ ನೀಡಿದಾಗ, ಎಚ್.ಎಂ.ಟಿ. ಅಧಿಕಾರಿಗಳೇ ನನಗೆ ಪುಷ್ಪಗುಚ್ಛ ನೀಡಿ ಸ್ವಾಗತಿಸಿದರು. ಆಗಲೂ ಕುಮಾರಸ್ವಾಮಿ ಖಂಡ್ರೆ ಎಚ್.ಎಂ.ಟಿ.ಗೆ ಅತಿಕ್ರಮ ಪ್ರವೇಶ ಮಾಡಿದ್ದಾರೆ ಎಂದು ಆರೋಪಿಸಿದ್ದರು. ಪುಷ್ಪಗುಚ್ಛ ನೀಡಿ ಕರೆದುಕೊಂಡು ಹೋದ ಮೇಲೆ ಅತಿಕ್ರಮಣ ಹೇಗಾಗುತ್ತದೆ ಎಂದು ಪ್ರಶ್ನಿಸಿದರು. ಈಗಲೂ ಎಚ್.ಎಂ.ಟಿ. ವಶದಲ್ಲಿರುವ ಭೂಮಿಯ ಪೈಕಿ 280 ಎಕರೆ ಪ್ರದೇಶದಲ್ಲಿ ಅರಣ್ಯ ಸ್ವರೂಪದ ನೆಡುತೋಪಿದೆ. ಪಕ್ಕದಲ್ಲಿರುವ ಪಾಳುಬಿದ್ದ ಕಟ್ಟಡಗಳಲ್ಲಿ ಸಿನಿಮಾ, ಧಾರಾವಾಹಿ ಶೂಟಿಂಗ್ ನಡೆಯುತ್ತದೆ. ಅರಣ್ಯ ಭೂಮಿಯನ್ನು ಅಕ್ರಮವಾಗಿ ಎಚ್.ಎಂ.ಟಿ. ವಾಣಿಜ್ಯ ಉದ್ದೇಶಕ್ಕೆ ಬಳಸುತ್ತಿದೆ. 165 ಎಕರೆ ಭೂಮಿಯನ್ನು ಕೇವಲ 300 ಕೋಟಿ ರೂ.ಗೆ ಮಾರಾಟ ಮಾಡಿದೆ. ಕುಮಾರಸ್ವಾಮಿ ಸ್ಥಳಕ್ಕೆ ಭೇಟಿ ನೀಡಿ ಇದೆಲ್ಲವನ್ನೂ ಪರಿಶೀಲಿಸಲಿ ಎಂದು ಸವಾಲು ಹಾಕಿದರು.

**7 ಕೋಟಿ ಕನ್ನಡಿಗರ ಆಸ್ತಿ**

**ಎಚ್.ಎಂ.ಟಿ. ವಶದಲ್ಲಿರುವ ಅರಣ್ಯ ಭೂಮಿ 7 ಕೋಟಿ ಕನ್ನಡಿಗರ ಆಸ್ತಿ. ಇದು ಬೆಂಗಳೂರು ಜನರಿಗೆ ಅತ್ಯಗತ್ಯವಾದ ಶ್ವಾಸತಾಣ. ಲಾಲ್‌ಬಾಗ್, ಕಬ್ಬನ್ ಪಾರ್ಕ್‌ಗಿಂತ ದೊಡ್ಡದಾದ ಅಂದರೆ 444 ಎಕರೆ ಪ್ರದೇಶದಲ್ಲಿ ಬೃಹತ್ ಜೈವಿಕ ಉದ್ಯಾನ ನಿರ್ಮಿಸುವುದು ತಮ್ಮ ಗುರಿಯಾಗಿತ್ತು. ಇದನ್ನು ಬಹಿರಂಗವಾಗಿ ಘೋಷಿಸಲಾಗಿದೆ. ಆದರೂ ಕುಮಾರಸ್ವಾಮಿ ರಿಯಲ್ ಎಸ್ಟೇಟ್ ದಂಧೆ ಎಂದು ಆರೋಪಿಸುವುದರಲ್ಲಿ ಅರ್ಥವಿಲ್ಲ ಎಂದರು. ಎಚ್.ಎಂ.ಟಿ. ಸುಪ್ರೀಂಕೋರ್ಟ್‌ಗೆ ಸಲ್ಲಿಸಿರುವ ಪ್ರಮಾಣಪತ್ರದಲ್ಲಿ ಬೆಂಗಳೂರಿನಲ್ಲಿರುವ ಅರಣ್ಯ ಭೂಮಿಯ ಬೆಲೆ 14000 ಕೋಟಿ ಬೆಲೆಬಾಳುವ ಜಮೀನು ಎಂದು ಉಲ್ಲೇಖಿಸಿದೆ. ಅದರ ಮೇಲೆ ಕಣ್ಣಿಟ್ಟಿದ್ದವರು ಯಾರು ಎಂದು ಅವರೇ ನಿರ್ಧರಿಸಲಿ ಎಂದು ತಿಳಿಸಿದರು.**

# ಜು.10 ರಂದು ಭಾರತ್ ಸೌಟ್ಸ್ ಮತ್ತು ಗೈಡ್ಸ್ ರಾಜ್ಯ ಪುರಸ್ಕಾರ ಪ್ರಶಸ್ತಿ ಪ್ರದಾನ ಸಮಾರಂಭ

**ಬೆಂಗಳೂರು, ಜು.7:** ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರಾಜ್ಯ ಕೇಂದ್ರ ಕಾರ್ಯಾಲಯದ ವತಿಯಿಂದ ಕಬ್ಸ್, ಬುಲ್‌ಬುಲ್ಸ್, ಸ್ಕೌಟ್ಸ್, ಗೈಡ್ಸ್, ರೋವರ್ಸ್ ಮತ್ತು ರೇಂಜರ್ಸ್ ತಂಡಗಳಿಗೆ ಪ್ರತಿಷ್ಠಿತ ಚತುರ್ಥ ಚರಣ್, ಹೀರಕ್ ಪಂಖ್ ಹಾಗೂ ರಾಜ್ಯ ಪುರಸ್ಕಾರ ಪ್ರಶಸ್ತಿ ಪ್ರಮಾಣಪತ್ರ ಪ್ರದಾನ ಸಮಾರಂಭವನ್ನು ಜುಲೈ 10 ರಂದು ಸಂಜೆ 4.00 ಗಂಟೆಗೆ ಬೆಂಗಳೂರಿನ ಲೋಕಭವನದ ಗಾಜಿನ ಮನೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಸಮಾರಂಭದಲ್ಲಿ ರಾಜ್ಯಪಾಲರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಪೋಷಕ ಥಾವರ್‌ಚಂದ್ ಗೆಹ್ಲೋತ್ ಅವರು ಪಾಲ್ಗೊಂಡು ಪ್ರಶಸ್ತಿ ಪತ್ರಗಳನ್ನು ಪ್ರದಾನ ಮಾಡಲಿದ್ದಾರೆ. ಮುಖ್ಯಮಂತ್ರಿ ಹಾಗೂ ಸಂಸ್ಥೆಯ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಅಪರ ರಾಜ್ಯ ಮುಖ್ಯ ಆಯುಕ್ತ ಯು.ಟಿ. ಖಾದರ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಶ್ಮಿ ವಿ. ಮಹೇಶ್, ಶಾಲಾ ಶಿಕ್ಷಣ ಇಲಾಖೆಯ ಆಯುಕ್ತ ವಿಕಾಸ್ ಕಿಶೋರ್ ಸೂರಳ್ಕರ್, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಉಪಾಧ್ಯಕ್ಷ ಕೊಂಡಜ್ಜಿ ಬ. ಷಣ್ಮುಖಪ್ಪ, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಉಪಾಧ್ಯಕ್ಷ ಮತ್ತು ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆಯ ಅಧ್ಯಕ್ಷರಾದ ಎ.ಎನ್. ಮಹೇಶ್, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಮುಖ್ಯ ಆಯುಕ್ತ ಡಾ. ಪಿ.ಜಿ.ಆರ್. ಸಿಂಧ್ಯ ಅವರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ.




ನವದೆಹಲಿಯ ಸಂಸತ್ ಭವನ ಸಂಕೀರ್ಣದಲ್ಲಿ ಮಂಗಳವಾರ ನಡೆದ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಿಗೆ 2024–25ರ 17ನೇ ರಾಷ್ಟ್ರೀಯ ಯುವ ಸಂಸತ್ ಸ್ಪರ್ಧೆಯ ಬಹುಮಾನ ವಿತರಣಾ ಸಮಾರಂಭದಲ್ಲಿ ಕಾನೂನು ಮತ್ತು ನ್ಯಾಯ ಮತ್ತು ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಸಮೂಹ ಛಾಯಾಚಿತ್ರದಲ್ಲಿ ಪಾಲ್ಗೊಂಡರುಸ.

# ಜಾಗತಿಕ ಹತ್ತಿ ಬೇಡಿಕೆ ಪೂರೈಸಲು ಭಾರತ ಸಜ್ಜಾಗುವುದು ಅಗತ್ಯ: ಉಪರಾಷ್ಟ್ರಪತಿ ಸಲಹೆ

**ನವದೆಹಲಿ,ಜು.7:** ಜಾಗತಿಕವಾಗಿ ಭಾರತವು ಸ್ಪರ್ಧಾತ್ಮಕ ನೀತಿಯನ್ನು ಬಲಪಡಿಸಿಕೊಳ್ಳಬೇಕು ಮತ್ತು ಗುಣಮಟ್ಟದ ಹತ್ತಿಗೆ ಹೆಚ್ಚುತ್ತಿರುವ ದೇಶೀಯ ಹಾಗೂ ಅಂತರರಾಷ್ಟ್ರೀಯ ಬೇಡಿಕೆಯನ್ನು ಪೂರೈಸಲು ಸಜ್ಜಾಗಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದರು.

ಉಪರಾಷ್ಟ್ರಪತಿ ಭವನದಲ್ಲಿ ಹತ್ತಿ ಉತ್ಪಾದಕತೆ ಹೆಚ್ಚಿಸುವ ನಿಟ್ಟಿನಲ್ಲಿ ಕೈಗೊಂಡಿರುವ ಕಪಾಸ್ ಕ್ರಾಂತಿ (ಹತ್ತಿ ಉತ್ಪಾದಕತೆ ಮಿಷನ್) ಕುರಿತು ಕೇಂದ್ರ ಕೃಷಿ, ರೈತರ ಕಲ್ಯಾಣ ಹಾಗೂ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮತ್ತು ಕೃಷಿ ಹಾಗೂ ಜವಳಿ ಸಚಿವಾಲಯದ ಹಿರಿಯ ಅಧಿಕಾರಿಗಳು ಉಪರಾಷ್ಟ್ರಪತಿಗಳಿಗೆ ಮಾಹಿತಿ ನೀಡಿದರು.

ಈ ಮಿಷನ್ ಕುರಿತು ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ. ಮಾರುಕಟ್ಟೆ ಆಧಾರಿತ ಕಾರ್ಯತಂತ್ರಗಳನ್ನು ರೂಪಿಸಲು ಮತ್ತು ಯಶಸ್ವಿ ಉಪಕ್ರಮಗಳನ್ನು



ಸಾಕ್ಷ್ಯಚಿತ್ರಗಳ ಮೂಲಕ ವ್ಯಾಪಕವಾಗಿ ಪ್ರಚಾರ ಮಾಡುವಂತೆ ಸಲಹೆ ನೀಡಿದರು. ಪ್ರತಿ ಎಕರೆ ಹತ್ತಿ ಇಳುವರಿಯನ್ನು ಸುಧಾರಿಸಲು ಸ್ಪಷ್ಟ ಮತ್ತು ಅಳೆಯಬಹುದಾದ ಗುರಿ ಹೊಂದಬೇಕು. ಈ ಮೂಲಕ ಅಗ್ರ ಹತ್ತಿ ಉತ್ಪಾದಕ ದೇಶಗಳೊಂದಿಗಿನ ಉತ್ಪಾದನಾ ಅಂತರವನ್ನು ಕಡಿಮೆ ಮಾಡುವಂತೆ ತಿಳಿಸಿದರು. ಕೃಷಿಯಲ್ಲಿ ಆಧುನಿಕ ತಂತ್ರಜ್ಞಾನಗಳನ್ನು ಸಕಾಲದಲ್ಲಿ ಅಳವಡಿಸಿಕೊಳ್ಳಲು ಮತ್ತು ಹೊಸ ಆವಿಷ್ಕಾರಗಳನ್ನು ಉತ್ತೇಜಿಸಲು ಕಾಲಮಿತಿಯ ಅನುಮೋದನಾ ವ್ಯವಸ್ಥೆಯನ್ನು ಜಾರಿಗೆ ತರುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

**3 ಅಂಶ ಪ್ರತಿಪಾದಿಸಿದ ಉಪರಾಷ್ಟ್ರಪತಿ**

ಸಂಶೋಧನೆ, ಸುಧಾರಿತ ತಂತ್ರಜ್ಞಾನ ಮತ್ತು ಅತ್ಯುತ್ತಮ ಕೃಷಿ ಪದ್ಧತಿಗಳ ಮೂಲಕ ಹತ್ತಿ ಇಳುವರಿಯನ್ನು ಹೆಚ್ಚಿಸುವುದು. ಕಸ್ತೂರಿ ಕಾಟನ್ ಪ್ರಮಾಣೀಕರಣ ಮತ್ತು ಕಿಸಾನ್ ಕಪಾಸ್ ಆಪ್‌ನಂತಹ ಉಪಕ್ರಮಗಳ ಮೂಲಕ ನಿರಂತರವಾಗಿ ಗುಣಮಟ್ಟದ ಹತ್ತಿ ಪೂರೈಕೆಯನ್ನು ಖಚಿತಪಡಿಸುವುದು. ಜವಳಿ ವಲಯದಲ್ಲಿ ಸುಸ್ಥಿರತೆ ಮತ್ತು ನಾವೀನ್ಯತೆಯನ್ನು ಉತ್ತೇಜಿಸಲು ಹೊಸ ಯುಗದ ನೈಸರ್ಗಿಕ ನಾರುಗಳ ಬಳಕೆಗೆ ಉತ್ತೇಜನ ನೀಡುವುದು. ಭಾರತದ ಹತ್ತಿ ವಲಯವನ್ನು ಬಲಪಡಿಸುವಲ್ಲಿ ಈ ಮಿಷನ್‌ನ ಸಮಗ್ರ ವಿಧಾನವನ್ನು ಶ್ಲಾಘಿಸಿದ ಉಪರಾಷ್ಟ್ರಪತಿಗಳು, ಜಾಗತಿಕ ಮಟ್ಟದಲ್ಲಿ ಭಾರತೀಯ ರೈತರ ಭವಿಷ್ಯವನ್ನು ಭದ್ರಪಡಿಸಲು ಇದು ಪೂರಕವಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಪುನರುಚ್ಚರಿಸಿದರು.

# ಕರೂರ್ ಕಾಲ್ತುಳಿತ: ಸಿಎಂ ವಿಜಯ್ ಸಂತ್ರಸ್ತರ ಭೇಟಿ ಪ್ರಶ್ನಿಸಿದ್ದ ಡಿಎಂಕೆ ಅರ್ಜಿ ವಜಾಗೊಳಿಸಿದ ಸುಪ್ರೀಂ

**ನವದೆಹಲಿ,ಜು.7:** ತಮಿಳುನಾಡು ಸಿಎಂ ಸಿ. ಜೋಸೆಫ್ ವಿಜಯ್ ಅವರು ಕರೂರ್ ಕಾಲ್ತುಳಿತದಲ್ಲಿ ಮೃತಪಟ್ಟವರ ಕುಟುಂಬಗಳನ್ನು ಭೇಟಿ ಮಾಡುವುದನ್ನು ಪ್ರಶ್ನಿಸಿ ಡಿಎಂಕೆ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾ ಮಾಡಿದೆ. ಕಾರ್ಯಾಂಗದ ಮುಖ್ಯಸ್ಥರು ಸಂತ್ರಸ್ತರನ್ನು ಭೇಟಿ ಮಾಡುವುದನ್ನು ನಿರ್ಬಂಧಿಸಲು ಸಾಧ್ಯವಿಲ್ಲ. ಇದು ಸಾಕ್ಷಿಗಳ ಮೇಲೆ ಪ್ರಭಾವ ಬೀರುವುದಿಲ್ಲ ಎಂದು ನ್ಯಾಯಮೂರ್ತಿಗಳಾದ ಕೆ.ವಿ. ವಿಶ್ವನಾಥನ್ ಮತ್ತು ಅಲೋಕ್ ಆರಾಧೆ ಅವರಿದ್ದ ಪೀಠ ಸ್ಪಷ್ಟಪಡಿಸಿದೆ.

ರಾಜ್ಯದ ಸಿಎಂ ಕಾಲ್ತುಳಿತ ಪ್ರಕರಣದಲ್ಲಿ ಮೃತಪಟ್ಟವರ ಕುಟುಂಬಗಳನ್ನು ಭೇಟಿ ಮಾಡಲು ನಿರ್ಧರಿಸಿದ್ದನ್ನು ಹೇಗೆ ತಡೆಯಬಹುದು. ಸಂತ್ರಸ್ತ ಕುಟುಂಬಗಳನ್ನು ಭೇಟಿ ಮಾಡುವುದು ಸಾಕ್ಷಿಗಳ ಮೇಲೆ ಹೇಗೆ ಪ್ರಭಾವ ಬೀರುವುದಕ್ಕೆ ಸಮಾನವಾಗುತ್ತದೆ ಎಂದು ಡಿಎಂಕೆ ಪರವಾಗಿ ಹಾಜರಿದ್ದ ಹಿರಿಯ ವಕೀಲ ರಂಜಿತ್ ಕುಮಾರ್ ಅವರನ್ನು ಪ್ರಶ್ನಿಸಿತು.

ಡಿಎಂಕೆ ತಾನು ಸಲ್ಲಿಸಿದ ಅರ್ಜಿಯನ್ನು



ಹಿಂಪಡೆಯಲು ಮತ್ತು ಕಾನೂನಿನಡಿ ಬೇರೆ ಮಾರ್ಗ ಅನುಸರಿಸಬಹುದು. ಇಲ್ಲದಿದ್ದರೆ ನ್ಯಾಯಾಲಯವೇ ಅರ್ಜಿಯನ್ನು ವಜಾಗೊಳಿಸಲಿದೆ ಎಂದು ಕೋರ್ಟ್ ಅರ್ಜಿದಾರರ ಪರ ವಕೀಲರಿಗೆ ತಿಳಿಸಿತು. ಈ ವೇಳೆ ಹಿರಿಯ ವಕೀಲ ರಂಜಿತ್ ಕುಮಾರ್ ಅವರು ಬೇರೆಡೆ ಹೋರಾಟ ನಡೆಸುವ ಅನುಮತಿಯೊಂದಿಗೆ ಅರ್ಜಿಯನ್ನು ಹಿಂಪಡೆಯಲು ಒಪ್ಪಿಕೊಂಡರು. ಅರ್ಜಿಯನ್ನು ಹಿಂಪಡೆಯಲಾಗಿದೆ ಎಂದು ವಿಚಾರಣೆಯಿಂದ ವಜಾಗೊಳಿಸಲಾಯಿತು.

ಸಿಎಂ ವಿಜಯ್ ಅವರು ಜುಲೈ 10 ರಂದು ಕಾಲ್ತುಳಿತ ಸಂತ್ರಸ್ತರ ಕುಟುಂಬಗಳನ್ನು ಭೇಟಿ ಮಾಡಲು ನಿರ್ಧರಿಸಿದ್ದಾರೆ. ಜೊತೆಗೆ, ಸಚಿವ ಆಧವ್ ಅರ್ಜುನ್ ಮತ್ತು ಕೆಲ ಆರೋಪಿಗಳು ಪ್ರಕರಣದ ಕುರಿತು ಸಾರ್ವಜನಿಕ ಹೇಳಿಕೆ ನೀಡುತ್ತಿದ್ದಾರೆ. ಸಿಬಿಐ ತನಿಖೆ ಬಾಕಿ ಇರುವಾಗ ಸಂತ್ರಸ್ತರ ಕುಟುಂಬಗಳೊಂದಿಗೆ ಸಿಎಂ ಸಂವಹನ ನಡೆಸುವುದನ್ನು ತಡೆಯಬೇಕು ಎಂದು ಕೋರಿ ಡಿಎಂಕೆ ಕಾರ್ಯದರ್ಶಿ ಆರ್. ಎಸ್. ಭಾರತಿ ಅವರು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಮೃತ ಮತ್ತು ಗಾಯಾಳುಗಳ ಕುಟುಂಬಗಳಿಗೆ ಸರ್ಕಾರಿ ಯೋಜನೆಗಳ ಲಾಭ, ಅನುಕಂಪದ ನೇಮಕಾತಿಗಳು ಮತ್ತು ಇತರೆ ಸವಲತ್ತುಗಳನ್ನು ನೀಡಲು ಮುಖ್ಯಮಂತ್ರಿ ವಿಜಯ್ ಕರೂರ್‌ಗೆ ಭೇಟಿ ನೀಡಲಿದ್ದಾರೆ ಎಂಬ ವರದಿಯಾಗಿದೆ. ಇದನ್ನೂ ಡಿಎಂಕೆ ತನ್ನ ಅರ್ಜಿಯಲ್ಲಿ ಪ್ರಶ್ನಿಸಿತ್ತು. ಜೊತೆಗೆ, ಪ್ರಕರಣದಲ್ಲಿ ಆರೋಪಿಗಳಾಗಿರುವ ಕೆಲವರು ಈಗ ಸಚಿವ ಸಂಪುಟದಲ್ಲಿ ಸ್ಥಾನ ಪಡೆದಿದ್ದಾರೆ. ಅವರು ಸಂತ್ರಸ್ತರನ್ನು ಭೇಟಿ ಮಾಡುವುದರಿಂದ ಸಾಕ್ಷಿಗಳ ಮೇಲೆ ಪ್ರಭಾವ ಬೀರುತ್ತಾರೆ ಎಂದೂ ದೂರಿತ್ತು.

# ಇ20 ಬಳಕೆಯಿಂದ ಹಾಳಾದ ಒಂದೇ ಒಂದು ವಾಹನ ತೋರಿಸಿ: ಗಡ್ಕರಿ ಸವಾಲು

**ನವದೆಹಲಿ,ಜು.7:** ಇ20 ಪೆಟ್ರೋಲ್ (ಶೇಕಡಾ 20 ರಷ್ಟು ಎಥೆನಾಲ್ ಮಿಶ್ರಿತ ಪೆಟ್ರೋಲ್) ಮಾರಾಟ ಕಡ್ಡಾಯಕ್ಕೆ ವಾಹನ ಮಾಲೀಕರಿಂದ ತೀವ್ರ ಆಕ್ರೋಶ ವ್ಯಕ್ತವಾಗುತ್ತಿದ್ದು, ಇ20 ಪೆಟ್ರೋಲ್ ಬಳಕೆಯಿಂದ ವಾಹನಗಳ ಎಂಜಿನ್ ಸಂಪೂರ್ಣವಾಗಿ ಹಾಳಾಗುತ್ತದೆ ಎಂಬ ಆರೋಪಗಳ ನಡುವೆ, ಕೇಂದ್ರ ಸಚಿವ ನಿತಿನ್ ಗಡ್ಕರಿ ಮಂಗಳವಾರ ಟೀಕಾಕಾರರಿಗೆ ಬಹಿರಂಗ ಸವಾಲು ಹಕಿದ್ದಾರೆ.

ನವದೆಹಲಿಯಲ್ಲಿ ನಡೆದ 'ವಿಕಸಿತ ಭಾರತ್ ಕಾನ್ಕ್ಲೇವ್' ಅನ್ನು ಉದ್ದೇಶಿಸಿ ಮಾತನಾಡಿದ ಗಡ್ಕರಿ, ಕಚ್ಚಾತೈಲದ ಮೇಲಿನ ಭಾರತದ ಅವಲಂಬನೆಯು ಆರ್ಥಿಕ ಹೊರೆಯಾಗಿದೆ – ಇಂಧನ ಆಮದುಗಾಗಿ ವಾರ್ಷಿಕ 22 ಲಕ್ಷ ಕೋಟಿ ರೂ.ಗಳನ್ನು ಖರ್ಚು ಮಾಡಲಾಗುತ್ತಿದೆ ಮತ್ತು ಇದು ಪರಿಸರಕ್ಕೆ ಅಪಾಯ. ರಾಷ್ಟ್ರದ ಪ್ರಗತಿಗೆ ಶುದ್ಧ ಇಂಧನ ಅಳವಡಿಕೆ ಅತ್ಯಂತ ನಿರ್ಣಾಯಕ ಎಂದರು.

"ಇ20 ಪೆಟ್ರೋಲ್‌ನಿಂದಾಗಿ ಒಂದೇ ಒಂದು ಕಾರಿಗೆ ಸಮಸ್ಯೆಯಾದ ಪ್ರಕರಣ ವರದಿಯಾಗಿಲ್ಲ. ಇ20 ಪೆಟ್ರೋಲ್ ಬಳಕೆಯಿಂದಾಗಿ ಸಮಸ್ಯೆಗಳನ್ನು ಎದುರಿಸಿದ ಯಾವುದೇ ಕಾರು ದೇಶದಲ್ಲಿ ಇದೆಯೇ? ಒಂದನ್ನು ತೋರಿಸಿ" ಎಂದು ಗಡ್ಕರಿ ಸವಾಲು ಹಾಕಿದರು.

ಹೆಚ್ಚಿನ ಎಥೆನಾಲ್ ಮಿಶ್ರಿತ ಪೆಟ್ರೋಲ್ ಬಳಕೆ ಬಗ್ಗೆ ಸುಳ್ಳು ನಿರೂಪಣೆಗಳನ್ನು ಹರಡಲಾಗುತ್ತಿದೆ. ಇವು ಪೇಯ್ಡ್ ಅಭಿಯಾನಗಳಾಗಿವೆ ಎಂದು ಅವರು ಹೇಳಿದರು.

ಭಾರತವು ಈಗಾಗಲೇ ಪೆಟ್ರೋಲ್‌ನೊಂದಿಗೆ ಶೇ.20 ರಷ್ಟು ಎಥೆನಾಲ್ ಮಿಶ್ರಣವನ್ನು ಯಶಸ್ವಿಯಾಗಿ ಸಾಧಿಸಿದೆ. ಇದು ಪರಿಣಾಮಕಾರಿಯಾಗಿ ಉರಿಯುವ ಇಂಧನವಾಗಿದೆ. ಆಮದು ಮಾಡಿಕೊಂಡ



ಕಚ್ಚಾ ತೈಲದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುತ್ತದೆ ಮತ್ತು ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡುತ್ತದೆ ಎಂದರು. ಗಂಡ್ಕರಿ ಅವರ ಕುಟುಂಬ ಸದಸ್ಯರ ಒಡೆತನದ ಕಂಪನಿಗಳು ಎಥೆನಾಲ್ ಉತ್ಪಾದನೆಯಲ್ಲಿ ತೊಡಗಿಕೊಂಡಿವೆ. ಅದಕ್ಕಾಗಿಯೇ ಅವರು ಎಥೆನಾಲ್ ಮಿಶ್ರಿತ ಪೆಟ್ರೋಲ್ ಅನ್ನು ಬಳಸುವಂತೆ ಒತ್ತಾಯಿಸುತ್ತಿದ್ದಾರೆ ಎಂಬ ಆರೋಪದ ಬಗ್ಗೆ ಪ್ರತಿಕ್ರಿಯಿಸಿದ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವರು, ನಮ್ಮ ಕುಟುಂಬ ಸದಸ್ಯರು ಸಕ್ಕರೆ ಕಾರ್ಖಾನೆಗಳನ್ನು ಹೊಂದಿದ್ದಾರೆ ನಿಜ. ಆದರೆ ಅವರ ಕಂಪನಿಗಳು ಎಥೆನಾಲ್ ಉತ್ಪಾದನೆಯ ಮೇಲೆ ಅವಲಂಬಿತವಾಗಿಲ್ಲ ಎಂದರು.

ವಾಹನಗಳಲ್ಲಿ ಶೇ.20ರಷ್ಟು ಎಥೆನಾಲ್ ಬೆರೆಸಿದ ಪೆಟ್ರೋಲ್ (ಇ20) ಬಳಕೆಯನ್ನು ಉತ್ತೇಜಿಸಲು ಕೇಂದ್ರ ಸರ್ಕಾರ ಕ್ರಮಗಳನ್ನು ಚುರುಕುಗೊಳಿಸಿದೆ. ಆದಾಗ್ಯೂ, ಆಟೋಮೊಬೈಲ್ ಉದ್ಯಮಕ್ಕೆ ಸಂಬಂಧಿಸಿದ ಒಂದಷ್ಟು ತಜ್ಞರು, ಈ ರೀತಿಯ ಪೆಟ್ರೋಲ್, ಇಂಧನ ದಕ್ಷತೆಯ ಮೇಲೆ ಅಂದರೆ ವಾಹನಗಳ ಮೈಲೇಜ್ ಮೇಲೆ ಪರಿಣಾಮ ಬೀರುತ್ತದೆ ಮತ್ತು ಎಂಜಿನ್ ಹಾಳಾಗುವ ಸಾಧ್ಯತೆ ಹೆಚ್ಚು ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

# ಮುಂಬೈನಲ್ಲಿ ಮಳೆ ಅಬ್ಬರಕ್ಕೆ 15ಕ್ಕೆ ಸಾವು




**ಮುಂಬೈ, ಜು. 7:** ವಾಣಿಜ್ಯ ನಗರಿ ಮುಂಬೈನಲ್ಲಿ ಮುಂಗಾರು ಮಳೆಯ ಆರ್ಭಟ ಮುಂದುವರಿದಿದ್ದು, ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ನಗರದಲ್ಲಿ ಎಡಬಿಡದೆ ಸುರಿಯುತ್ತಿರುವ ಭಾರಿ ಮಳೆಯಿಂದಾಗಿ ಹಲವು ತಗ್ಗು ಪ್ರದೇಶಗಳು ಜಲಾವೃತಗೊಂಡಿವೆ. ರಸ್ತೆಗಳಲ್ಲಿ ನೀರು ನಿಂತಿರುವುದರಿಂದ ವಾಹನ ಸಂಚಾರಕ್ಕೆ ತೀವ್ರ ಅಡ್ಡಿಯಾಗಿದ್ದು, ಎಲ್ಲೆಡೆ ಟ್ರಾಫಿಕ್ ದಟ್ಟಣೆ ಉಂಟಾಗಿದೆ.

ಭಾರಿ ಮಳೆಯ ಮುನ್ಸೂಚನೆ ಹಿನ್ನೆಲೆಯಲ್ಲಿ ಭಾರತೀಯ ಹವಾಮಾನ ಇಲಾಖೆಯು ಮುಂಬೈಗೆ ರೆಡ್ ಅಲರ್ಟ್ ಘೋಷಿಸಿದೆ. ಪರಿಸ್ಥಿತಿಯ ಗಂಭೀರತೆಯನ್ನು ಅರಿತು, ಐಟಿ ಸೇರಿದಂತೆ ವಿವಿಧ ವಲಯದ ಉದ್ಯೋಗಿಗಳಿಗೆ ಮನೆಯಿಂದಲೇ ಕೆಲಸ ಮಾಡಲು ಸೂಚಿಸಲಾಗಿದೆ. ಅತ್ಯಗತ್ಯವಿದ್ದರೆ ಮಾತ್ರ ಮನೆಯಿಂದ ಹೊರಬರುವಂತೆ ನಾಗರಿಕರಿಗೆ ಆಡಳಿತ ಮುನ್ನೆಚ್ಚರಿಕೆ ನೀಡಿದೆ. ಶಾಲಾ ಕಾಲೇಜುಗಳಿಗೆ ಕೂಡ ರಜೆ ಘೋಷಿಸಲಾಗಿದೆ.

ಪುಣೆ, ಥಾಣೆ, ಮತ್ತು ರಾಯಗಡ ಜಿಲ್ಲೆಗಳಲ್ಲೂ ವರುಣನ ರೌದ್ರಾವತಾರ ಮುಂದುವರಿದಿದೆ. ಇದರೊಂದಿಗೆ ಮಹಾರಾಷ್ಟ್ರದಾದ್ಯಂತ ಮಳೆ ಸಂಬಂಧಿತ ಅವಘಡಗಳಿಗೆ ಬಲಿಯಾದವರ ಸಂಖ್ಯೆ 15ಕ್ಕೆ ಏರಿಕೆಯಾಗಿದೆ ಎಂದು ವರದಿಯಾಗಿದೆ.

ಎಕ್ಸ್‌ಪ್ರೆಸ್‌ವೇಯಲ್ಲಿ ಭೂಕುಸಿತ ಸಂಭವಿಸಿದ್ದು, ಈ ಪ್ರಮುಖ ಹೆದ್ದಾರಿಯಲ್ಲಿ ವಾಹನ ಸಂಚಾರ ಸಂಪೂರ್ಣವಾಗಿ ಅಸ್ತವ್ಯಸ್ತಗೊಂಡಿದೆ. ರಸ್ತೆ ತೆರವುಗೊಳಿಸುವ ಕಾರ್ಯ ಭರದಿಂದ ಸಾಗುತ್ತಿದೆ. ಥಾಣೆ ಮತ್ತು ರಾಯಗಢ ಜಿಲ್ಲೆಗಳಲ್ಲಿ ನದಿಗಳು ಉಕ್ಕಿ ಹರಿಯುತ್ತಿದ್ದು, ನೆರೆ ಭೀತಿ ಎದುರಾಗಿದೆ. ಅಪಾಯದ ಅಂಚಿನಲ್ಲಿರುವ ಮತ್ತು ತಗ್ಗು ಪ್ರದೇಶದ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗುತ್ತಿದೆ. ಮುಂಬರುವ ದಿನಗಳಲ್ಲೂ ಮಳೆಯ ಅಬ್ಬರ ಮುಂದುವರಿಯುವ ಮುನ್ಸೂಚನೆ ಇರುವುದರಿಂದ ಸರ್ಕಾರ ಮತ್ತು ವಿಪತ್ತು ನಿರ್ವಹಣಾ ಪಡೆಗಳು ಕಟ್ಟೆಚ್ಚರ ವಹಿಸಿವೆ.

# ಹಳೆಯ ಕಾರುಗಳಿಗೆ ಇ20 ಇಂಧನ ಕಂಟಕವಾಗಲಿದೆಯೇ?

**ನವದೆಹಲಿ, ಜು. 7:** ವಾಹನಗಳ ಇಂಧನ ವ್ಯವಸ್ಥೆಗೆ ಸಂಬಂಧಿಸಿದಂತೆ ಮಹತ್ವದ ಮಾಹಿತಿಯೊಂದು ಹೊರಬಿದ್ದಿದೆ. ಹಳೆಯ ಮಾದರಿಯ, ಅಂದರೆ ಇ10 (ಶೇ 10ರಷ್ಟು ಎಥೆನಾಲ್ ಮಿಶ್ರಿತ) ಇಂಧನ ಬಳಕೆಗೆ ವಿನ್ಯಾಸಗೊಳಿಸಲಾದ ಕಾರುಗಳಲ್ಲಿ ಇ20 (ಶೇ 20ರಷ್ಟು ಎಥೆನಾಲ್ ಮಿಶ್ರಿತ) ಇಂಧನವನ್ನು ಬಳಸುವುದರಿಂದ ವಾಹನದ ರಬ್ಬರ್ ಬಿಡಿಭಾಗಗಳಿಗೆ ಹಾನಿಯಾಗುವ ಸಾಧ್ಯತೆಯಿದೆ ಎಂದು ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ ಸಿದ್ಧಪಡಿಸಿರುವ ವರದಿ ತಿಳಿಸಿದೆ.

ಈ ವರದಿ ಇನ್ನೂ ಅಧಿಕೃತವಾಗಿ ಪ್ರಕಟಗೊಂಡಿಲ್ಲವಾದರೂ, ವಾಹನ ತಯಾರಕರಿಗೆ ಮತ್ತು ಸರ್ಕಾರಕ್ಕೆ ಇದು ಪ್ರಮುಖ ಉಲ್ಲೇಖವಾಗಲಿದೆ. ಹೊಸ ಇಂಧನ ಬಳಕೆಯಿಂದ ಹೋಸ್, ಗ್ಯಾಸ್ಕೆಟ್, ಸೀಲ್‌ಗಳು ಮತ್ತು ಓ–ರಿಂಗ್‌ಗಳಂತಹ ರಬ್ಬರ್ ಭಾಗಗಳು ಬೇಗನೆ ಸವೆತಕ್ಕೆ ಒಳಗಾಗಲಿದ್ದು, ಇವುಗಳನ್ನು ಬದಲಾಯಿಸುವ ಅನಿವಾರ್ಯತೆ ಎದುರಾಗಬಹುದು ಎಂದು ವರದಿಯಲ್ಲಿ ಎಚ್ಚರಿಸಲಾಗಿದೆ.

ಎಂಜಿನ್ ಬಾಳಿಕೆ ಪರೀಕ್ಷೆಯಲ್ಲಿನ ಆತಂಕ:ವಾಹನಗಳ




ಲೋಹದ ಬಿಡಿಭಾಗಗಳ ಮೇಲೆ ಇ20 ಇಂಧನ ಯಾವುದೇ ಪ್ರತಿಕೂಲ ಪರಿಣಾಮ ಬೀರಿಲ್ಲ ಹಾಗೂ ಮಾಲಿನ್ಯ ಹೊರಸೂಸುವಿಕೆ ಪ್ರಮಾಣವೂ ನಿಯಮಾವಳಿಯ ಮಿತಿಯಲ್ಲೇ ಇದೆ. ಆದರೆ, ನಾಲ್ಕು ಚಕ್ರದ ವಾಹನಗಳ ಎಂಜಿನ್ ಬಾಳಿಕೆ ಪರೀಕ್ಷೆಯ ವೇಳೆ ಕೆಲವು ಸಮಸ್ಯೆಗಳು ಗೋಚರಿಸಿವೆ. ಬಿಎಸ್–6 ಟರ್ಬೋ ಚಾರ್ಜ್ಡ್ ಎಂಜಿನ್‌ವೊಂದು 265 ಗಂಟೆಗಳ ಬಳಕೆಯ ನಂತರ ಸಮಸ್ಯೆ ಎದುರಿಸಿದೆ.

ಮತ್ತೊಂದು ವಾಹನ ತಯಾರಕ ಕಂಪನಿಯ ಎಂಜಿನ್ 809 ಗಂಟೆಗಳ ಪರೀಕ್ಷೆಯ ಬಳಿಕ ಎಕ್ಸಾಸ್ಟ್ ವಾಲ್ವ್‌ನ ಉಷ್ಣ–ಯಾಂತ್ರಿಕ ವೈಫಲ್ಯ ಕಂಡಿದೆ. ಸಾಮಾನ್ಯವಾಗಿ ಇಂತಹ ಎಂಜಿನ್ ಪರೀಕ್ಷೆಗಳನ್ನು 2,000 ಗಂಟೆಗಳ ಕಾಲ ನಡೆಸಲಾಗುತ್ತದೆ ಎಂಬುದು ಗಮನಾರ್ಹ. ಆದರೆ, ದ್ವಿಚಕ್ರ ವಾಹನಗಳ ವಿಚಾರದಲ್ಲಿ ಇ20 ಇಂಧನದಿಂದ ಯಾವುದೇ ಅಡ್ಡಪರಿಣಾಮ ಕಂಡುಬಂದಿಲ್ಲ ಎಂದು ಮೂರು ಪ್ರಮುಖ ತಯಾರಕ ಕಂಪನಿಗಳ ಪರೀಕ್ಷೆಯಿಂದ ದೃಢಪಟ್ಟಿದೆ.

ವಾಹನದ ಬಿಡಿಭಾಗಗಳ ಮೇಲಿನ ಪರಿಣಾಮದ ಜೊತೆಗೆ ಇಂಧನ ದಕ್ಷತೆಯ ಕುರಿತೂ ವರದಿ ಬೆಳಕು ಚೆಲ್ಲಿದೆ. ಇ10 ಇಂಧನಕ್ಕೆ ಹೋಲಿಸಿದರೆ, ಇ20 ಇಂಧನ ಬಳಸುವ ವಾಹನಗಳ ಇಂಧನ ಬಳಕೆಯ ಪ್ರಮಾಣ ಶೇಕಡಾ 2 ರಿಂದ 6 ರಷ್ಟು ಹೆಚ್ಚಾಗಲಿದೆ. ಅಂದರೆ, ಈ ವಾಹನಗಳ ಮೈಲೇಜ್ ಕೊಂಚ ಕಡಿಮೆಯಾಗಲಿದೆ. ಆದರೆ, ಈ ಮೈಲೇಜ್ ಇಳಿಕೆಯ ಪ್ರಮಾಣವು ಆಯಾ ವಾಹನದ ಮಾದರಿ ಮತ್ತು ಎಂಜಿನ್ ಸಾಮರ್ಥ್ಯಕ್ಕೆ ಅನುಗುಣವಾಗಿ ಭಿನ್ನವಾಗಿರಲಿದೆ ಎಂದು ವರದಿ ಉಲ್ಲೇಖಿಸಿದೆ.

# ಅಹಮದಾಬಾದ್ ಸ್ಫೋಟ ಪ್ರಕರಣ: 38 ಮಂದಿಗೆ ಮರಣದಂಡನೆ, 11 ಜನರಿಗೆ ಜೀವಾವಧಿ ಶಿಕ್ಷೆ

**ಅಹಮದಾಬಾದ್,ಜು.7:** 2008ರ ಅಹಮದಾಬಾದ್ ಸರಣಿ ಬಾಂಬ್ ಸ್ಫೋಟ ಪ್ರಕರಣದಲ್ಲಿ ಗುಜರಾತ್ ಹೈಕೋರ್ಟ್ ಮಂಗಳವಾರ ಅತ್ಯಂತ ಮಹತ್ವದ ತೀರ್ಪು ಪ್ರಕಟಿಸಿದೆ. ಪ್ರಕರಣದ 38 ಅಪರಾಧಿಗಳಿಗೆ ಮರಣದಂಡನೆ ಶಿಕ್ಷೆ ಮತ್ತು 11 ಮಂದಿಗೆ ಜೀವಾವಧಿ ಶಿಕ್ಷೆ ವಿಧಿಸಿದ್ದ ವಿಶೇಷ ನ್ಯಾಯಾಲಯದ ತೀರ್ಪನ್ನು ಎತ್ತಿಹಿಡಿದಿದೆ.

ನ್ಯಾಯಮೂರ್ತಿಗಳಾದ ಎ. ವೈ. ಕೊಗ್ಜೆ ಮತ್ತು ಎಸ್. ಜೆ. ದೇವ್ ಅವರನ್ನೊಳಗೊಂಡ ಪೀಠವು ಈ ಆದೇಶ ಪ್ರಕಟಿಸಿದೆ. 2022ರ ಫೆಬ್ರವರಿ 8ರಂದು ವಿಶೇಷ ನ್ಯಾಯಾಲಯವು ನೀಡಿದ್ದ 7,015 ಪುಟಗಳ ಸುದೀರ್ಘ ತೀರ್ಪನ್ನು ಪ್ರಶ್ನಿಸಿ ಅಪರಾಧಿಗಳು ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದರು. ಅಲ್ಲದೆ, ಭಾರತೀಯ ಕಾನೂನಿನ ಪ್ರಕಾರ, ಕೆಳ ನ್ಯಾಯಾಲಯವು ನೀಡುವ ಮರಣದಂಡನೆಯನ್ನು ಹೈಕೋರ್ಟ್ ದೃಢೀಕರಿಸದ ಹೊರತು ಜಾರಿಗೊಳಿಸಲಾಗುವುದಿಲ್ಲ. ಆದ್ದರಿಂದ, ಶಿಕ್ಷೆಯ ದೃಢೀಕರಣಕ್ಕಾಗಿ ರಾಜ್ಯ ಸರ್ಕಾರವೂ ಅರ್ಜಿ ಸಲ್ಲಿಸಿತ್ತು.ಅಪರಾಧಿಗಳ ಮೇಲ್ಮನವಿಗಳು ಮತ್ತು ಸರ್ಕಾರದ ಅರ್ಜಿಗಳನ್ನು ಹೈಕೋರ್ಟ್‌ನ ಪೀಠವು ವಿಚಾರಣೆ ನಡೆಸಿದೆ. ಅಪರಾಧಿಗಳು ಸಲ್ಲಿಸಿದ್ದ ಅರ್ಜಿಗಳನ್ನು ವಜಾಗೊಳಿಸಿರುವ ಹೈಕೋರ್ಟ್, ಗಲ್ಲು ಶಿಕ್ಷೆ ಮತ್ತು ಜೀವಾವಧಿ ಶಿಕ್ಷೆಯನ್ನು ಎತ್ತಿಹಿಡಿದಿದೆ.ಜೊತೆಗೆ, ಸ್ಫೋಟದಲ್ಲಿ ಮೃತಪಟ್ಟ ಸಂತ್ರಸ್ತರ ಕುಟುಂಬಗಳಿಗೆ ತಲಾ 10 ಲಕ್ಷ ರೂ., ಗಂಭೀರವಾಗಿ ಗಾಯಗೊಂಡ




ಸಂತ್ರಸ್ತರಿಗೆ 5 ಲಕ್ಷ ರೂ. ಹಾಗೂ ಸಣ್ಣಪುಟ್ಟ ಗಾಯಗಳಾದವರಿಗೆ 1 ಲಕ್ಷ ರೂ. ಪರಿಹಾರ ನೀಡುವಂತೆ ಗುಜರಾತ್ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ. ಪರಿಹಾರದ ಹಣವನ್ನು 2027ರ ಮಾರ್ಚ್ 31ರೊಳಗೆ ವಿತರಿಸುವಂತೆ ಗಡುವು ವಿಧಿಸಿದೆ. 2008ರ ಜುಲೈ 26ರಂದು ಅಹಮದಾಬಾದ್ ನಗರದಾದ್ಯಂತ ಕೆಲವೇ ನಿಮಿಷಗಳ ಅಂತರದಲ್ಲಿ ಸರಣಿ ಬಾಂಬ್ ಸ್ಫೋಟಗಳು ಸಂಭವಿಸಿದ್ದವು. ಈ ಭೀಕರ ದುರಂತದಲ್ಲಿ 56 ಮಂದಿ ಪ್ರಾಣ ಕಳೆದುಕೊಂಡಿದ್ದರೆ, 246ಕ್ಕೂ ಹೆಚ್ಚು ಜನರು ತೀವ್ರವಾಗಿ ಗಾಯಗೊಂಡಿದ್ದರು. ಇದಾದ ಎರಡು ದಿನಗಳ ನಂತರ ಸೂರತ್ ನಗರದಲ್ಲೂ ಜೀವಂತ ಬಾಂಬುಗಳು ಪತ್ತೆಯಾಗಿದ್ದವು. 2002ರಲ್ಲಿ ನಡೆದಿದ್ದ ಗೋದ್ರಾ ನರಮೇಧಕ್ಕೆ ಪ್ರತಿಕಾರವಾಗಿ ಈ ಕೃತ್ಯ ಎಸಗಲಾಗಿದೆ ಎಂದು ಆರೋಪಿಗಳು ಕಳುಹಿಸಿದ್ದ ಇ–ಮೇಲ್‌ಗಳಲ್ಲಿ ಹೇಳಲಾಗಿದೆ ಎಂದು ವರದಿಯಾಗಿತ್ತು.

ಅಹಮದಾಬಾದ್‌ನಲ್ಲಿ ದಾಖಲಾಗಿದ್ದ 20 ಮತ್ತು ಸೂರತ್‌ನಲ್ಲಿ ದಾಖಲಾಗಿದ್ದ 15 ಸೇರಿದಂತೆ ಒಟ್ಟು 35 ಪ್ರತ್ಯೇಕ ಪ್ರಕರಣಗಳನ್ನು ಒಟ್ಟಿಗೆ ಸೇರಿಸಿ ಸುದೀರ್ಘ ವಿಚಾರಣೆ ನಡೆಸಲಾಗಿತ್ತು. ವಿಚಾರಣೆಯ ವೇಳೆ ಪೊಲೀಸರು ನೂರಕ್ಕೂ ಹೆಚ್ಚು ಜನರನ್ನು ಆರೋಪಿಗಳನ್ನಾಗಿ ಹೆಸರಿಸಿದ್ದರು. ಆ ಪೈಕಿ 78 ಆರೋಪಿಗಳನ್ನು ಸುದೀರ್ಘ ಕಾನೂನು ಪ್ರಕ್ರಿಯೆಗೆ ಒಳಪಡಿಸಲಾಗಿತ್ತು. ಈ ದೀರ್ಘಾವಧಿಯ ವಿಚಾರಣೆಯಲ್ಲಿ 9 ಬೇರೆ ಬೇರೆ ನ್ಯಾಯಾಧೀಶರ ಸಮ್ಮುಖದಲ್ಲಿ ಪ್ರಾಸಿಕ್ಯೂಷನ್ ಪರವಾಗಿ 1,163 ಸಾಕ್ಷಿಗಳನ್ನು ವಿಚಾರಣೆಗೆ ಒಳಪಡಿಸಲಾಗಿತ್ತು. ಅದರಲ್ಲಿ 26 ಪ್ರಮುಖ ಸಾಕ್ಷಿಗಳ ಸುರಕ್ಷತೆಯ ದೃಷ್ಟಿಯಿಂದ ಅವರ ಗುರುತನ್ನು ಗೌಪ್ಯವಾಗಿಡಲಾಗಿತ್ತು.

ಅಂತಿಮವಾಗಿ 2022ರ ಫೆಬ್ರವರಿಯಲ್ಲಿ ವಿಶೇಷ ನ್ಯಾಯಾಲಯವು 49 ಜನರನ್ನು ಅಪರಾಧಿಗಳು ಎಂದು ಘೋಷಿಸಿತ್ತು. ಸೂಕ್ತ ಸಾಕ್ಷ್ಯಾಧಾರಗಳಿಲ್ಲದ ಕಾರಣ ಮುಬೀನ್ ಶೇಖ್ ಮತ್ತು ಮನ್ಸೂರ್ ಪೀರ್‌ಭಾಯ್ ಸೇರಿದಂತೆ 28 ಜನರನ್ನು ಖುಲಾಸೆಗೊಳಿಸಿತ್ತು. ಶಿಕ್ಷೆಗೆ ಒಳಗಾಗಿರುವ 49 ಅಪರಾಧಿಗಳಿಗೆ ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ (ಯುಎಪಿಎ), ಭಾರತೀಯ ದಂಡ ಸಂಹಿತೆ (ಐಪಿಸಿ), ಸ್ಫೋಟಕ ವಸ್ತುಗಳ ಕಾಯ್ದೆ ಮತ್ತು ಸಾರ್ವಜನಿಕ ಆಸ್ತಿಗೆ ಹಾನಿ ತಡೆ ಕಾಯ್ದೆಯಡಿ ಕಠಿಣ ಶಿಕ್ಷೆಯನ್ನು ವಿಧಿಸಲಾಗಿತ್ತು. ಸೆಷನ್ಸ್ ನ್ಯಾಯಾಲಯ ವಿಧಿಸಿದ್ದ ಆ ತೀರ್ಪನ್ನು ಹೈಕೋರ್ಟ್ ಎತ್ತಿಹಿಡಿದೆ.

# ಜಮ್ಮು–ಕಾಶ್ಮೀರ: ದೋಡಾದ ಥಾತ್ರಿ ಪಟ್ಟಣದಲ್ಲಿ ಮೇಘಸ್ಫೋಟ

**ಜಮ್ಮು, ಜು.7:** ಜಮ್ಮು ಮತ್ತು ಕಾಶ್ಮೀರದ ದೋಡಾ ಜಿಲ್ಲೆಯ ಥಾತ್ರಿ ಪ್ರದೇಶದಲ್ಲಿ ಮೇಘಸ್ಫೋಟದಿಂದ ಉಂಟಾದ ಹಠಾತ್ ಪ್ರವಾಹ ಮತ್ತು ಮಣ್ಣು ಕುಸಿತದಿಂದ ಹಲವಾರು ಮನೆಗಳು ಮತ್ತು ವಾಹನಗಳು ಹಾನಿಗೊಳಗಾಗಿವೆ ಎಂದು ವರದಿಯಾಗಿದೆ. ಮಂಗಳವಾರ ಬೆಳಗಿನ ಜಾವ 2:30 ರ ಸುಮಾರಿಗೆ ಥಾತ್ರಿ ಪಟ್ಟಣದಲ್ಲಿ ಮೇಘಸ್ಫೋಟ ಸಂಭವಿಸಿದ್ದು, ಇದರಿಂದಾಗಿ ಹಠಾತ್ ಪ್ರವಾಹ ಉಂಟಾಗಿ ಆ ಪ್ರದೇಶದಲ್ಲಿ ವ್ಯಾಪಕ ನಷ್ಟವಾಗಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. "ವರದಿಗಳ ಪ್ರಕಾರ, ಥಾತ್ರಿ ಮಾರುಕಟ್ಟೆಯು ವ್ಯಾಪಕ ಹಾನಿಯನ್ನು ಅನುಭವಿಸಿದೆ, ಹಲವಾರು ಮನೆಗಳು ಬಂಡೆಗಳು, ಮಣ್ಣು ಮತ್ತು ಅವಶೇಷಗಳ ಅಡಿಯಲ್ಲಿ ಹೂತುಹೋಗಿವೆ. ಹಲವಾರು ವಾಹನಗಳು ಹಾನಿಗೊಳಗಾಗಿವೆ ಅಥವಾ ಕೊಚ್ಚಿಹೋಗಿವೆ ಎಂದು ವರದಿಯಾಗಿದೆ" ಎಂದು ಅವರು ಹೇಳಿದರು. "ಹಾನಿಯ ನಿಖರವಾದ ಪ್ರಮಾಣವನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ" ಎಂದು ಮೂಲಗಳು ತಿಳಿಸಿವೆ, ಘಟನೆಯಲ್ಲಿ ಯಾವುದೇ ಗಾಯಗಳು ಅಥವಾ ಜೀವಹಾನಿಯ ವರದಿಗಳಿಲ್ಲ ಎಂದು ಹೇಳಿದರು. "ಮಣ್ಣು, ನೀರು ಮತ್ತು ಅವಶೇಷಗಳು



ಅನೇಕ ಮನೆಗಳಿಗೆ ಪ್ರವೇಶಿಸಿವೆ, ಇದರಿಂದಾಗಿ ನಿವಾಸಿಗಳು ಅವಶೇಷಗಳನ್ನು ತೆರವುಗೊಳಿಸಲು ಹೆಣಗಾಡುತ್ತಿದ್ದಾರೆ" ಎಂದು ಅವರು ಹೇಳಿದರು, ಹಲವಾರು ಕುಟುಂಬಗಳು ರಸ್ತೆಗಳಲ್ಲಿ ಉಳಿಯಬೇಕಾಯಿತು. ದೋಡಾ–ಕಿಶ್ತ್ವಾರ್ ರಾಷ್ಟ್ರೀಯ ಹೆದ್ದಾರಿಯಲ್ಲಿ ಭಾರೀ ಪ್ರಮಾಣದಲ್ಲಿ ಮಣ್ಣು ಮತ್ತು ಅವಶೇಷಗಳು ಸಂಗ್ರಹವಾಗಿರುವುದರಿಂದ ವಾಹನ ಸಂಚಾರಕ್ಕೆ ಅಡ್ಡಿಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

"ಘಟನೆಯ ನಂತರದ ಘಟನೆಗಳನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ ಮತ್ತು ಪೊಲೀಸ್ ಸಿಬ್ಬಂದಿಯೊಂದಿಗೆ ಆಡಳಿತ ಅಧಿಕಾರಿಗಳ ತಂಡಗಳು ಸ್ಥಳದಲ್ಲಿದ್ದು ಪರಿಸ್ಥಿತಿಯನ್ನು ನಿರ್ಣಯಿಸುತ್ತಿವೆ" ಎಂದು ಅವರು ಹೇಳಿದರು. ಇದಕ್ಕೂ ಮೊದಲು, ದೋಡಾ ಜಿಲ್ಲೆಯ ಭಲೆಸ್ಸಾ ಪ್ರದೇಶ ಮತ್ತು ಕಿಶ್ತ್ವಾರ್ ಜಿಲ್ಲೆಯ 540 ಮೆಗಾವ್ಯಾಟ್ ಕ್ವಾರ್ ಜಲವಿದ್ಯುತ್ ಯೋಜನೆಯ ಬಳಿ ಮೇಘಸ್ಫೋಟ ಸಂಭವಿಸಿದೆ.

# ರಾಮಮಂದಿರ ಟ್ರಸ್ಟ್ ವ್ಯಯಿಸಿದ 124 ಕೋಟಿ ರೂ. ಬಗ್ಗೆ ತನಿಖೆ

**ನವದೆಹಲಿ,ಜು.7:** ರಾಮಮಂದಿರ ದೇಣಿಗೆ ದುರುಪಯೋಗ ಪ್ರಕರಣದ ಕುರಿತು ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ, ರಾಮ ಮಂದಿರ ಟ್ರಸ್ಟ್ ವಿವಿಧ ಪ್ರಮುಖ ಕಾರ್ಯಕ್ರಮಗಳಿಗೆ ವ್ಯಯಿಸಿದ 124 ಕೋಟಿ ರೂ.ಗೂ ಹೆಚ್ಚು ಮೊತ್ತದ ಹಣಕಾಸಿನ ಬಗ್ಗೆಯೂ ತನಿಖೆಯನ್ನು ನಡೆಸುತ್ತಿದೆ ಎಂದು ಮೂಲಗಳು ತಿಳಿಸಿವೆ.

ಈ ವೆಚ್ಚದಲ್ಲಿ 2024ರ ಜನವರಿಯಲ್ಲಿ ನಡೆದ ರಾಮಮಂದಿರ ಪ್ರಾಣಪ್ರತಿಷ್ಠಾಪನೆ, 2025ರ ಮಹಾಕುಂಭಕ್ಕೆ ಸಂಬಂಧಿಸಿದ ವ್ಯವಸ್ಥೆ, 2025ರ ನವೆಂಬರ್‌ನಲ್ಲಿ ನಡೆದ ಧ್ವಜಾರೋಹಣ ಕಾರ್ಯಕ್ರಮದ ಖರ್ಚು ವೆಚ್ಚಗಳು ಸೇರಿದೆ.

ಮೂಲಗಳ ಪ್ರಕಾರ, ಕಳೆದ ಎರಡು ವರ್ಷಗಳ ಟ್ರಸ್ಟ್‌ನ ಹಣಕಾಸು ದಾಖಲೆಗಳ ಪರಿಶೀಲನೆಯನ್ನು ಎಸ್‌ಐಟಿ ನಡೆಸುತ್ತಿದೆ. ಲೆಕ್ಕಪರಿಶೋಧನಾ ವರದಿ, ಪಾವತಿ, ಚಾರ್ಟರ್ಡ್ ಅಕೌಂಟೆಂಟ್ ದಾಖಲೆಗಳು ಮತ್ತು ವೆಚ್ಚದ ವಿವರಗಳನ್ನು ಪರಿಶೀಲಿಸಿ, ಟ್ರಸ್ಟ್‌ನ ಹಣವನ್ನು ನಿಗದಿತ ಹಣಕಾಸು ನಿಯಮಗಳು ಮತ್ತು ಅನುಮೋದನೆಗಳಿಗೆ ಅನುಗುಣವಾಗಿ ಬಳಸಲಾಗುತ್ತಿದೆಯಾ ಎಂಬ ಬಗ್ಗೆ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

ಎಸ್‌ಐಟಿಯು ವಿಶಾಲವಾದ ಲೆಕ್ಕಪರಿಶೋಧನೆಯ ಭಾಗವಾಗಿ ವೆಚ್ಚಗಳ ಬಗ್ಗೆ ಪರಿಶೀಲಿಸುತ್ತಿದೆ. ಆದರೆ, ಹಣಕಾಸು ಅಕ್ರಮಗಳ ಬಗ್ಗೆ ಯಾವುದೇ ತೀರ್ಮಾನಕ್ಕೆ ಬಂದಿಲ್ಲ ಎಂದು ಮೂಲಗಳು ತಿಳಿಸಿವೆ. ರಾಮಮಂದಿರದಲ್ಲಿ ಭಕ್ತರ ದೇಣಿಗೆ ದುರುಪಯೋಗದ ಆರೋಪಗಳ ಕುರಿತು ತನಿಖೆಗಾಗಿ ಉತ್ತರ ಪ್ರದೇಶ ಸರಕಾರ ಎಸ್‌ಐಟಿಯನ್ನು ರಚಿಸಿತ್ತು. ತನಿಖೆಯ ಭಾಗವಾಗಿ ಹಲವಾರು ಆರೋಪಿಗಳನ್ನು ಬಂಧಿಸಲಾಗಿದೆ. ಇದೀಗ ತನಿಖೆಯು ದೇಣಿಗೆ ದುರುಪಯೋಗ ಆರೋಪವಲ್ಲದೆ ಟ್ರಸ್ಟ್‌ನ ಹಣಕಾಸು ವ್ಯವಹಾರ, ವೆಚ್ಚಗಳು, ಅನುಮೋದನೆ ಪ್ರಕ್ರಿಯೆ ಬಗ್ಗೆಯೂ ನಡೆಯುತ್ತಿದೆ.

# 45 ದಿನಗಳಲ್ಲಿ 70 ಬಾರಿ ಹುಂಡಿ ಹಣ ಕಳ್ಳತನ

## ಸಿಸಿಟಿವಿ ದೃಶ್ಯಗಳಲ್ಲಿ ಸಿಕ್ತು ಕಳ್ಳತನಕ್ಕೆ ಪ್ರಬಲ ಸಾಕ್ಷ್ಯ

**ಲಖನೌ,ಜು.7:** ಅಯೋಧ್ಯೆಯ ಶ್ರೀರಾಮ ಮಂದಿರದ ಹುಂಡಿ ಹಣ ಕಳ್ಳತನ ಪ್ರಕರಣಕ್ಕೆ ಸ್ಫೋಟಕ ತಿರುವು ಸಿಕ್ಕಿದೆ. ಬಂಧಿತ ಎಂಟು ಆರೋಪಿಗಳ ರಾಮಭಕ್ತರ ಹಣ ಲೂಟಿ ಹೊಡೆಯುತ್ತಿರುವುದಕ್ಕೆ ಪ್ರಬಲ ಸಾಕ್ಷಿ ಪತ್ತೆಯಾಗಿದೆ. 45 ದಿನಗಳ ಅಂತರದಲ್ಲಿ 70 ಕ್ಕೂ ಅಧಿಕ ಬಾರಿ ಕಳ್ಳತನವಾಗಿದ್ದು ಹಣ ಕೊಳ್ಳೆ ಹೊಡೆಯುವ ವಿಡಿಯೋಗಳು ಎಸ್‌ಐಟಿ ಅಧಿಕಾರಿಗಳಿಗೆ ಸಿಕ್ಕಿದೆ. ಹುಂಡಿ ಹಣ ಕಳ್ಳತನದ ಬಗ್ಗೆ ಮಾಹಿತಿ ಬಹಿರಂಗವಾದ ಬಳಿಕ ಮೊದಲ ಬಾರಿಗೆ ಟ್ರಸ್ಟ್ ಸಭೆ ನಡೆಸಿತು. ಸಭೆಯಲ್ಲಿ ಸರ್ಕಾರಕ್ಕೆ ಎಸ್‌ಐಟಿ ನೀಡಿದ ವರದಿಯ ಪ್ರಮುಖ ಅಂಶಗಳನ್ನು ವಿವರಿಸಲಾಯಿತು. ಈ ವರದಿಯಲ್ಲಿ ಶ್ರೀರಾಮ ಮಂದಿರದಲ್ಲಿ ದುರುಳರು ದೇಣಿಗೆ ಲೂಟಿ ಹೊಡೆದ ಬಗ್ಗೆ ಅದಕ್ಕೆ ಕಾರಣಗಳೇನು ಎನ್ನುವುದು ವಿವರಿಸಲಾಗಿದೆ.

ಹುಂಡಿ ಹಣ ಎಣಿಕೆ ಪ್ರಕ್ರಿಯೆ ನಿಯಮಗಳ ಸಡಿಲಿಕೆಯೇ ಅಕ್ರಮಕ್ಕೆ ಪ್ರಮುಖ ಕಾರಣ ಎನ್ನಲಾಗಿದೆ. ಎಣಿಕೆ ಕಾರ್ಯದ ಜವಬ್ದಾರಿ ಹೊತ್ತಿದ್ದ ಅನಿಲ್ ಮಿಶ್ರಾ ನಿರ್ಲಕ್ಷ್ಯದಿಂದ ಈ ಘಟನೆ ನಡೆದಿದ್ದು, ಟಿನ್ನು ಯಾದವ್ ಕಳ್ಳತನದ ಪ್ರಮುಖ ರೂವಾರಿ ಎಂದು ವರದಿಯಲ್ಲಿ ಉಲ್ಲೇಖಿಸಿದೆ.

ಹಣ ಎಣಿಕೆಗೆ ಎಸ್‌ಬಿಐ ನಿಯಮಗಳನ್ನು ರೂಪಿಸಲಾಗಿತ್ತು ಆದರೆ ಈ ನಿಯಮಗಳನ್ನು ಹೊಂದಾಣಿಕೆ ಮಾಡಿಕೊಳ್ಳಲಾಗಿತ್ತು, ನಿಯಮಗಳ ಸಡಿಲಿಕೆಯನ್ನು ದುರ್ಬಳಕೆ ಮಾಡಿಕೊಂಡು ಹಣ ದೋಚಿದೆ ಏಪ್ರಿಲ್ 27 ಮೊದಲು ನಿರಂತರವಾಗಿ ಕಳ್ಳತನ ನಡೆದಿದೆ 45 ದಿನಗಳಲ್ಲಿ 70 ಬಾರಿ ಕಳ್ಳತನ ಮಾಡಿದಕ್ಕೆ ಸಿಸಿಟಿವಿ ದೃಶ್ಯಗಳು ಲಭ್ಯವಾಗಿದೆ. ಸಿಸಿಟಿವಿ ದೃಶ್ಯಗಳನ್ನು 180 ದಿನಗಳ ಕಾಲ ಸಂರಕ್ಷಿಸಬೇಕು ಆದರೆ 45 ದಿನಗಳ ದೃಶ್ಯಗಳು ಲಭ್ಯವಿದೆ, ಬಾಕಿ ಡಿಲಿಟ್ ಮಾಡಿದೆ ಟಿನ್ನು ಯಾದವ್ ಗೆ ಯಾವುದೇ ಅಧಿಕೃತ ಹುದ್ದೆ ಇಲ್ಲದಿದ್ದರೂ ಹಣ ಎಣಿಕೆ ಕೇಂದ್ರ ಕೀ ಅವನ ಬಳಿ ಇತ್ತು, ಇದು ಪ್ರಮುಖ ಅಡಳಿತ ಲೋಪವಾಗಿದೆ, ಅಕ್ರಮ ನಡೆಸಲೆಂದೇ ಸಂಬಂಧಿ ಮನೀಶ್ ಕುಮಾರ್ ನನ್ನು ಎಣಿಕೆ ಕಾರ್ಯಕ್ಕೆ ಟಿನ್ನು ಯಾದವ್ ಸೇರಿಸಿದ್ದ,ಎಣಿಕೆ ಕೊಠಡಿ ಉಸ್ತುವಾರಿ ಸುಭಾಷ್ ಶ್ರೀವಾಸ್ತವ ಪ್ರಾಥಮಿಕ ಹೊಣೆಗಾರರು, ಅವರು ಯಾವುದೇ ಮೇಲ್ವಿಚಾರಣೆ ಮಾಡಿಲ್ಲ ಎಂದು ಹೇಳಿದೆ.

### ಬಿಜೆಪಿಯ ಹಿಂದುತ್ವ ರಾಜಕಾರಣಕ್ಕೆ ತಡೆ ಹಾಕಲು ಕಾರ್ಯಕರ್ತರಿಗೆ ತರಬೇತಿ

# ಕಾಂಗ್ರೆಸ್ ಸರ್ವ ಸದಸ್ಯರ ಸಭೆಯಲ್ಲಿ ನಿರ್ಧಾರ: ರಣದೀಪ್ ಸುರ್ಜೇವಾಲಾ ಸೇರಿ ಕೆಪಿಸಿಸಿ ಸದಸ್ಯರು ಭಾಗಿ

**ಬೆಂಗಳೂರು, ಜು.7:** ಬಿಜೆಪಿಯ ಹಿಂದುತ್ವ ರಾಜಕಾರಣಕ್ಕೆ ಬ್ರೇಕ್ ಹಾಕಲು ಕಾಂಗ್ರೆಸ್ ಕಾರ್ಯಕರ್ತರಿಗೆ ತರಬೇತಿ ನೀಡಲು ಕಾಂಗ್ರೆಸ್ ಸರ್ವ ಸದಸ್ಯರ ಸಭೆಯಲ್ಲಿ ನಿರ್ಧಾರ ಮಾಡಲಾಗಿದೆ.

ಅರಮನೆ ಮೈದಾನದಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ಒಟ್ಟು 8 ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಈ ನಿರ್ಣಯಗಳನ್ನು ಓದಲಾಯಿತು. ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಸೇರಿದಂತೆ ಶಾಸಕರು, ಸಚಿವರು ಹಾಗೂ



ಕೆಪಿಸಿಸಿ ಸದಸ್ಯರು ಭಾಗಿಯಾಗಿದ್ದರು. ಪಕ್ಷ ಸಂಘಟನೆ, ಮುಂದಿನ ಕಾರ್ಯಯೋಜನೆಯ ಬಗ್ಗೆ ಈ ಸಭೆಯಲ್ಲಿ ಮಹತ್ವದ ಚರ್ಚೆಗಳು ನಡೆದವು.

ಸಭೆಯಲ್ಲಿ ಮಾತನಾಡಿದ ಬಿ.ಕೆ. ಹರಿಪ್ರಸಾದ್, ಸ್ಥಳೀಯ ಸಂಸ್ಥೆಗಳಲ್ಲಿ ನಾಮನಿರ್ದೇಶಿತ ಹುದ್ದೆಗಳು ಆರು ತಿಂಗಳಿಗಿಂತ ಹೆಚ್ಚು ಅವಧಿ ಖಾಲಿ ಇರುವಂತಿಲ್ಲ. ಎರಡೂವರೆ ವರ್ಷ ಪೂರೈಸಿರುವ ನಿಗಮಮಂಡಳಿ ಅಧ್ಯಕ್ಷರ ರಾಜೀನಾಮೆ ಪಡೆಯಬೇಕು ಹಾಗೂ ಹೊಸಬರಿಗೆ ಅವಕಾಶ ನೀಡಬೇಕು. ಕೆಪಿಸಿಸಿ ಹಲವಾರು ಪದಾಧಿಕಾರಿಗಳು ಬಹಳ ವರ್ಷಗಳಿಂದ ಸೇವೆ ಸಲ್ಲಿಸಿದ್ದಾರೆ. ಅವರಿಗೂ ನಿಗಮ-ಮಂಡಳಿಗಳಲ್ಲಿ ಅವಕಾಶ ನೀಡಬೇಕು. ಸ್ಥಳೀಯ ಸಂಸ್ಥೆಗಳಲ್ಲಿ ಕಾಂಗ್ರೆಸ್ ಪ್ರಬಲವಾಗಿದೆ. ಯಾರೂ ಕಾಂಗ್ರೆಸ್ ಪಕ್ಷವನ್ನು ಅಲುಗಾಡಿಸಲು ಸಾಧ್ಯವಿಲ್ಲ. ಅಧಿಕಾರ ಇರುತ್ತದೆ ಹೋಗುತ್ತದೆ, ಆದರೆ ಪಕ್ಷ ಮಾತ್ರ ಮುಂದುವರೆಯುತ್ತದೆ ಎಂದರು.

### ಚಂದಾ ಚೋರಿ: ಸಿಬಿಐ ತನಿಖೆಗೆ ಒಪ್ಪಿಸುವಂತೆ ಒತ್ತಾಯ

ಶ್ರೀರಾಮಚಂದ್ರ ಟ್ರಸ್ಟ್‌ನಲ್ಲಿ ಕೋಟ್ಯಾಂತರ ಹಣ ದೇಣಿಗೆ ಪಡೆಯಲಾಗಿದೆ. ಟ್ರಸ್ಟ್‌ಗೆ ಬಂದ ಕಾಣಿಕೆ ಲೂಟಿ ಮಾಡಲಾಗಿದೆ. ಕೋಟ್ಯಂತರ ಭಕ್ತರ ನಂಬಿಕೆಗೆ ಧಕ್ಕೆ ತರಲಾಗಿದೆ. ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ ಹಾಗೂ ಯೋಗಿ ಆದಿತ್ಯನಾಥ ರಾಜೀನಾಮೆ ನೀಡಬೇಕು ಎಂದು ಸಭೆಯಲ್ಲಿ ಆಗ್ರಹಿಸಲಾಯಿತು. ಮತ್ತು ಈ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಒತ್ತಾಯಿಸಲಾಯಿತು. ಹಾಗೂ ಮಳೆ ಕೊರತೆ, ಬರಗಾಲದಿಂದ ಜನ-ಜಾನುವಾರುಗಳಿಗೆ ಸಮಸ್ಯೆ ಆಗದಂತೆ ಸಮರ ಸಜ್ಜಿನಂತೆ ಪರಿಹರಿಸಲು ಕೇಂದ್ರ ಸರ್ಕಾರದ ಸಹಕಾರ ಅಗತ್ಯ. ಇದಕ್ಕಾಗಿ 10 ಸಾವಿರ ಕೋಟಿ ಕೇಂದ್ರ ಸಹಾಯಧನ ನೀಡಬೇಕು ಎಂದು ಒತ್ತಾಯಿಸಲಾಯಿತು. ನೀಟ್ ಪರೀಕ್ಷೆಯಿಂದ ವಿದ್ಯಾರ್ಥಿಗಳಿಗೆ ಸಮಸ್ಯೆ ಆಗಿದೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಕ್ಷಣ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಲಾಯಿತು.



ಹುಬ್ಬಳ್ಳಿಯಲ್ಲಿ ಮಳೆಯಿಂದಾಗಿ ರಾಣಿ ಚನ್ನಮ್ಮ ವೃತ್ತದಲ್ಲಿ ಮೇಲ್ಸೇತುವೆ ಕಾಮಗಾರಿಯಿಂದ ವಾಹನಗಳ ಸಂಚಾರಕ್ಕೆ ಭಾರಿ ಸಮಸ್ಯೆ ಉಂಟಾಗಿದೆ.

### ಎಸ್ಐಆರ್ ವಿಚಾರದಲ್ಲಿ ಆತಂಕ ಪಡಬೇಕಾಗಿಲ್ಲ

# ಬಿಜೆಪಿ-ಜೆಡಿಎಸ್‌ನವರು ದೂರು ನೀಡಿದ್ದಾರೆ, ತನಿಖೆಯಾಗಲಿ: ಸಚಿವ ಸತೀಶ್ ಜಾರಕಿಹೊಳಿ

**ಬೆಂಗಳೂರು, ಜು.7:** ಎಸ್ಐಆರ್ ಪ್ರಕ್ರಿಯೆ ವಿಚಾರದಲ್ಲಿ ಬಿಜೆಪಿ-ಜೆಡಿಎಸ್‌ನವರು ದೂರು ಕೊಟ್ಟಿದ್ದಾರೆ. ತನಿಖೆಯಾಗಲಿ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

ಬೆಳಗಾವಿಯಲ್ಲಿಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಸಚಿವರು, ಎಸ್ಐಆರ್ ವಿಚಾರದಲ್ಲಿ ಆರೋಪ ಆತಂಕ ಪಡುವುದು ಏನೂ ಇಲ್ಲ. ಈಗಾಗಲೇ ದೂರು ಕೊಟ್ಟಿದ್ದಾರೆ ತನಿಖೆ ಆಗಲಿ. ನಮ್ಮ ದೃಷ್ಟಿಯಲ್ಲಿ ಎಲ್ಲರನ್ನೂ ಸೇರಿಸುತ್ತಿದ್ದೇವೆ. ಎಲ್ಲರನ್ನೂ ರಕ್ಷಣೆ ಮಾಡುವ ಕೆಲಸ ಮಾಡುತ್ತಿದ್ದೇವೆ. ಎಲ್ಲರೂ ಮತದಾರರ ಪಟ್ಟಿಯಲ್ಲಿ ಇರಬೇಕು ಎಂದರು.

ಕಾಂಗ್ರೆಸ್ ಪಕ್ಷದಲ್ಲಿ ಹೊಸ ಬದಲಾವಣೆ ಆಗಬೇಕು. ಬಹಳಷ್ಟು ಬದಲಾವಣೆ ಬಗ್ಗೆ ಅಧ್ಯಕ್ಷರು ಸಾಕಷ್ಟು



ಚಿಂತನೆ ಮಾಡುತ್ತಿದ್ದಾರೆ ಹೊಸಬರಿಗೆ ಅವಕಾಶ ಕೊಡಬೇಕು ಏನು ಚರ್ಚೆ ಆಗುತ್ತಿದೆ ನೋಡೋಣ ಎಂದು ಬೆಂಗಳೂರಿನಲ್ಲಿ ಕಾಂಗ್ರೆಸ್ ಸರ್ವಸದಸ್ಯರ ಸಭೆ ಬಗ್ಗೆ ಹೇಳಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಬಳಿ ಪ್ರಸ್ತುತ ಸುಮಾರು 20 ಸಚಿವ ಸ್ಥಾನಗಳು ಖಾಲಿ ಇರುವ ಹಿನ್ನೆಲೆಯಲ್ಲಿ ಶೀಘ್ರದಲ್ಲೇ ಸಚಿವ ಸಂಪುಟ ವಿಸ್ತರಣೆ ನಡೆಯುವ ನಿರೀಕ್ಷೆಯಿದ್ದು, ಇದಕ್ಕೆ ಸತೀಶ್ ಜಾರಕಿಹೊಳಿ ಸೇರಿದಂತೆ ಕಾಂಗ್ರೆಸ್‌ನ ಹಿರಿಯ ನಾಯಕರು ಬೆಂಬಲ ವ್ಯಕ್ತಪಡಿಸಿದ್ದಾರೆ.

ಸಂಪುಟ ವಿಸ್ತರಣೆ ವಿಷಯ ನಮ್ಮ ಕೈಯಲ್ಲಿಲ್ಲ ಹೈಕಮಾಂಡ್ ತೀರ್ಮಾನ ಎಂದರು.

ಮುಂಬರುವ ವಿಧಾನಸಭೆ ಅಧಿವೇಶನಕ್ಕೂ ಮುನ್ನ ಖಾಲಿ ಇರುವ 20 ಸಚಿವ ಸ್ಥಾನಗಳನ್ನು ಭರ್ತಿ ಮಾಡುವ ಉದ್ದೇಶದಿಂದ ಸಚಿವ ಸಂಪುಟವನ್ನು ಶೀಘ್ರ ವಿಸ್ತರಿಸುವ ಅಗತ್ಯವಿದೆ ಎಂದು ಒತ್ತಿ ಹೇಳಿದ್ದಾರೆ.

ಸಚಿವ ಸಂಪುಟ ವಿಸ್ತರಣೆ ಪ್ರಕ್ರಿಯೆಯನ್ನು ಕಾಂಗ್ರೆಸ್ ಹೈಕಮಾಂಡ್ ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದ್ದು, ಕರ್ನಾಟಕದಲ್ಲಿ ಸಚಿವ ಸಂಪುಟದ ಗರಿಷ್ಠ ಸದಸ್ಯರ ಸಂಖ್ಯೆ 34ರವರೆಗೆ ಇರಬಹುದು ಎಂದು ಅಂದಾಜಿಸಲಾಗಿದೆ.

# ಜು.14ರೊಳಗೆ ಸಂಪುಟ ವಿಸ್ತರಣೆ: ಶಾಸಕ ಷಡಕ್ಷರಿ

**ಬೆಂಗಳೂರು, ಜು.7:** ಆಷಾಢ ಆರಂಭವಾಗುವ ಜುಲೈ 14ಕ್ಕೂ ಮುನ್ನವೇ ರಾಜ್ಯ ಸಚಿವ ಸಂಪುಟ ವಿಸ್ತರಣೆಯಾಗಲಿದೆ ಎಂದು ತಿಪಟೂರು ಕ್ಷೇತ್ರದ ಶಾಸಕ ಷಡಕ್ಷರಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವು ಕಾರಣಗಳಿಂದಾಗಿ ಸಂಪುಟ ವಿಸ್ತರಣೆ ವಿಳಂಬವಾಗಿದೆ. ಜುಲೈ 14 ರೊಳಗಾಗಿಯೇ ಸಂಪುಟ ವಿಸ್ತರಣೆಯಾಗಬಹುದು ಎಂಬ ವಿಶ್ವಾಸವಿದೆ. ಒಂದು ವೇಳೆ ಸಾಧ್ಯವಾಗದೇ ಇದ್ದರೆ, ಆಷಾಢ ಬಳಿಕ ಶ್ರಾವಣದಲ್ಲಿ ವಿಸ್ತರಣೆಯಾಗಲಿದೆ ಎಂದರು.

ಪೂರ್ಣ ಪ್ರಮಾಣದ ಸಂಪುಟ ಇಲ್ಲದೇ ಇರುವುದರಿಂದ ಕೆಲಸ ಮಾಡಲು ಅನಾನುಕೂಲಗಳಾಗುತ್ತಿವೆ. ಸಚಿವರ ಸಂಖ್ಯೆ ಕಡಿಮೆ ಇದೆ,



ಖಾತೆಗಳ ಸಂಖ್ಯೆ ಹೆಚ್ಚಿವೆ. ಅನುಭವ ಇರುವ ಶಾಸಕರುಗಳಿರುವುದರಿಂದ ಪರಿಸ್ಥಿತಿಯನ್ನು ನಿಭಾಯಿಸುತ್ತಾರೆ ಎಂಬ ವಿಶ್ವಾಸವಿದೆ ಎಂದರು.

ಸಚಿವ ಸಂಪುಟ ಸೇರಲು ಲಾಬಿ ನಡೆಸುತ್ತಿದ್ದವರು ಯಾವುದೇ ಭಯದಿಂದ ಸುಮ್ಮನಾಗಿಲ್ಲ, ಸಂಪುಟದಲ್ಲಿ ಅವಕಾಶ ಸಿಗುತ್ತದೆ ಎಂಬ ಕಾರಣಕ್ಕೆ ಎಲ್ಲಾ ಚಟುವಟಿಕೆಗಳನ್ನು ಸ್ಥಗಿತಗೊಳಿಸಿದ್ದೇವೆ. ಸಂಪುಟಕ್ಕೆ ಯಾರನ್ನೆಲ್ಲಾ ಸೇರಿಸಿಕೊಳ್ಳಬೇಕೆಂಬ ಚರ್ಚೆ ನಡೆದು ತೀರ್ಮಾನವಾಗಿದೆ. ಅದರ ಮಾಹಿತಿ ನಮಗೆ ದೊರೆತ್ತಿದೆ. ಆದರೆ ಅದನ್ನು ಬಹಿರಂಗ ಪಡಿಸಲು ಸಾಧ್ಯವಿಲ್ಲ, ತೆರೆಮರೆಯಲ್ಲಿ ಪ್ರಯತ್ನಗಳು ಮುಂದುವರೆದಿವೆ ಎಂದರು.

ಬೆಂಗಳೂರು ಸೇರಿದಂತೆ 7 ಜಿಲ್ಲೆಗಳಿಗೆ ಗಣೇಶ್ ಪ್ರಸಾದ್ ಮತ್ತು ತಾವು ಇಬ್ಬರು ಸಮುದಾಯದ ಶಾಸಕರಿದ್ದೇವೆ. ಗಣೇಶ್ ಪ್ರಸಾದ್ ಮೊದಲ ಬಾರಿ ಆಯ್ಕೆಯಾಗಿದ್ದಾರೆ. ನಾನು 40 ವರ್ಷದಿಂದ ಕಾಂಗ್ರೆಸ್ ಪಕ್ಷಕ್ಕೆ ನಿಷ್ಠನಾಗಿ ಕೆಲಸ ಮಾಡುತ್ತಿದ್ದೇನೆ. ಈ ಬಾರಿ ನನಗೆ ಸಂಪುಟದಲ್ಲಿ ಅವಕಾಶ ಸಿಗಲಿದೆ ಎಂಬ ವಿಶ್ವಾಸವಿದೆ ಎಂದರು.

# ಗ್ರಾಪಂಗಳಲ್ಲಿ ಪ್ರತ್ಯೇಕ ಸಹಾಯ ಮತ್ತು ಸೌಲಭ್ಯ ಕೇಂದ್ರ ಸ್ಥಾಪನೆಗೆ ಸರ್ಕಾರ ಆದೇಶ

**ಬೆಂಗಳೂರು, ಜು.7:** ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಪ್ರತ್ಯೇಕ ಸಹಾಯ ಮತ್ತು ಸೌಲಭ್ಯ ಕೇಂದ್ರಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಈ ಕೇಂದ್ರಗಳು ಸಾರ್ವಜನಿಕರು ಶಾಶ್ವತ ವಾಸಸ್ಥಳ ದೃಢೀಕರಣ ಪ್ರಮಾಣ ಪತ್ರ ಪಡೆಯಲು ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ ಕಂಪ್ಯೂಟರ್, ಇಂಟರ್ ನೆಟ್-ಪ್ರಿಂಟರ್, ಸ್ಕ್ಯಾನರ್ ಸೌಲಭ್ಯ ಹೊಂದಿರಬೇಕು. ಅಲ್ಲದೇ ಆಸನ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯ ಒದಗಿಸಬೇಕು ಎಂದು ಸೂಚಿಸಲಾಗಿದೆ.

ಸಹಾಯ ಮತ್ತು ಸೌಲಭ್ಯ ಕೌಂಟರ್ ಗಳಲ್ಲಿ ಪಂಚಮಿತ್ರ ಸಹಾಯವಾಣಿ ಸಂಖ್ಯೆ 8277506000 ಪ್ರದರ್ಶಿಸಬೇಕು. ಇವುಗಳನ್ನು ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುವ ಡಾಟಾ ಎಂಟ್ರಿ ಆಪರೇಟರ್ ನಿರ್ವಹಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಆಯುಕ್ತರು ಹೊರಡಿಸಿರುವ ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಸಹಾಯ ಮತ್ತು ಸೌಲಭ್ಯ ಕೌಂಟರ್ ಗಳ ಕಾರ್ಯನಿರ್ವಹಣೆಯ ಒಟ್ಟಾರೇ ಉಸ್ತುವಾರಿ ನೋಡಿಕೊಳ್ಳಬೇಕು. ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಸಹಾಯ ಮತ್ತು ಸೌಲಭ್ಯ ಕೌಂಟರ್ ಗಳನ್ನು ಸ್ಥಾಪಿಸಲು ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವೈಯಕ್ತಿಕ ಗಮನಹರಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.

# ಕೋಳಿ ಮಾಂಸ, ಮೊಟ್ಟೆ ದರ ಏರಿಕೆ: ಮಧ್ಯಮ ವರ್ಗಕ್ಕೆ ಹೊಡೆತ

**ಬೆಂಗಳೂರು, ಜು.7:** ರಾಜ್ಯದಲ್ಲಿ ಕೋಳಿ ಮಾಂಸ ಮತ್ತು ಮೊಟ್ಟೆಯ ಬೆಲೆ ದಿಢೀರನೇ ಗಗನಕ್ಕೇರಿದೆ. ಮಳೆಗಾಲದ ಆರಂಭದ ಬೆನ್ನಲ್ಲೇ ಈ ದಿಢೀರ್ ದರ ಏರಿಕೆಯಾಗಿದ್ದು, ಸಾಮಾನ್ಯ ಮತ್ತು ಮಧ್ಯಮ ವರ್ಗದ ಕುಟುಂಬಗಳ ಮಾಸಿಕ ಬಜೆಟ್ ಸಂಪೂರ್ಣವಾಗಿ ಏರುಪೇರಾಗಿದೆ. ಬೆಂಗಳೂರು ಸೇರಿದಂತೆ ರಾಜ್ಯದ ಹಲವಾರು ಭಾಗಗಳಲ್ಲಿ ಕೆಲವು ದಿನಗಳ ಹಿಂದೆ ಪ್ರತಿ ಕೆಜಿಗೆ 250 ರೂ. ಆಸುಪಾಸಿನಲ್ಲಿದ್ದ ಸ್ಕಿನ್‌ಲೆಸ್ ಚಿಕನ್ ಬೆಲೆ, ಈಗ ಬರೋಬ್ಬರಿ 340 ರಿಂದ 350 ರೂಪಾಯಿಯ ಗಡಿ ದಾಟಿದೆ. ಇನ್ನು ವಿತ್ ಸ್ಕಿನ್ ಚಿಕನ್ ದರ 320 ರೂಪಾಯಿಗೆ ತಲುಪಿದೆ. ಅಂತೆಯೇ, ಕೆ.ಜಿಗೆ 170 ರೂ.ಗಳಿದ್ದ ಜೀವಂತ ಕೋಳಿ ಬೆಲೆ 210 ರೂಪಾಯಿ ದಾಟಿದೆ.



ಮತ್ತೊಂದೆಡೆ, ಬಡವರಿಗೆ ಪ್ರೊಟೀನ್ ಮೂಲವಾಗಿರುವ ಮೊಟ್ಟೆಯ ಬೆಲೆಯೂ ದಾಖಲೆ ಮಟ್ಟಕ್ಕೆ ಏರಿದೆ. ಕಳೆದ ತಿಂಗಳು ಒಂದು ಡಜನ್ (12) ಮೊಟ್ಟೆ ಬೆಲೆ 80 ರೂ ಇದ್ದದ್ದು, ಈಗ 100 ರೂ. ಗಡಿ ಮುಟ್ಟಿದೆ. ಚಿಲ್ಲರೆ ಅಂಗಡಿಗಳಲ್ಲಿ ಒಂದು ಮೊಟ್ಟೆ ಬೆಲೆ 8.50 ರೂ. ಆಸುಪಾಸಿನಲ್ಲಿ ಮಾರಾಟವಾಗುತ್ತಿದೆ.

ರಾಷ್ಟ್ರೀಯ ಮೊಟ್ಟೆ ಸಮನ್ವಯ ಸಮಿತಿ ನೀಡಿರುವ ದತ್ತಾಂಶಗಳ ಪ್ರಕಾರ, ಮೇ ತಿಂಗಳಲ್ಲಿ 100 ಮೊಟ್ಟೆಗಳಿಗೆ 598.5 ರೂಪಾಯಿ ಇದ್ದ ಸಗಟು ದರವು, ಜೂನ್‌ನಲ್ಲಿ 671.7 ರೂಪಾಯಿಗೆ ಏರಿಕೆಯಾಗಿತ್ತು. ಈಗ, ಜುಲೈ ಆರಂಭದಲ್ಲಿ 710 ರೂಪಾಯಿಗೆ ತಲುಪಿದೆ.

ಈ ದಿಢೀರ್ ಬೆಲೆ ಏರಿಕೆಯ ಹಿಂದೆ ಬೇಡಿಕೆ ಮತ್ತು ಪೂರೈಕೆಯ ನಡುವಿನ ಭಾರಿ ವ್ಯತ್ಯಾಸ ಪ್ರಮುಖ ಕಾರಣವೆಂದು ಹೇಳಲಾಗಿದೆ. ಮಳೆಗಾಲದ ವಾತಾವರಣದಿಂದಾಗಿ ಮಾರುಕಟ್ಟೆಯಲ್ಲಿ ಮೊಟ್ಟೆ ಮತ್ತು ಚಿಕನ್‌ಗೆ ಬೇಡಿಕೆ ಗಣನೀಯವಾಗಿ ಹೆಚ್ಚಾಗಿದೆ. ಆದರೆ, ಅದಕ್ಕೆ ತಕ್ಕಂತೆ ಪೂರೈಕೆ ಇಲ್ಲದೆ ಉತ್ಪಾದನೆ ಪಾತಾಳಕ್ಕೆ ಕುಸಿದಿದೆ ಎಂದು ವರದಿಗಳು ಹೇಳುತ್ತಿವೆ.

# ಮೇಕೆದಾಟು ಯೋಜನೆಗೆ ತಮಿಳುನಾಡು ಆಕ್ಷೇಪ ಜು.15ರಂದು ಅತ್ತಿಬೆಲೆ ಬಂದ್‌ಗೆ ವಾಟಾಳ್ ಕರೆ

**ಬೆಂಗಳೂರು, ಜು.7:** ನಗರ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳ ಕೋಟ್ಯಂತರ ಜನರ ಕುಡಿಯುವ ನೀರಿನ ಆಸರೆಯಾಗಿರುವ ಮೇಕೆದಾಟು ಜಲಾಶಯ ಯೋಜನೆಗೆ ತಮಿಳುನಾಡು ಸರ್ಕಾರ ಆಕ್ಷೇಪ ತೆಗೆಯುತ್ತಿರುವುದನ್ನು ಖಂಡಿಸಿ ಕನ್ನಡ ಪರ ಸಂಘಟನೆಗಳು ಮತ್ತೊಮ್ಮೆ ಸಿಡಿದೆದ್ದಿವೆ.

ಈ ವಿಷಯದಲ್ಲಿ ರಾಜ್ಯದ ಜನಪ್ರತಿನಿಧಿಗಳ ಮೌನವನ್ನು ತರಾಟೆಗೆ ತೆಗೆದುಕೊಂಡಿರುವ ಕನ್ನಡ ಚಳವಳಿ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್ ಅವರು ಬರುವ ಜು. 15ರಂದು ಕರ್ನಾಟಕ-ತಮಿಳುನಾಡು ಸಂಪರ್ಕಿಸುವ ಪ್ರಮುಖ ಗಡಿ ಭಾಗವಾದ ಅತ್ತಿಬೆಲೆ ಬಂದ್‌ಗೆ ಕರೆ ನೀಡಿದ್ದಾರೆ.

ಬೆಂಗಳೂರು ಹೊರವಲಯದ ಆನೇಕಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವಾಟಾಳ್ ನಾಗರಾಜ್, ತಮಿಳುನಾಡು ಮತ್ತು ಕರ್ನಾಟಕದ ಉದಾಸೀನ ರಾಜಕಾರಣಿಗಳ ವಿರುದ್ಧ ತಮ್ಮ ಹೋರಾಟ ನಿರಂತರವಾಗಿರುತ್ತದೆ ಎಂದು ಗುಡುಗಿದ್ದಾರೆ. ರಾಜ್ಯದ ಸಂಸದರ ನಿಷ್ಕ್ರಿಯತೆಯ ವಿರುದ್ಧ ಅಸಮಾಧಾನ ಹೊರಹಾಕಿದ ವಾಟಾಳ್ ನಾಗರಾಜ್, ತಮಿಳುನಾಡಿನ ಎಲ್ಲಾ ಸಂಸದರು ಒಗ್ಗಟ್ಟಾಗಿ ನಿಂತು ಯಾವುದೇ ಕಾರಣಕ್ಕೂ ಮೇಕೆದಾಟು ಯೋಜನೆ ಆಗಲು ಬಿಡುವುದಿಲ್ಲ ಎಂದು ಸಂಸತ್ತಿನಲ್ಲಿ ಮತ್ತು ಹೊರಗೆ ಧ್ವನಿ ಎತ್ತುತ್ತಾರೆ. ಆದರೆ, ನಮ್ಮ ಕರ್ನಾಟಕದಿಂದ ಆಯ್ಕೆಯಾಗಿ ಹೋಗಿರುವ ಸಂಸದರಿಗೆ ಬಾಯಿಯೇ ಇಲ್ಲವೇ. ರಾಜ್ಯದ ಹಿತಾಸಕ್ತಿ ಕಾಪಾಡದ ಇಂತಹ ಜನಪ್ರತಿನಿಧಿಗಳು ಯಾರಿಗೆ ಬೇಕು ಎಂದು ಪ್ರಶ್ನಿಸಿದರು.

**ರಾಜ್ಯ ಜನಪ್ರತಿನಿಧಿಗಳ ವಿರುದ್ಧ ಬೇಸರ:** ತಮಿಳುನಾಡಿನ ರಾಜಕಾರಣಿಗಳು ತಮ್ಮ ನೆಲ, ಜಲದ ವಿಚಾರಕ್ಕೆ ಬಂದರೆ ಕೆಚ್ಚೆದೆಯಿಂದ, ಧೈರ್ಯವಾಗಿ ಮಾತನಾಡುತ್ತಾರೆ. ಮೇಕೆದಾಟಿಗೆ ಬಂದು ಅಣೆಕಟ್ಟಿನ ಒಂದು ಇಟ್ಟಿಗೆಯನ್ನೂ ಇಡಲು ಬಿಡುವುದಿಲ್ಲ ಎಂದು ಸವಾಲು ಹಾಕುತ್ತಾರೆ. ಆದರೆ, ನಮ್ಮ ರಾಜ್ಯದ ಒಬ್ಬನೇ ಒಬ್ಬ ಶಾಸಕನಾಗಲಿ ಅಥವಾ ಸಂಸದನಾಗಲಿ ಅವರ ವಿರುದ್ಧ ತಿರುಗಿಬಿದ್ದು ಗಟ್ಟಿಯಾಗಿ ಬಾಯಿಬಿಡುತ್ತಿಲ್ಲ ಎಂದು ವಾಟಾಳ್ ನಾಗರಾಜ್ ಬೇಸರ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ವಿರುದ್ಧವೂ ವಾಗ್ದಾಳಿ ನಡೆಸಿದ ಅವರು, ಈಗ ಅಧಿಕಾರದಲ್ಲಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈ ಹಿಂದೆ ವಿರೋಧ ಪಕ್ಷದಲ್ಲಿದ್ದಾಗ ಮೇಕೆದಾಟು ಯೋಜನೆಗಾಗಿ ಪಾದಯಾತ್ರೆ ನಡೆಸಿದ್ದರು. ಆದರೆ, ಈಗ ಅಧಿಕಾರಕ್ಕೆ ಬಂದ ಮೇಲೆ ಅವರು ಯೋಜನೆಯನ್ನು ಜಾರಿ ಮಾಡೇ



ಮಾಡುತ್ತೇವೆ ಎಂದು ಗಟ್ಟಿಯಾಗಿ ಹೇಳುತ್ತಿಲ್ಲ. ಯಾಕೆಂದರೆ, ಇವರು ತಮಿಳುನಾಡಿನ ರಾಜಕಾರಣಿಗಳ ಜೊತೆಗೆ ರಾಜಕೀಯ ನೆಂಟಸ್ತನ ಬೆಳೆಸಿದ್ದಾರೆ. ಹಿಂದೆ ಡಿಕೆಶಿ ಅವರು ಹಮ್ಮಿಕೊಂಡಿದ್ದ ಮೇಕೆದಾಟು ಪಾದಯಾತ್ರೆಯು ಕೇವಲ ಒಂದು ಶೋಕಿ ಪಾದಯಾತ್ರೆ ಯಾಗಿತ್ತು ಎಂದು ಆರೋಪಿಸಿದರು.

ಪ್ರಸ್ತುತ ಕನ್ನಡ ಸಂಘಟನೆಗಳನ್ನು ಹೊರತುಪಡಿಸಿದರೆ ರಾಜ್ಯದಲ್ಲಿ ಮೇಕೆದಾಟು ವಿಚಾರವಾಗಿ ಯಾರೂ ಪ್ರಾಮಾಣಿಕವಾಗಿ ಮಾತನಾಡುತ್ತಿಲ್ಲ ಎಂದರು.ಈ ನಿರಾಸಕ್ತಿ ಮತ್ತು ರಾಜಕೀಯ ದ್ರೋಹವನ್ನು ಖಂಡಿಸಿ ಜುಲೈ 15 ರಂದು ಅತ್ತಿಬೆಲೆ ಗಡಿಯಲ್ಲಿ ವಿನೂತನ ಮಾದರಿಯ ಪ್ರತಿಭಟನೆ ಹಮ್ಮಿಕೊಳ್ಳಲಾಗುತ್ತಿದೆ. ಇದು ಕೇವಲ ತಮಿಳುನಾಡು ಸರ್ಕಾರದ ವಿರುದ್ಧ ಮಾತ್ರವಲ್ಲದೆ, ಕರ್ನಾಟಕದ ಮೌನಿ ರಾಜಕಾರಣಿಗಳ ವಿರುದ್ಧವೂ ನಡೆಸುತ್ತಿರುವ ಹೋರಾಟವಾಗಿದೆ ಎಂದು ತಿಳಿಸಿದರು.

ಬೆಂಗಳೂರು ಮಹಾನಗರ ಮತ್ತು ಸುತ್ತಮುತ್ತಲಿನ ಭಾಗಗಳಿಗೆ ಕುಡಿಯುವ ನೀರು ಪೂರೈಸುವ ಮತ್ತು ವಿದ್ಯುತ್ ಉತ್ಪಾದನೆ ಮಾಡುವ ಮಹತ್ವಾಕಾಂಕ್ಷೆಯೊಂದಿಗೆ ಕರ್ನಾಟಕ ಸರ್ಕಾರ ಮೇಕೆದಾಟು ಬಳಿ ಸಮಾನಾಂತರ ಜಲಾಶಯ ನಿರ್ಮಿಸಲು ಮುಂದಾಗಿದೆ.

ಮಳೆಗಾಲದ ಅವಧಿಯಲ್ಲಿ ವೃಥಾ ಸಮುದ್ರ ಪಾಲಾಗುವ ಅಂದಾಜು 65 ರಿಂದ 66 ಟಿಎಂಸಿ ಹೆಚ್ಚುವರಿ ಕಾವೇರಿ ನೀರನ್ನು ಇಲ್ಲಿ ಸಂಗ್ರಹಿಸಿಟ್ಟುಕೊಳ್ಳುವುದು ರಾಜ್ಯದ ಮುಖ್ಯ ಉದ್ದೇಶವಾಗಿದೆ.

ಆದರೆ, ಕರ್ನಾಟಕವು ಅಣೆಕಟ್ಟು ನಿರ್ಮಿಸಿದರೆ ತಮಗೆ ಬರಬೇಕಾದ ನೀರಿನ ಹಕ್ಕಿಗೆ ಧಕ್ಕೆಯಾಗುತ್ತದೆ ಎಂದು ವಾದಿಸುತ್ತಿರುವ ತಮಿಳುನಾಡು ಸರ್ಕಾರ, ಯೋಜನೆಯನ್ನು ತಡೆಯಲು ಸುಪ್ರೀಂ ಕೋರ್ಟ್‌ನಲ್ಲಿ ಕಾನೂನು ಸಮರವನ್ನು ತೀವ್ರ ಗೊಳಿಸಿದೆ. ರಾಜ್ಯದ ಹಿತಾಸಕ್ತಿ ಅಡಗಿರುವ ಈ ಯೋಜನೆಯ ಸುತ್ತ ಈಗ ಗಡಿ ಭಾಗದಲ್ಲಿ ಮತ್ತೆ ಪ್ರತಿಭಟನೆಯ ಕಿಡಿ ಹೊತ್ತಿಕೊಂಡಿದೆ.

### ಸಿದ್ಧತೆ ಮಾಡಿಕೊಳ್ಳಲು ರಾಜ್ಯ ಚುನಾವಣಾ ಆಯೋಗ ಸುತ್ತೋಲೆ

# 2027ರ ಮಾರ್ಚ್‌ನಲ್ಲಿ ಅವಧಿ ಅಂತ್ಯಗೊಳ್ಳಲಿರುವ ಎಲ್ಲ ಗ್ರಾಪಂಗಳು ಹಾಗೂ ಪುನರ್‌ರಚಿತ 42 ಗ್ರಾಪಂಗಳಿಗೆ ಚುನಾವಣೆ

**ಬೆಂಗಳೂರು, ಜು.7:** ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಸಾರ್ವತ್ರಿಕ ಚುನಾವಣೆ ನಡೆಸುವ ಪ್ರಕ್ರಿಯೆಗೆ ವೇಗ ಸಿಕ್ಕಿದೆ. ರಾಜ್ಯ ಚುನಾವಣಾ ಆಯೋಗವು ಚುನಾವಣಾ ಸಿದ್ಧತೆಗಳಿಗೆ ಸಂಬಂಧಿಸಿದಂತೆ ಮಹತ್ವದ ಸುತ್ತೋಲೆ ಹೊರಡಿಸಿದ್ದು, ಗ್ರಾಮೀಣ ಭಾಗದಲ್ಲಿ ಈಗಿನಿಂದಲೇ ರಾಜಕೀಯ ಕಾವೇರತೊಡಗಿದೆ.

2027ರ ಮಾರ್ಚ್ ಅಂತ್ಯದೊಳಗೆ ಅವಧಿ ಮುಕ್ತಾಯಗೊಳ್ಳಲಿರುವ ಎಲ್ಲಾ ಗ್ರಾಮ ಪಂಚಾಯಿತಿಗಳು ಹಾಗೂ ಹೊಸದಾಗಿ ಪುನರ್ರಚಿತವಾ ಗಿರುವ 42 ಗ್ರಾಮ ಪಂಚಾಯಿತಿಗಳಿಗೆ ನಿಗದಿತ ಅವಧಿಯಲ್ಲಿ ಚುನಾವಣೆ ನಡೆಸುವ ಉದ್ದೇಶದಿಂದ ಜಿಲ್ಲಾಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಆಯೋಗ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ.

ಚುನಾವಣಾ ಪ್ರಕ್ರಿಯೆಯನ್ನು ಅತ್ಯಂತ ಸುಗಮ ಮತ್ತು ಪಾರದರ್ಶಕವಾಗಿ ನಡೆಸಲು ಆಯೋಗವು ಅಧಿಕಾರಿಗಳ ನಿಯೋಜನೆಗೆ ಹೊಸದೊಂದು ಮಾರ್ಗಸೂಚಿಯನ್ನು ಸಿದ್ಧಪಡಿಸಿದೆ. ಇದರ ಪ್ರಕಾರ, ಪ್ರತಿ ಗ್ರಾಮ ಪಂಚಾಯಿತಿಗೆ ಒಬ್ಬ 'ಗ್ರೂಪ್-ಬಿ' ವೃಂದದ ಅಧಿಕಾರಿಯನ್ನು ಚುನಾವಣಾಧಿಕಾರಿಯಾಗಿ ನೇಮಕ ಮಾಡಬೇಕಾಗುತ್ತದೆ. ಈ ಚುನಾವಣಾಧಿಕಾರಿಗಳ ಕೆಲಸದಲ್ಲಿ ನೆರವಾಗಲು ಶಿರಸ್ತೇದಾರ್, ಸೂಪರಿಂಟೆಂಡೆಂಟ್ ಅಥವಾ ವ್ಯವಸ್ಥಾಪಕ ಹುದ್ದೆಯ ಅಧಿಕಾರಿಯನ್ನು ಸಹಾಯಕ ಚುನಾವಣಾಧಿಕಾರಿಯಾಗಿ ನಿಯೋಜಿಸಲು ಸೂಚಿಸಲಾಗಿದೆ. ಯಾವುದೇ ಕಾರಣಕ್ಕೂ ಅಧಿಕಾರಿಗಳ ಸ್ವಂತ ಊರು ಅಥವಾ ತವರು ಕ್ಷೇತ್ರಕ್ಕೆ ಅವರನ್ನು ಚುನಾವಣಾ ಕರ್ತವ್ಯದ ಮೇಲೆ ನಿಯೋಜಿಸಬಾರದು ಎಂದು ಆಯೋಗ ಸ್ಪಷ್ಟಪಡಿಸಿದೆ.

**ಯಾವುದೇ ಕಾರಣಕ್ಕೂ ಅಧಿಕಾರಿಗಳ ಸ್ವಂತ ಊರು ಅಥವಾ ತವರು ಕ್ಷೇತ್ರಕ್ಕೆ ಅವರನ್ನು ಚುನಾವಣಾ ಕರ್ತವ್ಯದ ಮೇಲೆ ನಿಯೋಜಿಸಬಾರದು ಎಂದು ಆಯೋಗ ಸ್ಪಷ್ಟಪಡಿಸಿದೆ.**

ಪಂಚಾಯಿತಿಗಳಲ್ಲಿ ಇರುವ ಸದಸ್ಯ ಸ್ಥಾನಗಳ ಆಧಾರದ ಮೇಲೆ ಅಧಿಕಾರಿಗಳ ನಿಯೋಜನೆಯ ಪ್ರಮಾಣವನ್ನು ನಿಗದಿಪಡಿಸಲಾಗಿದೆ. ಯಾವುದೇ ಪಂಚಾಯಿತಿಯಲ್ಲಿ 25 ಸದಸ್ಯ ಸ್ಥಾನಗಳವರೆಗೆ ಇದ್ದರೆ ಅಲ್ಲಿ ಒಬ್ಬರು ಚುನಾವಣಾಧಿಕಾರಿ ಹಾಗೂ ಒಬ್ಬರು ಸಹಾಯಕ ಚುನಾವಣಾಧಿಕಾರಿ ಕಾರ್ಯನಿರ್ವಹಿಸ ಲಿದ್ದಾರೆ. ಸದಸ್ಯ ಸ್ಥಾನಗಳ ಸಂಖ್ಯೆ 25ರಿಂದ 35ರವರೆಗೆ ಇದ್ದಲ್ಲಿ, ಒಬ್ಬರು ಚುನಾವಣಾಧಿಕಾರಿ ಹಾಗೂ ಇಬ್ಬರು ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಿಸಲಾಗುತ್ತದೆ. ಇನ್ನು 35ಕ್ಕಿಂತ ಹೆಚ್ಚು ಸದಸ್ಯ ಸ್ಥಾನಗಳನ್ನು ಹೊಂದಿರುವ ದೊಡ್ಡ ಪಂಚಾಯಿತಿ ಗಳಾಗಿದ್ದರೆ, ಅಲ್ಲಿ ಇಬ್ಬರು ಚುನಾವಣಾಧಿಕಾರಿಗಳು ಹಾಗೂ ಇಬ್ಬರು ಸಹಾಯಕ ಚುನಾವಣಾಧಿಕಾರಿ ಗಳು ಜವಾಬ್ದಾರಿ ಹಂಚಿಕೊಳ್ಳಲಿದ್ದಾರೆ.

ರಾಜ್ಯ ಚುನಾವಣಾ ಆಯೋಗವು ಈಗಾಗಲೇ ಜಿಲ್ಲಾಧಿಕಾರಿಗಳಿಗೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸೂಚಿಸಿದ್ದು, ಚುನಾವಣಾ ಪ್ರಕ್ರಿಯೆಯನ್ನು ಯಾವುದೇ ಲೋಪದೋಷಗಳಿಲ್ಲದೆ ನಡೆಸಲು ಅಗತ್ಯ ಸಿಬ್ಬಂದಿ ನಿಯೋಜನೆಗೆ ಮೊದಲ ಆದ್ಯತೆ ನೀಡಿದೆ.

ಇದರ ಜೊತೆಗೆ, 2027ರ ಏಪ್ರಿಲ್ ನಂತರ ಅವಧಿ ಮುಕ್ತಾಯಗೊಳ್ಳಲಿರುವ 56 ಗ್ರಾಮ ಪಂಚಾಯಿತಿಗಳ ಪಟ್ಟಿಯನ್ನೂ ಆಯೋಗ ತನ್ನ ಸುತ್ತೋಲೆಯೊಂದಿಗೆ ಲಗತ್ತಿಸಿದ್ದು, ಮುಂದಿನ ಹಂತದ ಚುನಾವಣಾ ಸಿದ್ಧತೆಗಳಿಗೂ ಮುನ್ನೋಟ ನೀಡಿದೆ.

ಈ ಮಹತ್ವದ ಬೆಳವಣಿಗೆಯೊಂದಿಗೆ ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಚುನಾವಣೆಯ ಕಾವು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಶೀಘ್ರದಲ್ಲೇ ಅಧಿಕೃತ ಚುನಾವಣಾ ವೇಳಾಪಟ್ಟಿ ಪ್ರಕಟವಾಗುವ ನಿರೀಕ್ಷೆ ದಟ್ಟವಾಗಿದೆ.

### ಸರ್ಕಾರಿ ಪಿಯು ಕಾಲೇಜುಗಳಲ್ಲಿ

# ವಿಳಂಬ ದಾಖಲಾತಿ ದಂಡ ಶುಲ್ಕ ರದ್ದು

### ಬಡ-ಗ್ರಾಮೀಣ ವಿದ್ಯಾರ್ಥಿಗಳಿಗೆ ಶಿಕ್ಷಣ ಪ್ರವೇಶ ಸುಗಮ

**ಬೆಂಗಳೂರು, ಜು.7:** ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮಹತ್ವದ ನಿರ್ಧಾರ ಕೈಗೊಂಡಿರುವ ಸರ್ಕಾರ, ಈ ಹಿಂದೆ ಜಾರಿಯಲ್ಲಿದ್ದ ವಿಳಂಬ ದಾಖಲಾತಿ ದಂಡ ಶುಲ್ಕವನ್ನು ಸಂಪೂರ್ಣವಾಗಿ ಹಿಂಪಡೆದಿದೆ.

2026-27ನೇ ಶೈಕ್ಷಣಿಕ ಸಾಲಿನಿಂದ ಪ್ರಥಮ ಹಾಗೂ ದ್ವಿತೀಯ ಪಿಯುಸಿ ತರಗತಿಗಳಿಗೆ ವಿಳಂಬವಾಗಿ ದಾಖಲಾತಿ ಪಡೆಯುವ ವಿದ್ಯಾರ್ಥಿಗಳಿಗೆ ವಿಧಿಸಲಾಗುತ್ತಿದ್ದ ರೂ. 670 ವಿಳಂಬ ದಾಖಲಾತಿ ದಂಡ ಶುಲ್ಕ ಹಾಗೂ ರೂ. 2,220 ವಿಶೇಷ ದಂಡ ಶುಲ್ಕವನ್ನು ಪಾವತಿಸುವುದರಿಂದ ವಿನಾಯಿತಿ ನೀಡಿದೆ.

2018ರಲ್ಲಿ ಹೊರಡಿಸಲಾದ ಆದೇಶದ ಪ್ರಕಾರ, ದಾಖಲಾತಿ ಅವಧಿ ಮುಗಿದ ನಂತರ ವಿದ್ಯಾರ್ಥಿಗಳು 10 ದಿನಗಳೊಳಗೆ ದಾಖಲಾತಿ ಪಡೆದರೆ ರೂ. 670 ದಂಡ ಹಾಗೂ 20 ದಿನಗಳೊಳಗೆ ದಾಖಲಾತಿ ಪಡೆದರೆ ರೂ. 2,220 ವಿಶೇಷ ದಂಡ ಪಾವತಿಸಬೇಕಾಗಿತ್ತು. ಆದರೆ, ಹೆಚ್ಚಿನ ವಿದ್ಯಾರ್ಥಿಗಳು ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಸೇರಿದವರಾಗಿರುವುದರಿಂದ ಈ ದಂಡ ಪಾವತಿಸುವುದು ಕಷ್ಟಕರವಾಗುತ್ತಿತ್ತು. ಇದರಿಂದ ಶಿಕ್ಷಣದಿಂದ ವಂಚಿತರಾಗುವ ಪರಿಸ್ಥಿತಿ ಎದುರಾಗುತ್ತಿತ್ತು.

ಈ ಹಿನ್ನೆಲೆಯಲ್ಲಿ ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯ ಸರ್ಕಾರಕ್ಕೆ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರ, ವಿದ್ಯಾರ್ಥಿಗಳ ಆರ್ಥಿಕ ಹಾಗೂ ಸಾಮಾಜಿಕ ಹಿತವನ್ನು ಗಮನದಲ್ಲಿಟ್ಟುಕೊಂಡು, ಮುಂದಿನ ಆದೇಶದವರೆಗೆ ಈ ದಂಡವನ್ನು ಸಂಪೂರ್ಣವಾಗಿ ಹಿಂಪಡೆದು, ಸಾಮಾನ್ಯ ದಾಖಲಾತಿ ಶುಲ್ಕವನ್ನು ಮಾತ್ರ ಪಡೆದು ದಾಖಲಾತಿ ನೀಡಲು ಅನುಮತಿ ನೀಡಿದೆ.

ಈ ನಿರ್ಧಾರವನ್ನು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಜಾರಿಗೊಳಿಸಲಾಗಿದ್ದು, ರಾಜ್ಯಪಾಲರ ಆಜ್ಞಾನುಸಾರ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ (ಪದವಿ ಪೂರ್ವ) ಅಧೀನ ಕಾರ್ಯದರ್ಶಿ ಎಸ್. ಪ್ರಕಾಶ ಅವರು ಆದೇಶ ಹೊರಡಿಸಿದ್ದಾರೆ.

ಇದರಿಂದ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ದೊಡ್ಡ ರಿಲೀಫ್ ಸಿಕ್ಕಂತಾಗಿದೆ.

ದಂಡ ಪಾವತಿಸಲು ಸಾಧ್ಯವಾಗದೆ ಶಿಕ್ಷಣದಿಂದ ದೂರವಾಗುತ್ತಿದ್ದ ವಿದ್ಯಾರ್ಥಿಗಳಿಗೆ ಈ ಕ್ರಮ ಹೊಸ ಭರವಸೆ ನೀಡಿದೆ. ಗ್ರಾಮೀಣ ಕುಟುಂಬಗಳು ಹೆಚ್ಚುವರಿ ದಂಡ ಪಾವತಿಸಬೇಕಾಗಿಲ್ಲದ ಕಾರಣ, ಪೋಷಕರ ಆರ್ಥಿಕ ಹೊರೆಯ ಕಡಿತವಾಗಿದೆ. ಸರ್ಕಾರದ ಉದ್ದೇಶವೇ ಸರ್ಕಾರಿ ಕಾಲೇಜುಗಳಲ್ಲಿ ದಾಖಲಾತಿ ಪ್ರಮಾಣ ಹೆಚ್ಚಿಸುವುದು; ಈ ಕ್ರಮ ಅದನ್ನು ಸಾಧಿಸಲು ನೆರವಾಗಲಿದೆ.

### ಕೇಂದ್ರ ಇಂಧನ ಸಚಿವಾಲಯಕ್ಕೆ ಸೇರಿದ ಸರ್ಕಾರಿ ಜಾಗ ಒತ್ತುವರಿ

# ಖಾಸಗಿ ಕ್ಲಬ್‌ಗಾಗಿ ವಾಹನ ನಿಲ್ದಾಣ, ಭೋಜನಾಲಯ ನಿರ್ಮಾಣ ಆರೋಪ: ಸಿಐಡಿ ತನಿಖೆ ಒಪ್ಪಿಸಲು ಎನ್.ಆರ್ ರಮೇಶ್ ಒತ್ತಾಯ

**ಬೆಂಗಳೂರು, ಜು.7:** ನಗರದ ಬ್ಯಾಟರಾಯನಪುರ ಕ್ಷೇತ್ರದ ಕೊಡಿಗೇಹಳ್ಳಿಯಲ್ಲಿ ಭಾರತದ ರಾಷ್ಟ್ರಪತಿಗಳ ಹೆಸರಿನಲ್ಲಿ ನೋಂದಣಿ ಯಾಗಿದ್ದ ಹಾಗೂ ಕೇಂದ್ರ ಇಂಧನ ಸಚಿವಾಲಯಕ್ಕೆ ಸೇರಿದ ನೂರು ಕೋಟಿ ರೂಪಾಯಿಗಳಿಗಿಂತಲೂ ಅಧಿಕ ಮೌಲ್ಯದ 32 ಗುಂಟೆ ಸರ್ಕಾರಿ ಜಾಗವನ್ನು ಅಕ್ರಮವಾಗಿ ವಶಪಡಿಸಿ ಕೊಳ್ಳಲಾಗಿದೆ ಎಂಬ ಗಂಭೀರ ದೂರನ್ನು ಬಿಜೆಪಿ ಮುಖಂಡ ಎನ್.ಆರ್.ರಮೇಶ್ ಅವರು ಬಹಿರಂಗ 'ಪಡಿಸಿದ್ದಾರೆ.

ಪ್ರಸ್ತುತ ಸರ್ಕಾರದ ಪ್ರಭಾವಿ ಸಚಿವ ಕೃಷ್ಣಬೈರೇಗೌಡ ಅವರ ನಿಕಟವರ್ತಿ ಹಾಗೂ ಬಿಬಿಎಂಪಿ ಮಾಜಿ ಸದಸ್ಯ ಕೆ.ಎಂ. ಚೇತನ್ ಮತ್ತು ಅವರ ತಂದೆ ಮಂಜುನಾಥ್ ಎಂಬುವವರು ತಮ್ಮ ಒಡೆತನದ ಚೇರ್ಮನ್ ಕ್ಲಬ್‌ಗಾಗಿ ಈ ಅಮೂಲ್ಯ ಆಸ್ತಿಯನ್ನು ಒತ್ತುವರಿ ಮಾಡಿಕೊಂಡು, ಅಲ್ಲಿ ವಾಹನ ನಿಲ್ದಾಣ ಹಾಗೂ ಮುಕ್ತ ಭೋಜನಾಲಯವನ್ನು ನಿರ್ಮಿಸಿದ್ದಾರೆ ಎಂದು ಆರೋಪಿಸಲಾಗಿದೆ. ಈ ಜಾಗಕ್ಕೆ ಸಂಬಂಧಿಸಿದಂತೆ ಈಗಾಗಲೇ ನ್ಯಾಯಾಲಯಗಳಲ್ಲಿ ಸುದೀರ್ಘ ಕಾನೂನು ಹೋರಾಟ



ನಡೆದಿದ್ದು, ಉಚ್ಚ ನ್ಯಾಯಾಲಯ ಸೇರಿದಂತೆ ವಿವಿಧ ನ್ಯಾಯಾಲಯಗಳು ಈ ಸ್ವತ್ತು ಸಂಪೂರ್ಣವಾಗಿ ಕೇಂದ್ರ ಸರ್ಕಾರಕ್ಕೆ ಸೇರಿದ್ದು ಎಂದು ಸ್ಪಷ್ಟ ತೀರ್ಪುಗಳನ್ನು ನೀಡಿವೆ. ತಪ್ಪು ಮಾಹಿತಿಗಳ ಆಧಾರದ ಮೇಲೆ ನಡೆದಿದ್ದ ಭೂಪರಿವರ್ತನೆಯನ್ನು ನ್ಯಾಯಾಂಗ ರದ್ದುಪಡಿಸಿದೆ. ಆದಾಗ್ಯೂ, ಈ ಒತ್ತುವರಿಯನ್ನು ತೆರವುಗೊಳಿಸುವಂತೆ ಕೇಂದ್ರದ ಅಧಿಕಾರಿಗಳು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿದ್ದರೂ ಯಾವುದೇ ಸೂಕ್ತ ಸ್ಪಂದನೆ ಸಿಕ್ಕಿಲ್ಲ. ಅಷ್ಟೇ ಅಲ್ಲದೆ, ಇತ್ತೀಚೆಗೆ ಕೇಂದ್ರದ ಅಧಿಕಾರಿಗಳು ಸಚಿವರನ್ನು ಭೇಟಿಯಾಗಿ ಭೂಮಿಯ ಸರ್ವೆ ನಡೆಸಲು ಕೋರಿದಾಗ, ಸಚಿವರು ಅವರಿಗೆ ಬೆದರಿಕೆ ಹಾಕಿ ಕಳುಹಿಸಿದ್ದಾರೆ ಎನ್ನಲಾಗಿದೆ.

ದೇಶದ ಅತ್ಯುನ್ನತ ಸಾಂವಿಧಾನಿಕ ಹುದ್ದೆಯ ಹೆಸರಿನಲ್ಲಿದ್ದ ಜಾಗಕ್ಕೇ ರಾಜಕೀಯ ಪ್ರಭಾವ ಬಳಸಿ ರಕ್ಷಣೆ ಇಲ್ಲದಂತೆ ಮಾಡಿರುವುದು ಆಘಾತಕಾರಿಯಾಗಿದೆ. ಈ ಹಿನ್ನೆಲೆಯಲ್ಲಿ ನಕಲಿ ದಾಖಲೆ ಸೃಷ್ಟಿ ಮತ್ತು ವಂಚನೆ ಎಸಗಿದ ಆರೋಪಿಗಳ ವಿರುದ್ಧ ಲೋಕಾಯುಕ್ತಕ್ಕೆ ದೂರನ್ನು ನೀಡಲಾಗಿದೆ. ಇಷ್ಟು ದೊಡ್ಡ ಮೊತ್ತದ ಭೂಹಗರಣದ ಸತ್ಯಾಸತ್ಯತೆ ಹೊರಬರಲು ಮತ್ತು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಲು ಇಡೀ ಪ್ರಕರಣವನ್ನು ಸಿಐಡಿ ತನಿಖೆಗೆ ಒಪ್ಪಿಸಬೇಕೆಂದು ಒತ್ತಾಯಿಸಿದ್ದಾರೆ.



ಖಾನಾಪುರ ತಾಲೂಕಿನ ಹಬ್ಬನಟ್ಟಿಯಲ್ಲಿ ಮಂಗಳವಾರ ಮುಂಗಾರು ಚುರುಕಾಗಿರುವುದರಿಂದ ಮಲಪ್ರಭಾ ನದಿ ಉಕ್ಕಿ ಹರಿಯುತ್ತಿದೆ.

### ಕೈಗಾರಿಕೆಗಾಗಿ ಮೀಸಲಿಟ್ಟ ಜಾಗ ಬಳಕೆಗೆ ಸರ್ಕಾರ ವಿಫಲ ರೈತರ ಫಲವತ್ತಾದ ಭೂಮಿ ಸ್ವಾಧೀನಕ್ಕೆ ಯತ್ನ

# ಟೆಕ್ನಾಲಜಿ ಸಿಟಿ ವಿರೋಧಿ ಹೋರಾಟಕ್ಕೆ ಪ್ರತಿಪಕ್ಷ ನಾಯಕ ಅಶೋಕ್ ಬೆಂಬಲ

**ಆನೇಕಲ್, ಜು.7:** ತಾಲೂಕಿನ ಮುತ್ತಾನಲ್ಲೂರಲ್ಲಿ ಸ್ಟಾರ್ಟಪ್, ವರ್ಕ್‌ಸ್ಪೇಸ್, ಇನ್ನೋವೇಷನ್, ನಾನ್ಸ್ ಮತ್ತು ಟೆಕ್ನಾಲಜಿ ಸಿಟಿ ಯೋಜನೆ ವಿರೋಧಿಸಿ ರೈತರು ನಡೆಸುತ್ತಿರುವ ಹೋರಾಟದ ಸ್ಥಳಕ್ಕೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಭೇಟಿ ನೀಡಿ ಬೆಂಬಲ ಸೂಚಿಸಿದರು.

ಸರ್ಜಾಪುರ ಹೋಬಳಿಯ ಸುಮಾರು 2,450 ಎಕರೆ ಭೂಮಿಯನ್ನು ಯೋಜನೆಗಾಗಿ ಸ್ವಾಧಿನಪಡಿಸಿಕೊಳ್ಳಲು ಸರ್ಕಾರ ಅಧಿಸೂಚನೆ ಹೊರಡಿಸಿರುವುದನ್ನು ವಿರೋಧಿಸಿ ರೈತರು 362 ದಿನಗಳಿಂದ ಅಹೋರಾತ್ರಿ ಧರಣಿ ನಡೆಸುತ್ತಿದ್ದಾರೆ. ಇತ್ತೀಚೆಗೆ ಹೋರಾಟವನ್ನು ತೀವ್ರಗೊಳಿಸುವ ನಿಟ್ಟಿನಲ್ಲಿ ಬೆಂಗಳೂರಿನತ್ತ ಹೊರಟ ರೈತರನ್ನು ಪೊಲೀಸರು ತಡೆದು ಲಾಠಿಪ್ರಹಾರ ನಡೆಸಿದ್ದರು. ಈ ವೇಳೆ ಮಹಿಳೆಯರು ಹಾಗೂ ವೃದ್ಧ ರೈತರೂ ಗಾಯಗೊಂಡಿದ್ದರು. ಪೊಲೀಸ್ ಕ್ರಮಕ್ಕೆ ವ್ಯಾಪಕ ವಿರೋಧ ವ್ಯಕ್ತವಾಗಿತ್ತು.

ಈ ಹಿನ್ನೆಲೆಯಲ್ಲಿ ಹೋರಾಟನಿರತ ರೈತರನ್ನು ಭೇಟಿ ಮಾಡಿದ ಆರ್. ಅಶೋಕ್, ಹೋರಾಟಗಾರರ ಅಹವಾಲುಗಳನ್ನು ಆಲಿಸಿ ಚರ್ಚಿಸಿದರು.

**ಶ್ವೇತಪತ್ರ ಬಿಡುಗಡೆ ಮಾಡಲಿ:** ಕಾಂಗ್ರೆಸ್ ಸರ್ಕಾರ ಯಾವುದೇ ಲಾಭವಿಲ್ಲದೆ ಏನನ್ನೂ ಮಾಡುವುದಿಲ್ಲ. ಇದು ಕಮಿಷನ್ ಸರ್ಕಾರವಾಗಿದೆ. ರೈತರು ನ್ಯಾಯಯುತ ಬೇಡಿಕೆಗಳನ್ನು ಸಲ್ಲಿಸಲು ತೆರಳಿದಾಗ ಅವರನ್ನು ಪೊಲೀಸರು ತಡೆದು ಲಾಠಿ ಪ್ರಹಾರ ನಡೆಸಿರುವುದು ಖಂಡನೀಯ. ರಾಜ್ಯ ಸರ್ಕಾರ ತಣವೇ ಶ್ವೇತಪತ್ರ ಬಿಡುಗಡೆ ಮಾಡಿ, ರಾಜ್ಯದಲ್ಲಿ ಎಷ್ಟು ಕೈಗಾರಿಕಾ ಪ್ರದೇಶಗಳನ್ನು ನಿರ್ಮಿಸಲಾಗಿದೆ ಹಾಗೂ ಅವುಗಳಲ್ಲಿ ಎಷ್ಟು ಭೂಮಿ ಖಾಲಿ ಉಳಿದಿದೆ ಎಂಬ ಮಾಹಿತಿಯನ್ನು ಸಾರ್ವಜನಿಕರ ಮುಂದಿಡಬೇಕು ಎಂದು ಆರ್.ಅಶೋಕ್ ಆಗ್ರಹಿಸಿದರು.



**ತಾಲೂಕು ಕಚೇರಿ ಮುತ್ತಿಗೆ ಹೋರಾಟ ಹಮ್ಮಿಕೊಳ್ಳಲು ಕರೆ:** ಕೈಗಾರಿಕೆಗಳಿಗಾಗಿ ಮೀಸಲಾಗಿರುವ ಭೂಮಿಯ ಬಹುಪಾಲು ಖಾಲಿ ಇದ್ದರೂ ಅದನ್ನು ಬಳಸಿಕೊಳ್ಳುವ ಪ್ರಯತ್ನ ಮಾಡದೆ ರೈತರ ಫಲವತ್ತಾದ ಭೂಮಿಯನ್ನು ಸ್ವಾಧಿನಪಡಿಸಿಕೊಳ್ಳಲು ಸರ್ಕಾರ ಮುಂದಾಗಿದೆ. ಕೈಗಾರಿಕೆ ಎಂಬ ಹೆಸರಿನಲ್ಲಿ ಭೂಮಿಯನ್ನು ಪಡೆದು ನಂತರ ರಿಯಲ್ ಎಸ್ಟೇಟ್ ವ್ಯವಹಾರಗಳಿಗೆ ಬಳಸುವ ಯತ್ನ ನಡೆಯುತ್ತಿದೆ. ಮುಂದಿನ ಹತ್ತು ದಿನಗಳೊಳಗೆ ತಾಲೂಕು ಕಚೇರಿಗೆ ಬೀಗ ಜಡಿಯುವ ಹೋರಾಟ ಹಮ್ಮಿಕೊಳ್ಳಿ. ಆ ಹೋರಾಟದಲ್ಲಿ ನಾನೂ ಭಾಗವಹಿಸುತ್ತೇನೆ. ಮುಂದಿನ ಅಧಿವೇಶನ ರೈತರ ಹೋರಾಟದ ಅಧಿವೇಶನವಾಗಲಿದೆ ಎಂದು ಆರ್. ಅಶೋಕ್ ಹೇಳಿದರು.

ಬೊಮ್ಮನಹಳ್ಳಿ ಶಾಸಕ ಎಂ. ಸತೀಶ್ ರೆಡ್ಡಿ ಮಾತನಾಡಿ, ರೈತರ ಒಪ್ಪಿಗೆ ಇಲ್ಲದೆ ಫಲವತ್ತಾದ ಕೃಷಿ ಭೂಮಿ ಸ್ವಾಧಿನಪಡಿಸಿಕೊಳ್ಳುವ ಯಾವುದೇ ಪ್ರಯತ್ನವನ್ನು ಬಿಜೆಪಿ ಬೆಂಬಲಿಸು ವುದಿಲ್ಲ. ಅಭಿವೃದ್ಧಿಯ ಹೆಸರಿನಲ್ಲಿ ರೈತರ ಬದುಕನ್ನು ಸಂಕಷ್ಟಕ್ಕೆ ತಳ್ಳುವ ಕ್ರಮಗಳನ್ನು ಸರ್ಕಾರ ಕೈಬಿಡಬೇಕು. ಸರ್ಜಾಪುರ ಹೋಬಳಿಯ ರೈತರ ಹೋರಾಟಕ್ಕೆ ಬಿಜೆಪಿ ಸಂಪೂರ್ಣ ಬೆಂಬಲ ನೀಡಲಿದ್ದು, ರೈತರ ಹಕ್ಕುಗಳ ರಣೆಗೆ ಪದ ಎಲ್ಲ ಜನಪ್ರತಿನಿಧಿಗಳು ಅವರೊಂದಿಗೆ ನಿಲ್ಲಲಿದ್ದಾರೆ ಎಂದರು.

**ವಿಷಾದ ವ್ಯಕ್ತಪಡಿಸಿದ ಸಂಸದ:** ಸಂಸದ ಡಾ.ಸಿ.ಎನ್ ಮಂಜುನಾಥ್ ಮಾತನಾಡಿ, ಆನೇಕಲ್ ತಾಲೂಕಿನ ರಸ್ತೆಗಳ ಸ್ಥಿತಿ ಅತ್ಯಂತ ದುಸ್ಥಿತಿಯಲ್ಲಿದ್ದು, ರಸ್ತೆ, ಕುಡಿಯುವ ನೀರು ಹಾಗೂ ಮೂಲಸೌಕರ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡಬೇಕಾದ ಸರ್ಕಾರ, ಫಲವತ್ತಾದ ಕೃಷಿಭೂಮಿ ಸ್ವಾಧಿನ ಪಡಿಸಿಕೊಳ್ಳುವ ಕೆಲಸದಲ್ಲಿ ತೊಡಗಿರುವುದು ವಿಷಾದನೀಯ ಎಂದರು.

ಭೂಸ್ವಾಧೀನ ಪ್ರಕ್ರಿಯೆ ಕೈಬಿಡುವ ಕುರಿತು ಮುಂದಿನ ವಿಧಾನಸಭಾ ಚುನಾವಣೆಗೆ ಬಿಜೆಪಿ ಬಿಡುಗಡೆ ಮಾಡುವ ಪ್ರಣಾಳಿಕೆಯಲ್ಲಿ ಸ್ಪಷ್ಟ ಭರವಸೆ ನೀಡಬೇಕು ಮತ್ತು ರೈತರ ಭೂಮಿ ಮತ್ತು ಬದುಕಿನ ಪ್ರಶ್ನೆಗೆ ಶಾಶ್ವತ ಪರಿಹಾರ ಸಿಗಬೇಕಾದರೆ ರಾಜಕೀಯ ಪಗಳು ತಮ್ಮ ನಿಲುವನ್ನು ಸಾರ್ವಜನಿಕವಾಗಿ ಘೋಷಿಸಬೇಕು ಎಂದು ಸಂಸದರು ಆಗ್ರಹಿಸಿದರು.

## ಐತಿಹಾಸಿಕ - ಧಾರ್ಮಿಕ ಕೇಂದ್ರಗಳಿಗೆ ಸಿಎಂ ಭೇಟಿ



**ಕಲಬುರಗಿ, ಜು.7:** ಜಿಲ್ಲಾ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಂಗಳವಾರ ಐತಿಹಾಸಿಕ ಹಾಗೂ ಧಾರ್ಮಿಕ ಕೇಂದ್ರಗಳಿಗೆ ಭೇಟಿ ನೀಡಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಮೊದಲು ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಹಜರತ್ ಖ್ವಾಜಾ ಬಂದೇನವಾಜ್ ದರ್ಗಾಕ್ಕೆ ಭೇಟಿ ನೀಡಿದ ಅವರು, ನಾಡಿನ ಸಮಸ್ತ ಜನರ ಸುಖ, ಶಾಂತಿ ಹಾಗೂ ಸೌಹಾರ್ದತೆಗಾಗಿ ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ದರ್ಗಾದ ಧರ್ಮಗುರುಗಳನ್ನು ಭೇಟಿ ಮಾಡಿ ಅವರಿಂದ ಆಶೀರ್ವಾದ ಪಡೆದರು. ಇದಾದ ನಂತರ ಡಿ.ಕೆ. ಶಿವಕುಮಾರ್ ಅವರು ಕಲಬುರಗಿಯ ಶ್ರದ್ಧಾ ಕೇಂದ್ರವಾದ ಶರಣ ಬಸವೇಶ್ವರ ದೇವಸ್ಥಾನಕ್ಕೆ ತೆರಳಿದರು. ಅಲ್ಲಿ ದೇವಸ್ಥಾನದ ಹಿಂದಿನ ಪೀಠಾಧಿಪತಿಯಾಗಿದ್ದ ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರ ಪವಿತ್ರ ಗದ್ದುಗೆಗೆ ನಮಿಸಿ ಭಕ್ತಿಪೂರ್ವಕ ಗೌರವ ಸಮರ್ಪಿಸಿದರು. ಇದೇ ವೇಳೆ ಪ್ರಸ್ತುತ ಪೀಠಾಧಿಪತಿಗಳಾಗಿರುವ ಚಿರಂಜೀವಿ ದೊಡ್ಡಪ್ಪ ಅಪ್ಪ ಅವರನ್ನು ಭೇಟಿ ಮಾಡಿ ಅತ್ಯಂತ ಆತ್ಮೀಯವಾಗಿ ಮಾತುಕತೆ ನಡೆಸಿದರು.

ಈ ಧಾರ್ಮಿಕ ಭೇಟಿಗಳ ಸಂದರ್ಭ ದಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಸಚಿವರಾದ ಪ್ರಿಯಾಂಕ್ ಖರ್ಗೆ, ಯು.ಟಿ. ಖಾದರ್, ಡಾ. ಶರಣಪ್ರಕಾಶ್ ಪಾಟೀಲ್ ಹಾಗೂ ಶಾಸಕರಾದ ರಹೀಂ ಖಾನ್, ಅಜಯ್ ಸಿಂಗ್ ಸೇರಿದಂತೆ ಹಲವು ಪ್ರಮುಖ ರಾಜಕೀಯ ಗಣ್ಯರು ಮತ್ತು ಜನಪ್ರತಿನಿಧಿಗಳು ಉಪಸ್ಥಿತರಿದ್ದು ಸಾಥ್ ನೀಡಿದರು.

### ಸಚಿವ ಯತೀಂದ್ರ ಸಿದ್ದರಾಮಯ್ಯ ಖಾತೆ ಹಿಂಪಡೆದು ಬೇರೆ ಖಾತೆ ನೀಡಿ: ಸಿಎಂಗೆ ಪತ್ರ

## ಮೂಡಾ ಹಗರಣ ವಿಚಾರಣೆ ಹಂತದಲ್ಲಿರುವಾಗ ಗುರುತರ ಜವಾಬ್ದಾರಿ ಹೊಂದುವುದು ಸರಿಯಲ್ಲ ಎಂದು ಉಲ್ಲೇಖ

**ಮೈಸೂರು, ಜು.7:** ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪುತ್ರ ಡಾ. ಯತೀಂದ್ರ ಅವರಿಗೆ ನೀಡಲಾಗಿರುವ ನಗರಾಭಿವೃದ್ಧಿ ಖಾತೆಯನ್ನು ಹಿಂಪಡೆಯುವಂತೆ ನೈಜ ಹೋರಾಟಗಾರರ ವೇದಿಕೆಯ ಕಾರ್ಯಕರ್ತ ಎಂದು ಹೇಳಿಕೊಳ್ಳುವ ವ್ಯಕ್ತಿಯೊಬ್ಬರು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದಾರೆ. ಮಾಧ್ಯಮಗಳಿಗೆ ಬಿಡುಗಡೆ ಮಾಡಿದ ಮೂರು ಪುಟಗಳ ಪತ್ರದಲ್ಲಿ, ಕಾರ್ಯಕರ್ತ ಎಚ್.ಎಂ. ವೆಂಕಟೇಶ್ ಅವರು ಮೈಸೂರು ಲೋಕಾಯುಕ್ತ ಪೊಲೀಸ್, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ಕರ್ನಾಟಕ ಹೈ ಕೋರ್ಟ್ ಮತ್ತು ಜಾರಿ ನಿರ್ದೇಶನಾಲಯದಲ್ಲಿ ರಿಟ್ ಅರ್ಜಿಯನ್ನು ಉಲ್ಲೇಖಿಸಿದ್ದಾರೆ.



ನಗರಾಭಿವೃದ್ಧಿ ಖಾತೆ ಹೊರತುಪಡಿಸಿ ಬದಲಿ ಖಾತೆ ನೀಡುವಂತೆ ಪತ್ರದಲ್ಲಿ ಆಗ್ರಹಿಸಲಾಗಿದೆ. ನೈಜ ಹೋರಾಟಗಾರರ ವೇದಿಕೆಯಿಂದ ಸಿಎಂ ಡಿಕೆಶಿವಕುಮಾರ್ ಅವರಿಗೆ ಈ ಪತ್ರ ಬರೆಯಲಾಗಿದೆ. ಆ ಮೂಲಕ ಮುಡಾ ಪ್ರಕರಣ ಮತ್ತೆ ಚರ್ಚೆಗೆ ಬಂದಂತಾಗಿದೆ.

ಈ ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವಾಗ ನಗರಾಭಿವೃದ್ಧಿ ಇಲಾಖೆಯ ಗುರುತರ ಜವಾಬ್ದಾರಿಯನ್ನು ಹೊಂದುವುದು ಸರಿಯಲ್ಲ. ಆರೋಪಿತರ ಮಗನಾಗಿರುವ ಡಾ.ಯತೀಂದ್ರರವರನ್ನು ತಕ್ಷಣಕ್ಕೆ ಜಾರಿಗೆ ಬರುವಂತೆ ನಗರಾಭಿವೃದ್ಧಿ ಸಚಿವರ ಹೊಣೆಗಾರಿಕೆಯಿಂದ ಬಿಡುಗಡೆಗೊಳಿಸಿ. ಬದಲಿ ಖಾತೆಯಲ್ಲಿ ಅವರನ್ನು ಸಚಿವರಾಗಿ ಕಾರ್ಯ ನಿರ್ವಹಿಸಲಿ ಎಂದು ಆಗ್ರಹಿಸಲಾಗಿದೆ. ಒಂದು ವೇಳೆ ಯತೀಂದ್ರರವರು ನಗರಾಭಿವೃದ್ಧಿ ಇಲಾಖೆಯ ಹೊಣೆ ಮುಂದುವರಿಸಿದ್ದಲ್ಲಿ ಸ್ವಹಿತಾಸಕ್ತಿಯ ಸಂಘರ್ಷವಾಗುತ್ತದೆ. ತಂದೆ ತಾಯಿಯ ರಕ್ಷಣೆಗಾಗಿ ಅಧಿಕಾರವನ್ನು ದುರುಪಯೋಗ ಪಡಿಸಿಕೊಳ್ಳುವ ಸಾಧ್ಯತೆಗಳಿವೆ. ಈ ಬಗ್ಗೆ ಅನುಮಾನದ ಹುತ್ತ ಸಾರ್ವಜನಿಕರಲ್ಲಿ ಮೂಡುತ್ತದೆ. ಇದು ಸಹಜ ಕೂಡ. ಡಾ. ಯತೀಂದ್ರರವರು ನಗರಾಭಿವೃದ್ಧಿ ಖಾತೆಯಲ್ಲಿ ಮುಂದುವರಿಸಿದ್ದಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಧಕ್ಕೆ ತರುತ್ತದೆ ಎಂದು ಆತಂಕ ವ್ಯಕ್ತಪಡಿಸಲಾಗಿದೆ.

### ಮೈಸೂರು-ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ ಪುಂಡರ ಅಟ್ಟಹಾಸ

## ಓವರ್‌ಟೇಕ್ ವಿಚಾರವಾಗಿ ಕುಟುಂಬ ಸದಸ್ಯರ ಮೇಲೆ ಹಲ್ಲೆ



**ಮಂಡ್ಯ, ಜು.7:** ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್‌ವೇಯಲ್ಲಿ ಪುಂಡರ ದಾಂಧಲೆ ಮುಂದುವರಿದಿದ್ದು, ಓವರ್‌ಟೇಕ್ ವಿಚಾರವಾಗಿ ನಡೆದ ವಾಗ್ವಾದವು ಕುಟುಂಬವೊಂದರ ಮೇಲೆ ಮಾರಣಾಂತಿಕ ಹಲ್ಲೆಗೆ ಕಾರಣವಾದ ಘಟನೆ ಮಂಡ್ಯ ಜಿಲ್ಲೆ ಮದ್ದೂರು ಬಳಿ ಎಕ್ಸ್‌ಪ್ರೆಸ್ ವೇನಲ್ಲಿ ನಡೆದಿದೆ.

ಬೆಂಗಳೂರು ನಿವಾಸಿ ಸಾಗರ್ ಅವರು ಪತ್ನಿ, ಮಕ್ಕಳು ಹಾಗೂ ತಾಯಿಯೊಂದಿಗೆ ಜು.5ರಂದು ರಾತ್ರಿ ಕಾರಿನಲ್ಲಿ ಮೈಸೂರಿನಿಂದ ಬೆಂಗಳೂರಿಗೆ ವಾಪಸಾಗುತ್ತಿದ್ದರು. ಈ ವೇಳೆ ಶ್ರೀರಂಗಪಟ್ಟಣದ ಸರ್ವಿಸ್ ರಸ್ತೆಯಲ್ಲಿ ಓವರ್‌ಟೇಕ್ ವಿಚಾರವಾಗಿ ಮತ್ತೊಂದು ಕಾರಿನಲ್ಲಿದ್ದ ಪುಂಡರ ಗುಂಪು ಅವರೊಂದಿಗೆ ಜಗಳ ಆರಂಭಿಸಿತು. ಸಾಗರ್ ಕುಟುಂಬ ಅಲ್ಲಿಂದ ಮುಂದೆ ತೆರಳಿದರೂ, ಎರಡು ಕಾರುಗಳಲ್ಲಿ ಅವರನ್ನು ಬೆನ್ನಟ್ಟಿಕೊಂಡು ಮದ್ದೂರು ಬಳಿ ಎಕ್ಸ್ ಪ್ರೆಸ್‌ವೇ ಫ್ಲೈಓವರ್‌ವರೆಗೆ ಪುಂಡರು ಬಂದಿದ್ದಾರೆ. ಫ್ಲೈಓವರ್ ಮೇಲೆ ಸಿನಿಮಾ ಶೈಲಿಯಲ್ಲಿ ಸಾಗರ್ ಅವರ ಕಾರನ್ನು ಅಡ್ಡಗಟ್ಟಿ, ಅವರನ್ನು ಹೊರಗೆಳೆದು ಹಲ್ಲೆ ನಡೆಸಿದ್ದಾರೆ. ಈ ವೇಳೆ ಜಾಕ್ ರಾಡ್‌ನಿಂದ ಸಾಗರ್ ಅವರ ತಲೆಗೆ ಬಲವಾಗಿ ಹೊಡೆದಿದ್ದಾರೆ.

ಸಾಗರ್ ಅವರ ಪತ್ನಿ ಹಾಗೂ ತಾಯಿ ಕೈಮುಗಿದು ಬೇಡಿಕೊಂಡರೂ ಆರೋಪಿಗಳು ಹಲ್ಲೆ ನಿಲ್ಲಿಸಲಿಲ್ಲ. ತಂದೆಯನ್ನು ರಕ್ಷಿಸಲು ಬಂದ 8 ವರ್ಷದ ಮಗುವಿನ ಕೈಯನ್ನೂ ಆರೋಪಿಗಳು ಕ್ರೂರವಾಗಿ ತಿರುಚಿದ್ದಾರೆ ಎಂದು ಆರೋಪಿಸಲಾಗಿದೆ. ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಮದ್ದೂರು ಠಾಣೆ ಪೊಲೀಸರು ಸ್ಥಳಕ್ಕೆ ದಾವಿಸಿ ಸಾಗರ್ ಕುಟುಂಬವನ್ನು ರಕ್ಷಿಸಿ ಗಾಯಾಳುಗಳಿಗೆ ಚಿಕಿತ್ಸೆ ಕೊಡಿಸಿದ್ದಾರೆ.

ಆರೋಪಿಗಳ ವಿರುದ್ಧ ಮದ್ದೂರು ಪೊಲೀಸ್ ಠಾಣೆಯಲ್ಲಿ ಗಂಭೀರ ಪ್ರಕರಣ ದಾಖಲಿಸಲಾಗಿದೆ. ಇತ್ತೀಚಿನ ದಿನಗಳಲ್ಲಿ ಬೆಂಗಳೂರು–ಮೈಸೂರು ಎಕ್ಸ್ ಪ್ರೆಸ್‌ವೇಯಲ್ಲಿ ಸರಣಿ ಅಪರಾಧ ಪ್ರಕರಣಗಳು ಹೆಚ್ಚುತ್ತಿದ್ದು, ಸಾರ್ವಜನಿಕರ ಸುರಕ್ಷತೆ ಬಗ್ಗೆ ಆತಂಕ ವ್ಯಕ್ತವಾಗುತ್ತಿದೆ.

### ಕಾಂಗ್ರೆಸ್‌ನಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಮೂಲೆಗುಂಪು

## ಅಧಿಕಾರ ಹಸ್ತಾಂತರದ ನಂತರ ಕಾವೇರಿಯಲ್ಲಿ ಕೂಡಿಹಾಕಲಾಗಿದೆ: ಬಿ. ಶ್ರೀರಾಮುಲು ಟೀಕೆ

**ಮೈಸೂರು, ಜು.7:** ಡಿ.ದೇವರಾಜ ಅರಸು ಅವರಿಗೆ ಕಾಂಗ್ರೆಸ್ ಮೋಸ ಮಾಡಿದಂತೆ ಸಿದ್ದರಾಮಯ್ಯ ಅವರಿಗೂ ಕಾಂಗ್ರೆಸ್ ಮೋಸ ಮಾಡಿದೆ. ಸಿದ್ದರಾಮಯ್ಯ ಅಧಿಕಾರ ತ್ಯಜಿಸಿದ ನಂತರ ಅವರನ್ನು ಎಲ್ಲಿಗೂ ಕರೆಯದೆ ಕಾವೇರಿ ನಿವಾದಲ್ಲಿ ಕೂಡಿ ಹಾಕಲಾಗಿದೆ ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ತಿಳಿಸಿದರು.

ಮಾಧ್ಯಮದವರೊಂದಿಗೆ, ಅಧಿಕಾರ ಹಸ್ತಾಂತರ ಬಳಿಕ ಸಿದ್ದರಾಮಯ್ಯ ಅವರನ್ನು ಸಂಪೂರ್ಣ ಮೂಲೆ ಗುಂಪು ಮಾಡಲಾಗಿದೆ. ಸಿದ್ದರಾಮಯ್ಯ ಅಶೀರ್ವಾದದಿಂದ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಈಗ ಅದೇ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಕೂಡಿ ಹಾಕಿದೆ. ಸಿದ್ದರಾಮಯ್ಯ ಈಗ ಲೆಕ್ಕಕ್ಕೆ ಇಲ್ಲದ ಮನುಷ್ಯ ಎಂಬ ರೀತಿ ನೋಡಲಾಗುತ್ತಿದೆ ಎಂದು ಹೇಳಿದರು.



ಅಧಿಕಾರ ತೆಗೆದುಕೊಳ್ಳುವ ತನಕ ಸಿಎಂ ಡಿ.ಕೆ.ಶಿವಕುಮಾರ್ ಸಿದ್ದರಾಮಯ್ಯ ಅವರನ್ನು ಅತಿಯಾಗಿ ಓಲೈಸಿದರು. ಈಗ ಒಂದೇ ಒಂದು ಕಾರ್ಯಕ್ರಮಕ್ಕೂ ಮುಖ್ಯಮಂತ್ರಿಗಳು ಸಿದ್ದರಾಮಯ್ಯ ಅವರನ್ನು ಕರೆಯುತ್ತಿಲ್ಲ. ಸಿಎಂ ಅವರಿಗೆ ಈಗ ಸಿದ್ದರಾಮಯ್ಯ ಬೇಕಾಗಿಲ್ಲ. ಸಿಎಂ ಮನಸ್ಸು ಮಾಡಿದ್ದರೆ ಕೆಂಪೇಗೌಡ ಜಯಂತಿಯಲ್ಲಿ ಸಿದ್ದರಾಮಯ್ಯ ಫೋಟೋ ಹಾಕಿಸಬಹುದಿತ್ತು. ಆದರೆ ಹಾಕಿಸಲಿಲ್ಲ. ಕಾಂಗ್ರೆಸ್ 2023ರಲ್ಲಿ ಅಧಿಕಾರಕ್ಕೆ ಬಂದಿದ್ದು ಸಿದ್ದರಾಮಯ್ಯ ಅವರ ಆಶೀರ್ವಾದದಿಂದ. ಈಗ ಅದೇ ಜನ 2028ಕ್ಕೆ ಕಾಂಗ್ರೆಸ್‌ಗೆ ಪಾಠ ಕಲಿಸುತ್ತಾರೆ ಎಂದರು.

ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ವಿರುದ್ಧ ಕಾಂಗ್ರೆಸ್ ಒಳಗಡೆಯೇ ಪಿತೂರಿ ನಡೆಯುತ್ತಿದೆ. ಯತೀಂದ್ರ ಅವರಿಗೆ ನಗರಾಭಿವೃದ್ಧಿ ಖಾತೆ ಯಾಕೆ ಎಂದು ಚರ್ಚೆ ಶುರು ಮಾಡಿರುವುದೇ ಕಾಂಗ್ರೆಸ್. ಕಾಂಗ್ರೆಸ್‌ನ ಒಂದು ಗುಂಪಿಗೆ ಯತೀಂದ್ರ ಸಿದ್ದರಾಮಯ್ಯ ಆ ಖಾತೆಯಲ್ಲಿರುವುದು ಇಷ್ಟ ಇಲ್ಲ. ಮುಡಾ ಹಗರಣದಲ್ಲಿ ಯತೀಂದ್ರ ಕುಟುಂಬದ ಮೇಲೆ ಆರೋಪ ಇದೆ. ಹೀಗಾಗಿ ಯತೀಂದ್ರ ನಗರಾಭಿವೃದ್ಧಿ ಖಾತೆ ವಹಿಸಿಕೊಂಡಿರುವುದು ಸರಿಯಲ್ಲ. ನನ್ನ ವೈಯಕ್ತಿಕ ಅಭಿಪ್ರಾಯದಲ್ಲಿ ಯತೀಂದ್ರ ಆ ಖಾತೆ ಬಿಡಬೇಕು ಎಂದು ಹೇಳಿದರು.

## ಮಲ್ಲಳ್ಳಿ ಜಲಪಾತದ ನೀರಿನಲ್ಲಿ ಸಿಲುಕಿದ್ದ ಇಬ್ಬರು ವಿದ್ಯಾರ್ಥಿಗಳ ರಕ್ಷಣೆ

**ಮಡಿಕೇರಿ, ಜು.7:** ಫೋಟೋ ತೆಗೆಯಲು ಹೋಗಿ ಜಲದಿಗ್ಬಂಧನಕ್ಕೆ ಸಿಲುಕಿದ್ದ ಇಬ್ಬರು ಕಾಲೇಜು ವಿದ್ಯಾರ್ಥಿಗಳನ್ನು ಅಗ್ನಿಶಾಮಕ ಸಿಬ್ಬಂದಿ ರಕ್ಷಿಸಿರುವ ಘಟನೆ ಸೋಮವಾರ ಪೇಟೆ ತಾಲೂಕಿನ ಮಲ್ಲಳ್ಳಿ ಜಲಪಾತದಲ್ಲಿ ನಡೆದಿದೆ. ಆಂಧ್ರಪ್ರದೇಶ ಮೂಲದ ಸಂತೋಷ್ ಕುಮಾರ್ ಮತ್ತು ಗಣೇಶ್ ನಾಯಕ್ ಬೆಂಗಳೂರಿನ ಕಾಲೇಜೊಂದರಲ್ಲಿ ವ್ಯಾಸಂಗ ಮಾಡುತ್ತಿದ್ದು, ವೀಕೆಂಡ್ ಕಳೆಯಲು ಕೊಡಗು ಪ್ರವಾಸಕ್ಕೆ ಬಂದಿದ್ದರು. ಭೋರ್ಗರೆಯುತ್ತಿದ್ದ ಮಲ್ಲಳ್ಳಿ ಜಲಪಾತದ ಮಧ್ಯದಲ್ಲಿದ್ದ ಬಂಡೆಯೊಂದರ ಮೇಲೆ ನಿಂತು ಫೋಟೋ ಹಾಗೂ ಸೆಲ್ಫಿ ತೆಗೆದುಕೊಳ್ಳಲು ಇಬ್ಬರೂ ಇಳಿದಿದ್ದರು. ಬಂಡೆಯ ಮೇಲೆ ನಿಂತು ಫೋಟೋ ಕ್ಲಿಕ್ಕಿಸಿಕೊಳ್ಳುತ್ತಿದ್ದಾಗ, ಜಲಪಾತದ ಮೇಲ್ಭಾಗದಲ್ಲಿರುವ ವಿದ್ಯುತ್ ಉತ್ಪಾದನಾ ಘಟಕದಿಂದ ಏಕಾಏಕಿ ಹೆಚ್ಚಿನ ಪ್ರಮಾಣದ ನೀರನ್ನು ನದಿಗೆ ಹರಿಬಿಡಲಾಯಿತು. ಪರಿಣಾಮ



ಕಣ್ಮುಚ್ಚಿ ಕಣ್ಬಿಡುವಷ್ಟರಲ್ಲಿ ನದಿಯ ನೀರಿನ ಮಟ್ಟ ಅಪಾಯದ ಮಟ್ಟ ಮೀರಿ ಹೆಚ್ಚಾಯಿತು. ನೀರಿನ ರಭಸಕ್ಕೆ ಹೆದರಿದ ವಿದ್ಯಾರ್ಥಿಗಳಿಗೆ ದಡ ಸೇರಲು ಸಾಧ್ಯವಾಗದೆ, ನಡು ನದಿಯ ಬಂಡೆಯ ಮೇಲೆಯೇ ಸಿಲುಕಿಕೊಂಡರು. ನೀರಿನ ಆರ್ಭಟ ಹೆಚ್ಚುತ್ತಿದ್ದಂತೆ ಇಬ್ಬರು ಆತಂಕದಿಂದ ಕಿರುಚಾಡಲು ಆರಂಭಿಸಿದ್ದಾರೆ. ನಡುನೀರನಲ್ಲಿ ಸಿಲುಕಿ ಆಕ್ರಂದನ ಮಾಡುತ್ತಿದ್ದ ಯುವಕರನ್ನು ಕಂಡು ತಕ್ಷಣವೇ ಸ್ಥಳೀಯರು ಹಾಗೂ ಇತರ ಪ್ರವಾಸಿಗರು ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದ್ದಾರೆ. ತಕ್ಷಣವೇ ಕಾರ್ಯಪ್ರವೃತ್ತರಾದ ಅಗ್ನಿಶಾಮಕ ಸಿಬ್ಬಂದಿ, ಉಕ್ಕಿ ಹರಿಯುತ್ತಿದ್ದ ನೀರಿನ ರಭಸವನ್ನೂ ಲೆಕ್ಕಿಸದೆ ಹಗ್ಗ ಹಾಗೂ ಲೈಫ್ ಜಾಕೆಟ್ಗಳ ಸಹಾಯದಿಂದ ಸಾಹಸಮಯ ಕಾರ್ಯಾಚರಣೆ ನಡೆಸಿದ್ದಾರೆ. ಕೊನೆಗೂ ಇಬ್ಬರು ವಿದ್ಯಾರ್ಥಿಗಳನ್ನು ಸುರಕ್ಷಿತವಾಗಿ ದಡಕ್ಕೆ ಕರೆತರುವಲ್ಲಿ ಸಿಬ್ಬಂದಿ ಯಶಸ್ವಿಯಾಗಿದ್ದಾರೆ. ಅದೃಷ್ಟವಶಾತ್ ಅಗ್ನಿಶಾಮಕ ಸಿಬ್ಬಂದಿಯ ಸಕಾಲಿಕ ಕಾರ್ಯಾಚರಣೆಯಿಂದ ಇಬ್ಬರು ವಿದ್ಯಾರ್ಥಿಗಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

## ಜಿಲ್ಲಾ ಆಸ್ಪತ್ರೆಗೆ ಆರೋಗ್ಯ ಅಧಿಕಾರಿಗಳ ಭೇಟಿ ಗರ್ಭಿಣಿಯರು – ನವಜಾತ ಶಿಶುಗಳ ಆರೋಗ್ಯ ರಕ್ಷಣಾ ಜಾಗೃತಿಗೆ ಕರೆ



**ಬಳ್ಳಾರಿ,ಜು.07.**ಜಿಲ್ಲಾ ಆಸ್ಪತ್ರೆಯ ತಾಯಿ ಮತ್ತು ಮಕ್ಕಳ ಆರೋಗ್ಯ ವಿಭಾಗಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಎನ್. ಬಸರೆಡ್ಡಿ, ಬಳ್ಳಾರಿ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಆರ್. ಅಬ್ದುಲ್ಲಾ ಮತ್ತು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ. ಪೂಜಾರ್ ಅವರು ಜಂಟಿಯಾಗಿ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿದ್ದ ತಾಯಂದಿರನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು, ಗರ್ಭಿಣಿಯರು, ಬಾಣಂತಿಯರು ಮತ್ತು ನವಜಾತ ಶಿಶುಗಳ ಆರೈಕೆ ಹಾಗೂ ಆರೋಗ್ಯದ ಕುರಿತು ಸವಿಸ್ತಾರವಾದ ಮಾಹಿತಿ ನೀಡಿ ಜಾಗೃತಿ ಮೂಡಿಸಿದರು.

ಗರ್ಭಾವಸ್ಥೆಯಲ್ಲಿ ಮತ್ತು ಹೆರಿಗೆಯ ನಂತರ ತಾಯಿಯ ದೈಹಿಕ ಹಾಗೂ ಮಾನಸಿಕ ಆರೋಗ್ಯವು ಮಗುವಿನ ಮೇಲೆ ನೇರ ಪರಿಣಾಮ ಬೀರುತ್ತದೆ. ಹೀಗಾಗಿ ತಾಯಂದಿರು ಪ್ರೋಟೀನ್, ಕ್ಯಾಲ್ಸಿಯಂ, ಕಬ್ಬಿಣಾಂಶ (ಐರನ್) ಮತ್ತು ಫೋಲಿಕ್ ಆಸಿಡ್ ಸಮೃದ್ಧವಾಗಿರುವ ಹಸಿರು ಎಲೆ ತರಕಾರಿಗಳು, ಹಾಲು, ಮೊಟ್ಟೆ ಧಾನ್ಯಗಳು ಹಾಗೂ ಹಣ್ಣುಗಳನ್ನು ಹೆಚ್ಚಾಗಿ ಸೇವಿಸಬೇಕು. ಪ್ರತಿದಿನ 2 ರಿಂದ 3 ಲೀಟರ್ ನೀರು ಕುಡಿಯಬೇಕು. ತಾಯಿಗೆ ಕನಿಷ್ಠ 7 ರಿಂದ 9 ಗಂಟೆಗಳ ಉತ್ತಮ ನಿದ್ರೆ ಹಾಗೂ ಮಾನಸಿಕ ಒತ್ತಡವಿಲ್ಲದ ಸಂತೋಷದ ವಾತಾವರಣ ಅತ್ಯಗತ್ಯ. ಮಲಗುವಾಗ ಎಡಬದಿಗೆ ಮಲಗುವುದು ರಕ್ತಸಂಚಾರಕ್ಕೆ ಸಹಕಾರಿಯಾಗಿದೆ. ವೈದ್ಯರ ಸಲಹೆಯಿಲ್ಲದೆ ಯಾವುದೇ ಔಷಧಿಗಳನ್ನು ಸೇವಿಸಬಾರದು ಹಾಗೂ ಧೂಮಪಾನ, ಮದ್ಯಪಾನಗಳಿಂದ ದೂರವಿರಬೇಕು. ಗರ್ಭಿಣಿಯರು ಹೆರಿಗೆಗೆ ಮುನ್ನ ಕಡ್ಡಾಯವಾಗಿ 4 ಬಾರಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು.

ಮೊದಲನೇ ತಪಾಸಣೆ (ಮೊದಲ 3 ತಿಂಗಳು) ಗರ್ಭಧಾರಣೆ ಖಚಿತವಾದ ತಕ್ಷಣ (12 ವಾರಗಳ ಒಳಗೆ) ಮೂಲ ವಿವರಗಳ ದಾಖಲಾತಿಗಾಗಿ, ಎರಡನೇ ತಪಾಸಣೆ (4 ರಿಂದ 6 ನೇ ತಿಂಗಳು) 14 ರಿಂದ 26 ನೇ ವಾರದ ಅವಧಿಯಲ್ಲಿ ಮಗುವಿನ ಬೆಳವಣಿಗೆ ಗಮನಿಸಲು, 3ನೇ ತಪಾಸಣೆ 28 ರಿಂದ 34ನೇ ವಾರದಲ್ಲಿ ತಾಯಿಯ ರಕ್ತದೊತ್ತಡ ಅಥವಾ ಮಧುಮೇಹದ ಲಕ್ಷಣಗಳನ್ನು ಪರೀಕ್ಷಿಸಲು, ನಾಲ್ಕನೇ ತಪಾಸಣೆ (9 ನೇ ತಿಂಗಳು) 36 ನೇ ವಾರದಿಂದ ಹೆರಿಗೆಯಾಗುವವರೆಗಿನ ಅವಧಿಯಲ್ಲಿ ಹೆರಿಗೆಯ ಸಿದ್ಧತೆಗಾಗಿ ತಪಾಸಣೆ ಮಾಡಿಸಬೇಕು ಎಂದರು.

# ಹುಟ್ಟು–ಮೃತ್ಯುವಿನ ಮಧ್ಯದ ಬದುಕು ಸಾರ್ಥಕಗೊಳ್ಳಲಿ: ರಂಭಾಪುರಿಶ್ರೀ

**ಗದಗ–ಜುಲೈ–1:** ಬಹು ಜನ್ಮ–ಜನ್ಮಗಳ ಪುಣ್ಯದ ಫಲವಾಗಿ ಮಾನವ ಜನ್ಮ ಪ್ರಾಪ್ತವಾಗಿದೆ. ಅರಿವುಳ್ಳ ಮಾನವ ಜೀವನದಲ್ಲಿ ಆದರ್ಶ ಚಿಂತನೆಗಳನ್ನು ಅಳವಡಿಸಿಕೊಂಡು ಬಾಳಬೇಕು. ಹುಟ್ಟು ಎಷ್ಟು ಸಹಜವೋ ಮೃತ್ಯು ಅಷ್ಟೇ ನಿಶ್ಚಿತ. ಹುಟ್ಟು ಮತ್ತು ಮೃತ್ಯುವಿನ ಮಧ್ಯ ಇರುವ ಬದುಕನ್ನು ಸಾರ್ಥಕಗೊಳಿಸಬೇಕಾದದ್ದು ಅವರವರ ಜವಾಬ್ದಾರಿಯಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯ ಪಟ್ಟರು.

ಅವರು ಬುಧವಾರ ನಗರದ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಉಭಯ ಗಾನವಿಶಾರದ ಲಿಂ. ಶ್ರೀ ಪಂಚಾಕ್ಷರ ಗವಾಯಿಗಳವರ 82ನೇ ವರ್ಷದ ಪುಣ್ಯ ಸ್ಮರಣೆ ಮತ್ತು ಪಂಡಿತ ಡಾ. ಪುಟ್ಟರಾಜ ಕವಿ ಗವಾಯಿಗಳವರ 16ನೇ ವರ್ಷದ ಪುಣ್ಯ ಸ್ಮರಣೋತ್ಸವದ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವ ಜೀವನ ಒಂದು ತೆರೆದಿಟ್ಟ ಪುಸ್ತಕ. ಆ ಪುಸ್ತಕದ ಮೊದಲನೆಯ ಪುಟವನ್ನು ಮತ್ತು ಕೊನೆಯ ಪುಟವನ್ನು ಭಗವಂತನೇ ಬರೆದು ಕಳಿಸಿದ್ದಾನೆ. ಮೊದಲನೇ ಪುಟದಲ್ಲಿ ಹುಟ್ಟು ಬರೆದರೆ ಕೊನೆಯ ಪುಟದಲ್ಲಿ ಮೃತ್ಯು ಬರೆದಿಟ್ಟಿದ್ದಾನೆ. ಹುಟ್ಟುವಾಗ ಉಸಿರು ಇರುತ್ತದೆ. ಆದರೆ ಹೆಸರು ಇರುವುದಿಲ್ಲ. ಮನುಷ್ಯ ಅಗಲಿದಾಗ ಉಸಿರು ಇರುವುದಿಲ್ಲ. ಆದರೆ ಹೆಸರು ಉಳಿಯುವ ರೀತಿ ಬಾಳಿ ಬದುಕಿದವರು ಶ್ರೀ ವೀರೇಶ್ವರ ಪುಣ್ಯಾಶ್ರಮದ ಪುಣ್ಯಾತ್ಮರು.



ಲಿಂ. ಹಾನಗಲ್ ಶ್ರೀ ಕುಮಾರ ಶಿವಯೋಗಿಗಳವರ ಕಾರುಣ್ಯ ಕೃಪಾಶೀರ್ವಾದದೊಂದಿಗೆ ವೀರೇಶ್ವರ ಪುಣ್ಯಾಶ್ರಮ ಸ್ಥಾಪಿತಗೊಂಡಿತು.

ಕಣ್ಣಿದ್ದವರೆ ಬಾಳುವುದು ಕಷ್ಟ. ಕಣ್ಣಿಲ್ಲದವರು ಬಾಳುವುದು ಇನ್ನಷ್ಟು ಕಷ್ಟ. ಶ್ರೀ ಪಂಚಾಕ್ಷರ ಗವಾಯಿಗಳವರು ಅಂಧರ ಬಾಳಿಗೆ ಬೆಳಕು ತೋರಿದವರು. ಕಣ್ಣಿದ್ದವರಂತೆ ಬಾಳಿ ಬದುಕಿ ಸಂಗೀತ ಜ್ಞಾನವನ್ನು ಅನುಗ್ರಹಿಸಿ ಉದ್ಧರಿಸಿದ್ದನ್ನು ಮರೆಯಲಾಗದು. ಅದೇ ಹೆದ್ದಾರಿಯಲ್ಲಿ ಡಾ. ಪುಟ್ಟರಾಜ ಕವಿ ಗವಾಯಿಗಳವರು ಸದಾ ಕ್ರಿಯಾಶೀಲರಾಗಿ ಘನ ವಿದ್ವಾಂಸರಾಗಿ ಹಲವಾರು ಪುರಾಣ ಪುಣ್ಯ ಕಥೆಗಳನ್ನು ಬರೆದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ.

ಇಂದು ಆ ಜವಾಬ್ದಾರಿಯನ್ನು ಶ್ರೀ ಕಲ್ಲಯ್ಯಜ್ಜನವರು ವಹಿಸಿಕೊಂಡು ಅತ್ಯಂತ ಯಶಸ್ವಿಯಾಗಿ ಆಶ್ರಮವನ್ನು ಮುನ್ನಡೆಸುತ್ತಿದ್ದಾರೆ. ಆ ಉಭಯ ಮಹಾನುಭಾವರ ಪುಣ್ಯ ಸ್ಮರಣೋತ್ಸವ ಜರುಗುತ್ತಿರುವುದು ಧರ್ಮಾಭಿಮಾನಿ ಗಳಿಗೆ ಸಂತೋಷವನ್ನು ಉಂಟು ಮಾಡುತ್ತದೆ ಎಂದರು.

ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ಶಿರಕೋಳ ಹಿರೇಮಠದ ಗುರುಸಿದ್ಧೇಶ್ವರ ಶಿವಾಚಾರ್ಯರು, ಮೈನಹಳ್ಳಿ ಸಿದ್ದೇಶ್ವರ ಶಿವಾಚಾರ್ಯರು, ನರೇಗಲ್ ಮಲ್ಲಿಕಾರ್ಜುನ ಶಿವಾಚಾರ್ಯರು, ಅಡ್ನೂರ ರಾಜೂರ ಅಭಿನವ ಪಂಚಾಕ್ಷರ ಶಿವಾಚಾರ್ಯರು, ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು, ನೆಗಳೂರ ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯರು, ಚಳಗೇರಿ ಹಿರೇಮಠದ ವೀರಸಂಗಮೇಶ್ವರ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ ಶ್ರೀ ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು ಮಾತನಾಡಿ ಗುರು ಕಾರುಣ್ಯವಿಲ್ಲದೆ ಯಾವ ಕಾರ್ಯಗಳು ನಡೆಯುವುದಿಲ್ಲ. ಜ್ಞಾನ ಸೂರ್ಯನಾದ ಶ್ರೀ ಗುರುವಿನಿಂದ ಭವ ಬಂಧನ ದೂರವಾಗಿ ಜೀವನ ಉಜ್ವಲಗೊಳ್ಳುತ್ತದೆ. ಶ್ರೀ ವೀರೇಶ್ವರ ಪುಣ್ಯಾಶ್ರಮಕ್ಕೂ ಶ್ರೀ ಜಗದ್ಗುರು ರಂಭಾಪುರಿ ಪೀಠಕ್ಕೂ ಪೂರ್ವದಿಂದಲು ನಿಕಟವಾದ ಸಂಪರ್ಕ ಇರುವುದು ಎಲ್ಲರಿಗೂ ಗೊತ್ತಿರುವ ಸಂಗತಿ. ಈ ವರ್ಷ ಶ್ರೀ ರಂಭಾಪುರಿ ಜಗದ್ಗುರುಗಳಿಂದ ಕಾರ್ಯಕ್ರಮ ಪ್ರಾರಂಭಗೊಳ್ಳುತ್ತಿರುವುದು ಆಶ್ರಮದ ಎಲ್ಲ ಬಳಗಕ್ಕೂ ಸಂತೋಷ ಉಂಟು ಮಾಡಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರು ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ ಶ್ರೀ ವೀರೇಶ್ವರ ಪುಣ್ಯಾಶ್ರಮ ಅಂಧ ಅನಾಥ ಮಕ್ಕಳಿಗೆ ಆಸರೆಯಾಗುವುದಲ್ಲದೇ ಸಂಗೀತ ಶಿಕ್ಷಣದ ಮೂಲಕ ಅವರೆಲ್ಲರ ಬಾಳಿಗೆ ಬೆಳಕಾಗಿ ಕಾರ್ಯನಿರ್ವಹಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಶ್ರೀ ವೀರೇಶ್ವರ ಪುಣ್ಯಾಶ್ರಮ ಟ್ರಸ್ಟಿನ ಅಧ್ಯಕ್ಷ ನಿಂಗಪ್ಪ ಕೆಂಗಾರ ಡಾ.ಪಂ. ರಾಜಗುರು ಗುರುಸ್ವಾಮಿ ಕಲಕೇರಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಚಂದ್ರು ಬಾಳಿಹಳ್ಳಿಮಠ ಪ್ರಾಸ್ತಾವಿಕ ಮಾತನಾಡಿದರು. ವೀರೇಶ ಕೂಗು ಸ್ವಾಗತಿಸಿದರು.

ಗದುಗಿನ ಶ್ರೀ ಕುಮಾರೇಶ್ವರ ಕೃಪಾಪೋಷಿತ ಡಾ.ಪಂ.ಪುಟ್ಟ ರಾಜ ಗವಾಯಿಗಳವರ ಸಂಸ್ಕೃತ ಪಾಠಶಾಲೆ ವಿದ್ಯಾರ್ಥಿಗಳಿಂದ ವೇದಘೋಷ, ಕುಮಾರಿ ದಿಯಾ ಪೀರಸಾಬ ಕೌತಾಳ ಇವರಿಂದ ಪ್ರಾರ್ಥನೆ ಜರುಗಿತು. ಬಳೂಟಗಿ ಸಿದ್ಧೇಶ್ವರ ಶಾಸ್ತ್ರಿಗಳು ನಿರೂಪಿಸಿದರು.

ಸಮಾರಂಭದ ನಂತರ ಅನ್ನದಾಸೋಹ ಜರುಗಿತು.

# ಪ್ರಭು ಶ್ರೀರಾಮನ ಬಗ್ಗೆ ಮಾತನಾಡುವ ನೈತಿಕತೆ ಕಾಂಗ್ರೆಸ್ಸಿಗಿಲ್ಲ: ಖೂಬಾ ಎಚ್ಚರಿಕೆ

**ಬೀದರ್, ಜು.**–ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು ಬೀದರ ಜಿಲ್ಲೆಗೆ ಬಂದಿದ್ದರಿಂದ ಜಿಲ್ಲೆಯ ಜನರಿಗೆ ಏನು ಲಾಭವಾಗಿಲ್ಲಾ, ಇದೊಂದು ನಾಮಕೇವಾಸ್ತೆ ಭೇಟಿಯಾಗಿದೆ, ಜೊತೆಗೆ ತಮ್ಮ ಸರ್ಕಾರದ ವಿಫಲತೆಗಳು ಮುಚ್ಚಿಟ್ಟುಕೊಳ್ಳಲು ಅಯೋಧ್ಯೆಯ ವಿಷಯ ಎಳೆದು ತಂದು, ಬಿಜೆಪಿ ಬಗ್ಗೆ ಮಾತಾಡಿ, ಜನರಿಗೆ ದಾರಿ ತಪ್ಪಿಸುವ ಕೆಲಸವಷ್ಟೆ ಮಾಡಿದ್ದಾರೆ ಎಂದು ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ, ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ವಿರುದ್ಧ ಹರಿಹಾಯ್ದಿದ್ದಾರೆ.

ರಾಜ್ಯದಲ್ಲಿ ಅಭಿವೃದ್ಧಿ ಇಲ್ಲಾ, ಯಾರಿಗೂ ರಕ್ಷಣೆಯಿಲ್ಲಾ, ಕೇವಲ ದುರಾಡಳಿತ ಹೆಚ್ಚಾಗಿದೆ, ಇದನ್ನ ಸರಿಪಡಿಸಿಕೊಳ್ಳುವುದು ಬಿಟ್ಟು ಇವರು ಮಾತನಾಡಲು ನೈತಿಕತೆ ಕಳೆದುಕೊಂಡಿರುವ ಪ್ರಭು ಶ್ರೀರಾಮರ ಬಗ್ಗೆ ಮಾತನಾಡಿ ಜನರಿಗೆ ದಾರಿ ತಪ್ಪಿಸುತ್ತಿದ್ದಾರೆ ಎಂದಿದ್ದಾರೆ. ಉತ್ತರಪ್ರದೇಶದ ಯೋಗಿಜೀ ಸರ್ಕಾರ ಅಯೋಧ್ಯೆ ಶ್ರೀರಾಮ ವಿಷಯದಲ್ಲಿ ಎಸ್.ಐ.ಟಿ. ರಚಿಸಿದೆ, ತನಿಖೆ ನಡೆಯುತ್ತಿದೆ ಆದರೆ ಕಾಂಗ್ರೆಸ್ಸಿಗರಿಗೆ ಸತ್ಯ ತಿಳಿದುಕೊಳ್ಳುವ ಆಸೆಯಿಲ್ಲಾ, ಕೇವಲ ಹಿಂದೂ ಧರ್ಮ, ಹಿಂದುಗಳ ಭಾವನೆ, ಹಿಂದೂಗಳು ಪೂಜಿಸುವ ದೇವರಿಗೆ ಅವಮಾನಿಸುವುದು ಎಂದರೆ ಕಾಂಗ್ರೆಸ್ಸಿಗರಿಗೆ ಮೊದಲಿನಿಂದಲೂ ಪರಿಪಾಠವಾಗಿದೆ ಹಾಗಾಗಿ ಅವರ ಬ್ರದರ್ಸ್‌ಗಳಿಗೆ ಮೆಚ್ಚಿಸಲು ಡಿ.ಕೆ.ಶಿವಕುಮಾರ ಇಂತಹ ಹೇಳಿಕೆ ನೀಡಿದ್ದಾರೆ ಎಂದು ಖೂಬಾ ಆಕ್ರೋಷ ಹೊರಹಾಕಿದ್ದಾರೆ.

ಪ್ರಭು ಶ್ರೀರಾಮರಿಗಾಗಿ ಅಯೋಧ್ಯೆಯಲ್ಲಿ ಮಂದಿರ ಕಟ್ಟಲು ಭಾರತೀಯ ಜನತಾ ಪಕ್ಷ ಮತ್ತು ಅನೇಕ ಹಿಂದುಪರ ಸಂಘಟನೆಗಳು ಹಾಗು ಲಕ್ಷಾಂತರ ಕರಸೇವಕರು ತಮ್ಮ ಪ್ರಾಣವನ್ನೆ ಬಲಿಕೊಟ್ಟಿದ್ದಾರೆ, ಇವರೆಲ್ಲರ ಮೇಲೆ ದಾಳಿ ಮಾಡಿಸಿದ್ದು, ಹಲ್ಲೆ ಮಾಡಿಸಿದ್ದು, ವರ್ಷಾನುಗಟ್ಟಲೆ ಜೈಲಿಲ್ಲಿ ಇಟ್ಟಿದ್ದು ಯಾರು ಎಂಬುದು ಡಿ.ಕೆ.ಶಿವಕುಮಾರ ಮತ್ತು ಕಾಂಗ್ರೇಸ್ ಪಕ್ಷ ಆತ್ಮಾವಲೋಕನ ಮಾಡಿಕೊಳ್ಳಬೇಕು, ಹಿಂದೊಮ್ಮೆ ಕಾಂಗ್ರೇಸ್ ಪಕ್ಷದ ನಾಯಕಿ ಸೋನಿಯಾ ಗಾಂಧಿ ರಾಮಸೇತುವೆ ಒಂದು ಕಾಲ್ಪನಿಕ ಕಥೆ ಎಂದು ಹೇಳಿದ್ದರು, ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣಕ್ಕೆ ವಿರೋಧಿಸಿ ನ್ಯಾಯಾಲಯದಲ್ಲಿ ಕಾಂಗ್ರೇಸ್ಸಿಗರೇ ವಾದ ಮಾಡಿರುವುದು ಜನರು ಮರೆತಿಲ್ಲಾ ಮತ್ತು ರಾಮ ಮಂದಿರ ಲೋಕಾರ್ಪಣೆಗೂ ಕಾಂಗ್ರೇಸ್ ಪಕ್ಷದ ನಾಯಕರು ಹೊಗಿಲ್ಲಾ, ಇಂತವರು ಇಂದು ಶ್ರೀರಾಮನ ಬಗ್ಗೆ ಮಾತನಾಡಲು ಯಾವ ನೈತಿಕತೆ ಹೊಂದಿದ್ದಾರೆ ಎಂದು ಖೂಬಾ ಪ್ರಶ್ನಿಸಿದ್ದಾರೆ. ಮೋದಿಜೀಯವರ ಆಡಳಿತಕ್ಕೆ ಜನಮೆಚ್ಚಿ ದೇಶಾದಾದ್ಯಂತ ಬಿಜೆಪಿ ಪಕ್ಷಕ್ಕೆ ಬೆಂಬಲ ಸಿಗುತ್ತಿರುವುದು ನೋಡಿ, ಕಾಂಗ್ರೇಸ್ಸಿಗರು ಇಂದು ಶ್ರೀರಾಮನ ಹೆಸರಲ್ಲಿ ರಾಜಕಾರಣ ಮಾಡುತ್ತಿರುವುದು ಅವರ ಕ್ಷೀಣಿಸಿದ ಮನಸ್ಥಿತಿ ತೊರಿಸುತ್ತದೆ ಎಂದಿದ್ದಾರೆ.



ಜಿಲ್ಲೆಯಲ್ಲಿ ಮಠಗಳ ಆಸ್ತಿ ಹೊಡೆದವರು, ಎಲ್ಲಾ ಅಧಿಕಾರ ತನ್ನ ಮನೆಯಲ್ಲಿಟ್ಟುಕೊಂಡು ಜಿಲ್ಲೆಯ ಜನರಿಗೆ ನ್ಯಾಯ ನೀಡದೆ, ಜಿಲ್ಲೆಯಲ್ಲಿ ಜಾತಿಜಾತಿಗಳ ಮಧ್ಯೆ, ಧರ್ಮಗಳ ಮಧ್ಯೆ ವಿಷಬೀಜ ಬಿತ್ತುತ್ತಾ, ಜಗಳ ಹಚ್ಚುತ್ತಾ ಕಾಲಹರಣ ಮಾಡುತ್ತಾ ದುರಾಡಳಿತ ನಡೆಸುತ್ತಿರುವ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರು ಶ್ರೀರಾಮರನ್ನು ಉಲ್ಲೇಖಿಸಿ ಬಿಜೆಪಿಯನ್ನು ಟಿಕಿಸುವ ಯಾವುದೇ ಯೋಗ್ಯತೆ ಅವರಿಗಿಲ್ಲಾ ಎಂದು ಖೂಬಾ ಜರಿದಿದ್ದಾರೆ, ಆಡಳಿತ ಹೇಗೆ ನಡೆಸಬೇಕು, ಪ್ರಜೆಗಳನ್ನು ಯಾವ ರಿತಿ ನಡೆಸಿಕೊಳ್ಳಬೇಕೆಂದು ತಿಳಿಯಲು ಖಂಡ್ರೆ ಒಂದು ಸಲ ರಾಮಾಯಣ ಓದಬೇಕೆಂದು ಸಲಹೆ ನೀಡಿದ್ದಾರೆ. ಸಿದ್ದರಾಮಯ್ಯ ಸರ್ಕಾರದಲ್ಲೂ ಮಂತ್ರಿಯಾಗಿ ಜಿಲ್ಲೆಯ ಜನರಿಗೆ ಕೇವಲ ದೂರಾಡಳಿತ ನೀಡಿದ್ದಾರೆ, ಡಿ.ಕೆ.ಶಿವಕುಮಾರ ಅವಧಿಯಲ್ಲಾದರೂ ಜನರು ನೆಮ್ಮದಿಯಿಂದ ಇರುವ ಹಾಗೆ ಆಡಳಿತ ನೀಡಲಿ ಎಂದು ಕಿವಿಮಾತು ಹೇಳಿದ್ದಾರೆ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಬೀದರ ಬಂದು, ಜಿಲ್ಲೆಗೆ ಯಾವ ಕೊಡುಗೆಯೂ ನೀಡಿಲ್ಲಾ, ಬರಗಾಲ ಘೋಷಣೆ ಮಾಡಿಲ್ಲಾ, ಬಿ.ಎಸ್.ಎಸ್.ಕೆ ಪ್ರಾರಂಭಿಸುವ ಬಗ್ಗೆ ಏನು ಹೇಳಿಲ್ಲಾ, ಇವರ ಭೇಟಿಯಿಂದ ಬೀದರ ಜನರಿಗೆ ನಿರಾಸೆಯಾಗಿದೆ ಎಂದು ಖೂಬಾ ಕಿಡಿಕಾರಿದ್ದಾರೆ.



ಮಂಗಳವಾರ ಕಲಬುರಗಿಗೆ ಆಗಮಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಾರ್ವಜನಿಕರು ಮತ್ತು ರೈತರ ಅಹವಾಲುಗಳನ್ನು ಸ್ವೀಕರಿಸಿದರು.

# ಆಡಳಿತ ನಿರ್ವಹಣೆಯಲ್ಲಿ ಕೃತಕ ಬುದ್ಧಿಮತ್ತೆ ಅನಿವಾರ್ಯ: ಡಾ. ಎಸ್.ಎಂ. ಶಶಿಧರ್ ಅಭಿಮತ



**ಬಳ್ಳಾರಿ ಜು 07.** "ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಮ್ಯಾನೇಜ್‌ಮೆಂಟ್ ಪದವೀಧರರು ಕೃತಕ ಬುದ್ಧಿಮತ್ತೆಯನ್ನು (ಂಖ) ಕೇವಲ ಒಂದು ತಾಂತ್ರಿಕ ವಿಷಯವಾಗಿ ನೋಡದೆ, ಉದ್ಯಮದ ಉಳಿವು ಮತ್ತು ಕಾರ್ಯತಂತ್ರದ ಪ್ರಮುಖ ಅಂಗವಾಗಿ ಅಳವಡಿಸಿಕೊಳ್ಳಬೇಕು" ಎಂದು ತಾಂತ್ರಿಕ ತಜ್ಞರು ಹಾಗೂ ಲೇಖಕರು ಆದ ಡಾ. ಎಸ್.ಎಂ. ಶಶಿಧರ್ ಅವರು ತಿಳಿಸಿದರು.

ನಗರದ ರಾವ್‌ಬಹದ್ದೂರ್ ವೈ. ಮಹಾಬಲೇಶ್ವರಪ್ಪ ಎಂಜಿನಿಯರಿಂಗ್ ಕಾಲೇಜಿನ (ಖಜಒಇಅ) ಎಂ.ಬಿ.ಎ. ವಿಭಾಗದಲ್ಲಿ ಹಮ್ಮಿಕೊಳ್ಳಲಾಗಿದ್ದ "ಆಡಳಿತ ನಿರ್ವಹಣೆಯಲ್ಲಿ ಕೃತಕ ಬುದ್ಧಿಮತ್ತೆ: ಭವಿಷ್ಯವನ್ನು ರೂಪಿಸುವ ತಂತ್ರಜ್ಞಾನ ಗಳು" ಎಂಬ ವಿಶೇಷ ಉಪನ್ಯಾಸ ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು.

ನೋಕಿಯಾ ಮತ್ತು ಕೊಡಾಕ್ ನಂತಹ ಜಾಗತಿಕ ಕಂಪನಿಗಳ ಉದಾಹರಣೆಗಳನ್ನು ನೀಡಿದ ಅವರು, "ಬದಲಾಗುವ ತಂತ್ರಜ್ಞಾನಕ್ಕೆ ತಕ್ಕಂತೆ ತಮ್ಮ ಆಲೋಚನಾ ಶೈಲಿಯನ್ನು ಬದಲಾಯಿಸಿಕೊಳ್ಳದ ಉದ್ಯಮಗಳು ವ'ುಾರ'ುಕ'ಟ್'ುಯಿುಂದ' ನಿರ್ನಾಮವಾಗುತ್ತವೆ. ಎಐ ತಂತ್ರಜ್ಞಾನವು ನಿಮ್ಮ ಆಲೋಚನಾ ಸಾಮರ್ಥ್ಯವನ್ನು ವಿಸ್ತರಿಸಬೇಕೇ ಹೊರತು, ನಿಮ್ಮ ಸ್ವತಂತ್ರ ಯೋಚನಾ ಶಕ್ತಿಯನ್ನು ಕಸಿದುಕೊಳ್ಳಬಾರದು." ಎಂದು ಎಚ್ಚರಿಸಿದರು. ಕಾರ್ಯಕ್ರಮದ ಆರಂಭದಲ್ಲಿ ಎಂ.ಬಿ.ಎ ವಿಭಾಗದ ಮುಖ್ಯಸ್ಥ' ಡಾ. ತಿಮ್ಮನಗೌಡ ಅವರು ಕಾಲೇಜಿನ ಪರವಾಗಿ ಎಲ್ಲರನ್ನೂ ಆತ್ಮೀಯವಾಗಿ ಸ್ವಾಗತಿಸಿ, ಕಾರ್ಯಕ್ರಮದ ಮುಖ್ಯ ಅತಿಥಿಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸಿದರು. ಕಾರ್ಯಕ್ರಮದಲ್ಲಿ ಬೋಧಕ ಸಿಬ್ಬಂದಿ ಉಪಸ್ಥಿತರಿದ್ದರು. ವಿಭಾಗದ 100ಕ್ಕೂ ಹೆಚ್ಚು ಎಂ.ಬಿ.ಎ ವಿದ್ಯಾರ್ಥಿಗಳು ಈ ವಿಶೇಷ ಉಪನ್ಯಾಸದಲ್ಲಿ ಸಕ್ರಿಯವಾಗಿ ಭಾಗವಹಿಸಿದರು.

# ಜು.10ರಂದು ತರಬೇತಿ, ಇ–ಹರಾಜು

**ವಿಜಯಪುರ,ಜು.7–** ಅಬಕಾರಿ ಇಲಾಖೆಯಲ್ಲಿ ಸ್ಥಗಿತಗೊಂಡಿರುವ ಹಾಗೂ ಮಂಜೂರಾಗದೇ ಬಾಕಿ ಇರುವ ನೋಂದಾಯಿತ ಬಿಡ್ಡದಾರರಿಗೆ ಜು. 10ರಂದು ಬಾಗಲಕೋಟೆಯ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ತರಬೇತಿ ಹಾಗೂ ಇ–ಹರಾಜು ಆಯೋಜಿಸಲಾಗಿದೆ.

ಪೋರ್ಟಲ್:https://www.mstcecommerce.com. De ವಿಳಾಸದಲ್ಲಿ ಇ–ಹರಾಜಿಗೆ ನೋಂದಣಿ ಕಾರ್ಯ ಜು.3ರಿಂದ ಆರಂಭ 'ಗೊಂಡಿದೆ. ಈ ಸಂಬಂಧ ಅಧಿಸೂಚನ 'ಯಲ್ಲಿ ಸೂಚಿಸಿದ ಎಲ್ಲಾ ರೀತಿಯ ಶುಲ್ಕುಗಳು ಹಾಗೂ ಷರತ್ತುಗಳಿಗೆ ಒಳಪಟ್ಟು ಇಚ್ಛೆವುಳ್ಳ ವ್ಯಕ್ತಿ /ಸಂಸ್ಥೆ / ಕಂಪನಿ ಇತ್ಯಾದಿಯವರು ಭಾಗ ವಹಿಸಬಹುದಾಗಿದೆ ಎಂದು ಅಬಕಾರಿ ಉಪ ಆಯುಕ್ತರು ತಿಳಿಸಿದ್ದಾರೆ.

ಜಿಲ್ಲೆಗೆ ಸಂಬಂಧಿಸಿದಂತೆ ಭಾರತ ಸರ್ಕಾರದ ಸ್ವಾಮ್ಯದ ಸಂಸ್ಥೆಯಾದ ಎಂಎಸ್‌ಟಿಸಿ ಲಿಮಿಟೆಡ್ ಇ–ಹೋಟೆಲ್‌ನಲ್ಲಿ ವಿಜೆಪಿ39/ಐಎನ್ ಡಿ228/ಸಿಎಲ್2ಎ/001, ಬಸವನ ಬಾಗೇವಾಡಿ, VJP39/IND228/CL2A/001, ಬಸವನಬಾಗೇವಾಡಿ, VJP39/BAS226/ಅಐ2ಂ/001–ಜಿಇಎನ್, ಮುದ್ದೇಬಿಹಾಳ VJP39/MUD229/CL2A/001, ಸಿಂದಗಿ VJP39/SIN230/CL2A/00, ಬಸವನಬಾಗೇವಾಡಿ VJP39/BAS226/CL2A/002, ಮುದ್ದೇಬಿಹಾಳ VJP39/MUD229/CL2A/002, ಸಿಂದಗಿ VJP39/SIN230/C2A002 ಈ ಸಿಎಲ್–2(ಎ) ಸನ್ನದುಗಳ GEN ಮೀಸಲಾತಿಗಳಾಗಿದ್ದು ಇವುಗಳ ಬೇಸಿಕ್ ಪ್ರೈಸ್ ಇಂಡಿ 90 ಲಕ್ಷ, ಇಎಂಡಿ– 180000, ಉಳಿದ ಕ್ರ. ಸಂ:2 ರಿಂದ 7 ವರೆಗಿನ ಪ್ರತಿಯೊಂದು ಸನ್ನದುಗಳಿಗೆ ಬೇಸ್ ಪ್ರೈಸ್ Eor 80 ಲಕ್ಷ, ಇಎಂಡಿ 160000 ನಿಗದಿಪಡಿಸಿರುತ್ತಾರೆ.

ಅದರಂತೆ ಸಿಎಲ್–9(ಎ) ಸನ್ನದುಗಳಾದ ವಿಜಯಪುರ VJP39/VIJ7/CL9A/001 2) VJP39/VIJ7/CL.9A/002 GEN ಬೇಸಿಕ್ ಪ್ರೈಸ್ 1.ಕೋಟಿ, EMD–200000 ನಿಗದಿ ಪಡಿಸಿರುತ್ತಾರೆ. ಇವುಗಳ ಹರಾಜು ಪ್ರಕ್ರಿಯೆ ವೇಳಾಪಟ್ಟಿಯನ್ವಯ ಹರಾಜು ಪ್ರಕ್ರಿಯೆ ಕೈಗೊಳ್ಳಲು ಸರ್ಕಾರ ಆದೇಶ ಹೊರಡಿಸಿದೆ ಎಂದು ಅಬಕಾರಿ ಇಲಾಖೆ ಪ್ರಕಟಣೆ ತಿಳಿಸಿದೆ.

# ಬಳ್ಳಾರಿಯ ಮಾಜಿ ಮೇಯರ್ ರಾಜೇಶ್ವರಿ ನೇತೃತ್ವದಲ್ಲಿ 2.90 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ



**ಬಳ್ಳಾರಿ,ಜು.07:** ಬಳ್ಳಾರಿ ನಗರದ 34ನೇ ವಾರ್ಡಿನ ತಿಲಕ್ ನಗರದ ಸಾಯಿಬಾಬಾ ದೇವಸ್ಥಾನ ಸಮೀಪ ರೂ.2.90 ಕೋಟಿ ವೆಚ್ಚದ ರಸ್ತೆ ಡಾಂಬರೀಕರಣ, ಒಳಚರಂಡಿ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಪಾದಚಾರಿ ಮಾರ್ಗ ನಿರ್ಮಾಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಲಾಯಿತು.

ಮಹಾನಗರ ಪಾಲಿಕೆ ಮಾಜಿ ಮೇಯರ್ ಹಾಗೂ ಹಾಲಿ ಸದಸ್ಯೆ ರಾಜೇಶ್ವರಿ ಅವರ ನೇತೃತ್ವದಲ್ಲಿ, ಶಾಸಕ ಬಿ.ನಾಗೇಂದ್ರ ಅವರ ಸಹೋದರ, ಕಾಂಗ್ರೆಸ್ ನಾಯಕ ಬಿ.ವೆಂಕಟೇಶ್ ಪ್ರಸಾದ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾಮಗಾರಿಗಳಿಗೆ ಚಾಲನೆ ನೀಡಿದರು. ಈ ಕಾಮಗಾರಿಗಳಿಂದ ತಿಲಕ್ ನಗರದ ನಿವಾಸಿಗಳಿಗೆ ಉತ್ತಮ ಗುಣಮಟ್ಟದ ರಸ್ತೆ, ಸುಸಜ್ಜಿತ ಒಳಚರಂಡಿ ವ್ಯವಸ್ಥೆ, ಸಮರ್ಪಕ ಕುಡಿಯುವ ನೀರಿನ ಸೌಲಭ್ಯ ಹಾಗೂ ಸುರಕ್ಷಿತ ಪಾದಚಾರಿ ಮಾರ್ಗ ನಿರ್ಮಾಣವಾಗಲಿದ್ದು, ವಾರ್ಡಿನ ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಲಾಯರ್ ಜನಾರ್ದನ, ಮಂಜುನಾಥ್, ಜಂಬಣ್ಣ, ರವಿಕುಮಾರ್, ಶಮೀಮ್, ಶಾಸ್ತ್ರಿ, ಶ್ರೀನಾಥ್ ರೆಡ್ಡಿ, ಬಿ.ಎ. ಮಲ್ಲೇಶ್ವರಿ, ಯೋಗಾನಂದ ರೆಡ್ಡಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಬಳ್ಳಾರಿಯ ಆರ್ಯವೈಶ್ಯ ಸಂಘಕ್ಕೆ ನೂತನ ಪದಾಧಿಕಾರಿಗಳ ಸೇರ್ಪಡೆ




**ಬಳ್ಳಾರಿ ಜು 07.** ಆರ್ಯ ವೈಶ್ಯ ಸಂಘದ ಆಡಳಿತ ಮಂಡಳಿಯ ಸಭೆಯು ದಿನಾಂಕ 04–07–2026 ರಂದು ಸಂಘದ ಕಟ್ಟಡದ ಮೇಲಂತಸ್ತಿನಲ್ಲಿ ನಡೆಯಿತು.

ಈ ಸಭೆಯಲ್ಲಿ ನೂತನ ಸದಸ್ಯರನ್ನು ಆಡಳಿತ ಮಂಡಳಿಯು ಸರ್ವಾನುಮತದಿಂದ ಸಹಆಯ್ಕೆ ಮಾಡಿ ಪದಾಧಿಕಾರಿಗಳಾಗಿ ನೇಮಕ ಮಾಡಲಾಯಿತು.

ಎಸ್. ಮಾರುತಿ ಪ್ರಸಾದ್ – ಉಪಾಧ್ಯಕ್ಷರು, ಎಚ್. ರಾಜೇಶ್ ಕುಮಾರ್ – ಜಂಟಿ ಕಾರ್ಯದರ್ಶಿ,

ಜಿ.ಕೆ. ಶಿವ ಪ್ರಸಾದ್– ಜಂಟಿ ಕಾರ್ಯದರ್ಶಿ ರವರನ್ನು ನೂತನವಾಗಿ ಸೇರ್ಪಡೆಗೊಂಡ ಪದಾಧಿಕಾರಿಗಳನ್ನು ಆಡಳಿತ ಮಂಡಳಿಯ ಎಲ್ಲಾ ಸದಸ್ಯರು ಆತ್ಮೀಯವಾಗಿ ಸ್ವಾಗತಿಸಿ, ಅವರ ಅನುಭವ, ಸೇವಾ ಮನೋಭಾವ ಹಾಗೂ ನಾಯಕತ್ವದಿಂದ ಸಂಘವು ಇನ್ನಷ್ಟು ಅಭಿವೃದ್ಧಿ ಹೊಂದಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

ಮುಂದಿನ ದಿನಗಳಲ್ಲಿ ಸಂಘದ ಅಭಿವೃದ್ಧಿ ಹಾಗೂ ಸಮಾಜದ ಕಲ್ಯಾಣಕ್ಕಾಗಿ ಹಲವಾರು ಹೊಸ ಯೋಜನೆಗಳು ಮತ್ತು ಜನೋಪಯೋಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವಲ್ಲಿ ಅವರ ಅಮೂಲ್ಯ ಸಹಕಾರ ದೊರೆಯಲಿದೆ ಎಂಬ ನಿರೀಕ್ಷೆಯನ್ನು ಸದಸ್ಯರು ವ್ಯಕ್ತಪಡಿಸಿದರು.

ನೂತನ ಪದಾಧಿಕಾರಿಗಳಿಗೆ ಯಶಸ್ವಿ ಹಾಗೂ ಫಲಪ್ರದ ಅವಧಿಯನ್ನು ಆರ್ಯ ವೈಶ್ಯ ಸಂಘ ಹಾರೈಸಿದೆ ಎಂದು ಖಜಾಂಚಿಗಳಾದ ರಾಮಕೃಷ್ಣ ರೇಣಿಗುಂಟ್ಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್‌ಐಆರ್: ವದಂತಿ ಹರಡಿದರೆ ಕಾನೂನು ಕ್ರಮ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ಎಚ್ಚರಿಕೆ

**ವಿಜಯಪುರ, ಜು.7:** ಎಸ್ ಐಆರ್ ಗೆ ಸಂಬಂಧಿಸಿದಂತೆ ಇತ್ತೀಚಿಗೆ ಕೆಲವು ಸಾಮಾಜಿಕ ಜಾಲತಾಣಗಳಲ್ಲಿ ಬೇರೆ ಮತಕ್ಷೇತ್ರದಲ್ಲಿ ಮನೆ ಕಟ್ಟಿಕೊಂಡು ವಾಸವಿದ್ದರೂ ಎಸ್ ಐಆರ್ ಫಾರ್ಮನಲ್ಲಿ ಈ ಹಿಂದೆ ವಾಸವಿದ್ದ ತಮ್ಮ ಮೂಲ ಹಳೆಯ ಓಣಿಯ ವಿಳಾಸ ತುಂಬುವಂತೆ ತಿಳಿಸಿ ಪೋಸ್ಟ್ ಮಾಡಲಾಗುತ್ತಿದೆ. ಇದು ಕಾನೂನಿಗೆ ವಿರುದ್ಧವಾಗಿದ್ದು, ಅಂತಹ ವ್ಯಕ್ತಿಗಳನ್ನು ಕಠಿಣ ಶಿಕ್ಷೆಗೊಳಪಡಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ



ತಿಳಿಸಿದ್ದಾರೆ. ನಗರ ಮತಕ್ಷೇತ್ರದಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡುತ್ತಿದ್ದು, ಅವರು ದ್ವಿಪ್ರತಿಗಳಲ್ಲಿ ನೀಡುವ ಗಣತಿ ನಮೂನೆಗಳನ್ನು ಪ್ರತಿಯೊಬ್ಬ ಮತದಾರರು ಪಡೆದು, ಅವುಗಳನ್ನು ತಮ್ಮ ಸಹಿಯೊಂದಿಗೆ ಭರ್ತಿ ಮಾಡಿ, ಒಂದು ಪ್ರತಿಯನ್ನು ಬಿಎಲ್ ಒ ಅವರಿಗೆ ಕಡ್ಡಾಯವಾಗಿ ಹಿಂದಿರುಗಿಸಿ, ಇನ್ನೊಂದು ಪ್ರತಿಯನ್ನು ಅವರಿಂದ ಸ್ವೀಕೃತಿ ಪಡೆದು ಮತದಾರರು ತಮ್ಮ ಬಳಿ ಇಟ್ಟುಕೊಳ್ಳಬೇಕು ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

# ಜಾನಪದ ಧ್ವನಿ ಮೌನವಾದರೂ, ಕಲೆ ಚಿರಂತನ: ಜಾನಪದ ಕಲೆ ಒಂದು ಪ್ರದೇಶದ ಸಂಸ್ಕೃತಿ, ಪರಂಪರೆ ಪ್ರತಿಬಿಂಬ

ಭಾರತೀಯ ಜಾನಪದ ಕಲೆಯ ಲೋಕದಲ್ಲಿ ಕೆಲವೇ ಕೆಲವು ಹೆಸರುಗಳು ಕಾಲಾತೀತವಾಗುತ್ತವೆ. ಅಂತಹ ಅಪರೂಪದ ಕಲಾವಿದೆಯರಲ್ಲಿ ಛತ್ತೀಸ್‌ಗಢದ ಪಾಂಡವಾನಿ ಗಾಯಕಿ ತೀಜನಬಾಯಿ ಪ್ರಮುಖರು. ಅವರ ನಿಧನವು ಕೇವಲ ಒಬ್ಬ ಕಲಾವಿದೆಯ ಅಗಲಿಕೆಯಲ್ಲ; ಭಾರತೀಯ ಜಾನಪದ ಪರಂಪರೆಯ ಒಂದು ಸುವರ್ಣ ಅಧ್ಯಾಯಕ್ಕೆ ತೆರೆ ಬಿದ್ದಂತಾಗಿದೆ.

ಮಹಾಭಾರತದ ಕಥೆಗಳನ್ನು ಗಾಯನ, ಅಭಿನಯ ಮತ್ತು ಭಾವಾಭಿವ್ಯಕ್ತಿಯ ಮೂಲಕ ಜನಮನಗಳಿಗೆ ತಲುಪಿಸುವ ಪಾಂಡವಾನಿ ಕಲೆಗೆ ತೀಜನಬಾಯಿ ಹೊಸ ಜೀವ ತುಂಬಿದರು. ಗ್ರಾಮೀಣ ನೆಲೆಯಿಂದ ಹೊರಹೊಮ್ಮಿದ ಈ ಪ್ರತಿಭೆ, ದೇಶದ ಗಡಿಗಳನ್ನು ದಾಟಿ ವಿಶ್ವದಾದ್ಯಂತ ಭಾರತೀಯ ಜಾನಪದ ಕಲೆಯ ವೈಭವವನ್ನು ಪರಿಚಯಿಸಿತು. ತಮ್ಮ ವಿಶಿಷ್ಟ ನಿರೂಪಣೆ, ಪ್ರಬಲ ಧ್ವನಿ ಮತ್ತು ವೇದಿಕೆ ಮೇಲಿನ ಜೀವಂತ ಅಭಿನಯದಿಂದ ಅವರು ಲಕ್ಷಾಂತರ ಕಲಾಭಿಮಾನಿಗಳ ಮನ ಗೆದ್ದರು. ಜಾನಪದ ಸಂಸ್ಕೃತಿಯ ಅಮರ ಧ್ವನಿ ಮೌನವಾದರೂ, ತೀಜನಬಾಯಿ ಅವರ ಕಲೆ ಚಿರಂತನ.

**ತೀಜನಬಾಯಿ ಅವರ ಸಾಧನೆಯ ಗರಿ:**

ಭಾರತ ಸರ್ಕಾರ ಪದ್ಮಶ್ರೀ, ಪದ್ಮಭೂಷಣ ಮತ್ತು ಪದ್ಮವಿಭೂಷಣ ಸೇರಿದಂತೆ ದೇಶದ ಅತ್ಯುನ್ನತ ನಾಗರಿಕ ಗೌರವಗಳನ್ನು ನೀಡಿ ಸನ್ಮಾನಿಸಿತು. ಈ ಪ್ರಶಸ್ತಿಗಳು ಅವರ ವೈಯಕ್ತಿಕ ಸಾಧನೆಗೆ ಮಾತ್ರವಲ್ಲ, ಜಾನಪದ ಕಲೆಗೆ ದೊರೆತ ರಾಷ್ಟ್ರೀಯ ಮಾನ್ಯತೆಯ ಸಂಕೇತವೂ ಆಗಿವೆ. ಇಂದಿನ ತಂತ್ರಜ್ಞಾನ ಮತ್ತು ಮನರಂಜನೆಯ ಯುಗದಲ್ಲಿ ಅನೇಕ ಜಾನಪದ ಕಲೆಗಳು ಅಸ್ತಿತ್ವದ ಹೋರಾಟ ನಡೆಸುತ್ತಿವೆ. ಇಂತಹ ಸಂದರ್ಭದಲ್ಲಿ ತೀಜನಬಾಯಿ ಅವರ ಜೀವನ ನಮಗೆ ಒಂದು ಮಹತ್ವದ ಸಂದೇಶ ನೀಡುತ್ತದೆ?ಬೇರುಗಳಿಗೆ ನಿಷ್ಠೆಯಾಗಿದ್ದರೆ, ಸ್ಥಳೀಯ ಕಲೆಯೂ ಜಾಗತಿಕ ಮಟ್ಟದಲ್ಲಿ



ಗೌರವ ಪಡೆಯಬಹುದು. ಪ್ರತಿಭೆ, ಪರಿಶ್ರಮ ಮತ್ತು ಕಲೆಯ ಮೇಲಿನ ಬದ್ಧತೆ ಇದ್ದರೆ ಯಾವುದೇ ಅಡೆತಡೆ ಯಶಸ್ಸಿಗೆ ಅಡ್ಡಿಯಾಗುವುದಿಲ್ಲ ಎಂಬುದನ್ನು ಅವರು ತಮ್ಮ ಬದುಕಿನ ಮೂಲಕ ಸಾಬೀತುಪಡಿಸಿದರು.

**ತೀಜನ ಬಾಯಿ ಅವರ ಧ್ವನಿ ಎಂದಿಗೂ ಜೀವಂತ :** ತೀಜನಬಾಯಿ ಅವರ ಅಗಲಿಕೆ ತುಂಬಲಾರದ ನಷ್ಟವಾದರೂ, ಕಲೆ, ಧ್ವನಿ ಮತ್ತು ಜೀವನ ಸಂದೇಶ ಶಾಶ್ವತವಾಗಿ ಜೀವಂತವಾಗಿರುತ್ತದೆ. ಅವರಂತಹ ಕಲಾವಿದರ ಪರಂಪರೆಯನ್ನು ಮುಂದಿನ ತಲೆಮಾರುಗಳಿಗೆ ತಲುಪಿಸುವ ಹೊಣೆಗಾರಿಕೆ ಸರ್ಕಾರ, ಸಾಂಸ್ಕೃತಿಕ ಸಂಸ್ಥೆಗಳು ಮತ್ತು ಸಮಾಜದ ಮೇಲಿದೆ. ಜಾನಪದ ಕಲೆಗಳನ್ನು ಸಂರಕ್ಷಿಸುವುದಷ್ಟೇ ಅಲ್ಲ, ಯುವ ಪೀಳಿಗೆಗೆ ಅವುಗಳ ಮಹತ್ವವನ್ನು ಪರಿಚಯಿಸುವ ಕಾರ್ಯಕ್ಕೂ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ. ತೀಜನಬಾಯಿ ಅವರ ಧ್ವನಿ ಮೌನವಾಗಿರಬಹುದು; ಆದರೆ ಅವರು ಹಾಡಿದ ಮಹಾಭಾರತದ ಕಥೆಗಳು ಮತ್ತು ಭಾರತೀಯ ಜಾನಪದ ಸಂಸ್ಕೃತಿಯ ಮೇಲಿನ ಅವರ ಪ್ರೀತಿ ಎಂದೆಂದಿಗೂ ಪ್ರತಿಧ್ವನಿಸುತ್ತಲೇ ಇರುತ್ತದೆ. ಇದೇ ಅವರಿಗೆ ಸಲ್ಲಿಸಬಹುದಾದ ಅತ್ಯುತ್ತಮ ನಮನ.

**ನಶಿಸುತ್ತಿರುವ ಜಾನಪದ ಕಲೆಗಳಿಗೆ ಹೊಸ ಜೀವ ತುಂಬಬೇಕಿದೆ:**

ಜಾನಪದ ಕಲೆಗಳು ಒಂದು ಪ್ರದೇಶದ ಸಂಸ್ಕೃತಿ, ಪರಂಪರೆ, ಜೀವನಮೌಲ್ಯ ಮತ್ತು ಜನಜೀವನದ ಪ್ರತಿಬಿಂಬವಾಗಿವೆ. ಆದರೆ ಆಧುನಿಕತೆಯ ವೇಗ, ಬದಲಾಗುತ್ತಿರುವ ಜೀವನಶೈಲಿ, ನಗರೀಕರಣ ಹಾಗೂ ಎಲೆಕ್ಟ್ರಾನಿಕ್ ಮಾಧ್ಯಮಗಳ ಪ್ರಭಾವದಿಂದ ಅನೇಕ ಜಾನಪದ ಕಲೆಗಳು ಇಂದು ಅಳಿವಿನ ಅಂಚಿಗೆ ತಲುಪಿವೆ. ಇದು ಕೇವಲ ಕಲೆಯ ನಷ್ಟವಲ್ಲ; ನಮ್ಮ ಸಾಂಸ್ಕೃತಿಕ ಪರಂಪರೆಯನ್ನೇ ಕಳೆದುಕೊಳ್ಳುವ ಅಪಾಯವೂ ಹೌದು. ಇಂದಿನ ವಾಸ್ತವವನ್ನು ಪ್ರತಿಬಿಂಬಿಸುತ್ತದೆ. ಕಂಸಾಳೆ, ಡೊಳ್ಳು ಕುಣಿತ, ಯಕ್ಷಗಾನ, ತೊಗಲು ಗೊಂಬೆಯಾಟ, ಗಾರುಡಿ ಗೊಂಬೆಯಾಟ ಸೇರಿದಂತೆ ಹಲವು ಜಾನಪದ ಕಲಾಪ್ರಕಾರಗಳು ಪ್ರೋತ್ಸಾಹದ ಕೊರತೆ ಮತ್ತು ಹೊಸ ತಲೆಮಾರಿನ ನಿರಾಸಕ್ತಿಯಿಂದ ಸಂಕಷ್ಟವನ್ನು ಎದುರಿಸುತ್ತಿವೆ.

ಜನಪದ ಸಾಹಿತ್ಯವೇ ಕನ್ನಡದ ಸಾಹಿತ್ಯ ಪರಂಪರೆಯ ಮೂಲವಾಗಿದೆ. ಕಥೆ, ಕವಿತೆ, ವಚನ, ಗಾದೆ, ಒಗಟು, ಹಾಡು, ದೊಡ್ಡಾಟ, ಸಣ್ಣಾಟ ಸೇರಿದಂತೆ ಅನೇಕ ಸಾಹಿತ್ಯ ಪ್ರಕಾರಗಳು ಜನಪದದ ನೆಲೆಯಿಂದಲೇ ಬೆಳೆದಿವೆ. ಶಿಕ್ಷಣದ ಅವಕಾಶಗಳು ಕಡಿಮೆಯಿದ್ದ ಕಾಲದಲ್ಲಿಯೂ ಜನಪದ ಕಲಾವಿದರು ತಮ್ಮ ಕಲೆಗಳ ಮೂಲಕ ಸಮಾಜಕ್ಕೆ ಸಂಸ್ಕೃತಿ, ನೈತಿಕತೆ ಮತ್ತು ಬದುಕಿನ ಮೌಲ್ಯಗಳನ್ನು ತಲುಪಿಸುತ್ತಿದ್ದರು. ಆದ್ದರಿಂದ ಜಾನಪದವು ಕೇವಲ ಮನರಂಜನೆಯ ಮಾಧ್ಯಮವಲ್ಲ; ಅದು ಪಾರಂಪರಿಕ ಜ್ಞಾನದ ಜೀವಂತ ಭಂಡಾರವಾಗಿದೆ.

**ಕಲಾವಿದರಿಗೆ ಪ್ರೋತ್ಸಾಹ ಅಗತ್ಯ:**

ಇಂದಿಗೂ ಅನೇಕ ಜಾನಪದ ಹಾಗೂ ರಂಗಭೂಮಿ ಕಲಾವಿದರು ಎಲೆಮರೆಯ ಕಾಯಿಯಂತೆ ಯಾವುದೇ ನಿರೀಕ್ಷೆಯಿಲ್ಲದೆ ಕಲೆಯ ಉಳಿವಿಗಾಗಿ ಶ್ರಮಿಸುತ್ತಿದ್ದಾರೆ. ಆದರೆ ಅವರ ಪರಿಶ್ರಮಕ್ಕೆ ತಕ್ಕ ಗೌರವ, ಆರ್ಥಿಕ ಭದ್ರತೆ ಮತ್ತು ಸರ್ಕಾರಿ ಸವಲತ್ತುಗಳು ಸಮರ್ಪಕವಾಗಿ ದೊರೆಯುತ್ತಿಲ್ಲ. ಇಂತಹ ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸುವುದು ಸರ್ಕಾರ ಮತ್ತು ಸಮಾಜದ ಜವಾಬ್ದಾರಿಯಾಗಿದೆ.

ಜಾನಪದ ಕಲೆಗಳ ಉಳಿವಿಗಾಗಿ ತರಬೇತಿ ಶಿಬಿರಗಳು, ಶಾಲಾ–ಕಾಲೇಜುಗಳಲ್ಲಿ ಜನಪದ ಶಿಕ್ಷಣ, ಯುವಜನರ ಭಾಗವಹಿಸುವಿಕೆ ಹಾಗೂ ಸಂಘ–ಸಂಸ್ಥೆಗಳ ನಿರಂತರ ಸಹಕಾರ ಅತ್ಯಗತ್ಯ. ಇಂತಹ ಕಾರ್ಯಕ್ರಮಗಳು ಕೇವಲ ಆಚರಣೆಗೆ ಸೀಮಿತವಾಗದೆ, ಜಾನಪದ ಕಲೆಗೆ ಹೊಸ ತಲೆಮಾರನ್ನು ರೂಪಿಸುವ ಚಳವಳಿಯಾಗಬೇಕು.

ಭಾರತದ ಸಾಂಸ್ಕೃತಿಕ ಗುರುತಿನ ಅವಿಭಾಜ್ಯ ಅಂಗವಾದ ಜಾನಪದ ಕಲೆಗಳನ್ನು ಉಳಿಸುವುದು ನಮ್ಮೆಲ್ಲರ ಜವಾಬ್ದಾರಿ. ಇವುಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ತಲುಪಿಸಿದಾಗ ಮಾತ್ರ ನಮ್ಮ ಸಂಸ್ಕೃತಿ, ಪರಂಪರೆ ಮತ್ತು ಭಾಷೆಯ ಬೇರುಗಳು ಮತ್ತಷ್ಟು ಗಟ್ಟಿಯಾಗಲಿವೆ.

# ಬಿಎಲ್‌ಓಗಳಿಗೆ ಸಹಕಾರ ನೀಡಿ: ಗಣತಿ ನಮೂನೆ ವಿತರಣೆಯಲ್ಲಿ ಸಾರ್ವಜನಿಕರ ಸಹಭಾಗಿತ್ವ ಅಗತ್ಯ: ಜಿಲ್ಲಾಧಿಕಾರಿ ಡಾ. ಆನಂದ ಕೆ.

**ವಿಜಯಪುರ, ಜು.7:** ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)–2026ರ ಅಂಗವಾಗಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಓಗಳು) ಮನೆ–ಮನೆಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸುವ ಕಾರ್ಯದಲ್ಲಿ ನಿರತರಾಗಿದ್ದು, ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಅವರಿಗೆ ಸೂಕ್ತ ಸಹಕಾರ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಸೂಚನೆ ನೀಡಿದ್ದಾರೆ.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಎಸ್‌ಐಆರ್ ಕುರಿತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮುಖ್ಯ ಚುನಾವಣಾ ಆಯೋಗದ ನಿರ್ದೇಶನದಂತೆ ಬಿಎಲ್‌ಓಗಳು ಮನೆ–ಮನೆಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸುವ ಕಾರ್ಯ ಕೈಗೊಂಡಿದ್ದಾರೆ. ಈ ಕಾರ್ಯವನ್ನು ಯಶಸ್ವಿಗೊಳಿಸಲು ಸಾರ್ವಜನಿಕರು ಸಹಕರಿಸಬೇಕಿದ್ದು, ಯಾವುದೇ ರೀತಿಯ ಗೊಂದಲಗಳಿಗೆ ಅವಕಾಶ ನೀಡಬಾರದು ಎಂದು ಹೇಳಿದರು. ಮತದಾರರ ಪಟ್ಟಿಯಲ್ಲಿರುವವರು ಮೃತಪಟ್ಟಿದ್ದರೆ, ಸ್ಥಳಾಂತರಗೊಂಡಿದ್ದರೆ ಅಥವಾ ಬೇರೆ ಕಾರಣಗಳಿಂದ ಮತದಾರರ ಪಟ್ಟಿಯಲ್ಲಿ ತಿದ್ದುಪಡಿ ಅಗತ್ಯವಿದ್ದರೆ, ಸಂಬಂಧಿಸಿದ ಬಿಎಲ್‌ಓಗಳಿಗೆ ಮಾಹಿತಿ ನೀಡಬೇಕು. ಮೃತಪಟ್ಟಿರುವ ಮತದಾರರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು ಮರಣ ಪ್ರಮಾಣಪತ್ರ ಅಥವಾ ಅದು ಲಭ್ಯವಿಲ್ಲದಿದ್ದಲ್ಲಿ ಕುಟುಂಬದ ಸದಸ್ಯರ ಲಿಖಿತ ಮಾಹಿತಿಯನ್ನು ಸಲ್ಲಿಸಬೇಕು ಎಂದು ಸೂಚಿಸಿದರು.

ಗಣತಿ ನಮೂನೆಗಳಲ್ಲಿ ಮಾಹಿತಿ ಅಪೂರ್ಣವಾಗಿದ್ದರೆ ಅಥವಾ ತಪ್ಪು ಮಾಹಿತಿ ದಾಖಲಾಗಿದ್ದರೆ, ಮುಂದಿನ ಹಂತದಲ್ಲಿ ಸಂಬಂಧಿತ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು (ಎಆರ್‌ಓಗಳು) ಪರಿಶೀಲಿಸಿ ಅಗತ್ಯ ತಿದ್ದುಪಡಿಗಳನ್ನು ಕೈಗೊಳ್ಳಲಿದ್ದಾರೆ ಎಂದು ಹೇಳಿದರು. ಗ್ರಾಮೀಣ ಪ್ರದೇಶಗಳಿಗೆ ಹೋಲಿಸಿದರೆ ನಗರ ಪ್ರದೇಶಗಳಲ್ಲಿ ಸ್ಥಳಾಂತರಗೊಂಡಿರುವ ಮತದಾರರ ಸಂಖ್ಯೆ ಹೆಚ್ಚಿರುವುದರಿಂದ ಗೊಂದಲಗಳು ಉಂಟಾಗುವ ಸಾಧ್ಯತೆ ಇದೆ. ಆದ್ದರಿಂದ ಬಿಎಲ್‌ಓಗಳ ಕಾರ್ಯಕ್ಕೆ ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡಬೇಕು ಎಂದು ಅವರು ತಿಳಿಸಿದರು. ಗಣತಿ ನಮೂನೆಗಳನ್ನು ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ ಭರ್ತಿ ಮಾಡಲು ಅವಕಾಶವಿದ್ದು, ಭಾಷೆಗೆ ಸಂಬಂಧಿಸಿದ ಯಾವುದೇ ಸಮಸ್ಯೆ ಇಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಒಂದಕ್ಕಿಂತ ಹೆಚ್ಚು ಹೆಸರು ಮತದಾರರ ಪಟ್ಟಿಯಲ್ಲಿ ಕಂಡುಬಂದರೆ, ಸಂಬಂಧಿಸಿದ ಮತದಾರರಿಗೆ ಮಾಹಿತಿ ನೀಡಿ ಒಂದು ಕಡೆ ಮಾತ್ರ ಹೆಸರು ಉಳಿಸಿ, ಉಳಿದ ಪಟ್ಟಿಗಳಿಂದ ಹೆಸರು ತೆಗೆದುಹಾಕಲು ಬಿಎಲ್‌ಓಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಪ್ರೊಬೇಷನರಿ ಐಎಎಸ್ ಅಧಿಕಾರಿ ಅಭಿಷೇಕ್ ಸೆಹರಾ ವಿಜಯಪುರ ತಹಶೀಲ್ದಾರ್ ಪ್ರಶಾಂತ ಚನ್ನಗೊಂಡ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ಇರಾನ್ ವಿರುದ್ಧದ ಯುದ್ಧದಲ್ಲಿ ಬೆಂಬಲ ನೀಡದ ನ್ಯಾಟೋ: ಡೊನಾಲ್ಡ್ ಟ್ರಂಪ್ ಕಿಡಿ



**ಅಂಕಾರಾ, ಜು.7:** ನ್ಯಾಟೋ ಶೃಂಗಸಭೆಗಾಗಿ ಅಂಕಾರಾ ತಲುಪಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಟ್ಲಾಂಟಿಕ್ ಒಕ್ಕೂಟದ ವಿರುದ್ಧ ತಮ್ಮ ಅಸಮಾಧಾನವನ್ನು ಹೊರಹಾಕಿದ್ದಾರೆ. ಇರಾನ್ ವಿರುದ್ಧ ಇಸ್ರೇಲ್ ಮತ್ತು ವಾಷಿಂಗ್ಟನ್ ಜಂಟಿಯಾಗಿ ನಡೆಸಿದ ಯುದ್ಧದಲ್ಲಿ ಅಮೆರಿಕದ ಅತ್ಯಂತ ಆಪ್ತ ಮಿತ್ರರಾಷ್ಟ್ರಗಳು ನೀಡಿದ ಪ್ರತಿಕ್ರಿಯೆ ತೀವ್ರ ನಿರಾಶೆ ತಂದಿದೆ ಎಂದು ಹೇಳಿದ್ದಾರೆ.

ವಾಷಿಂಗ್ಟನ್ ಮತ್ತು ಜೆರುಸಲೇಮ್ ಜಂಟಿಯಾಗಿ ಟೆಹ್ರಾನ್ ವಿರುದ್ಧ ಏಕಪಕ್ಷೀಯವಾಗಿ ಆರಂಭಿಸಿದ ಈ ಯುದ್ಧದಲ್ಲಿ ನ್ಯಾಟೋ ಸದಸ್ಯ ರಾಷ್ಟ್ರಗಳಿಂದ ಯಾವುದೇ ಸಹಕಾರ ಸಿಗಲಿಲ್ಲ. ಇದು ಟ್ರಂಪ್ ಅವರ ಕಟು ಟೀಕೆಗೆ ಕಾರಣವಾಗಿದ್ದು, ಅಮೆರಿಕದ ಬೆಂಬಲವಿಲ್ಲದಿದ್ದರೆ ನ್ಯಾಟೋ ಕೇವಲ "ಕಾಗದದ ಹುಲಿ" ಎಂದು ಕರೆದಿದ್ದಾರೆ.

ನ್ಯಾಟೋ ಶೃಂಗಸಭೆಯ ನೇಪಥ್ಯದಲ್ಲಿ ಟರ್ಕಿ ಅಧ್ಯಕ್ಷ ರಿಸೆಪ್ ತಯ್ಯಿಪ್ ಎರ್ಡೋಗನ್ ಅವರನ್ನು ಭೇಟಿ ಮಾಡಿದ ಸಂದರ್ಭದಲ್ಲಿ ಟ್ರಂಪ್ ಪತ್ರಕರ್ತರೊಂದಿಗೆ ಮಾತನಾಡಿ, "ನನಗೆ ನ್ಯಾಟೋ ಬಗ್ಗೆ ತುಂಬಾ ನಿರಾಶೆಯಾಗಿದೆ," ಎಂದು ಹೇಳಿದರು. ನಮಗೆ ಅವರ ಯಾವುದೇ ಸಹಾಯದ ಅಗತ್ಯವಿರಲಿಲ್ಲ. ಒಂದು ರೀತಿಯಲ್ಲಿ, ನಾನು ಜನರನ್ನು ಪರೀಕ್ಷಿಸುತ್ತಿದ್ದೆ. ಅವರು ನಮಗೆ ಬೆಂಬಲವಾಗಿ ನಿಲ್ಲುತ್ತಾರೋ ಇಲ್ಲವೋ ಎಂದು ನೋಡಲು ನಾನು ಈ ಪರೀಕ್ಷೆ ಮಾಡಿದೆ. ಏಕೆಂದರೆ ನಾವು ಅವರಿಗೆ ಸಹಾಯ ಮಾಡುತ್ತೇವೆ, ಆದರೆ ಅವರು ನಮಗಾಗಿ ನಿಲ್ಲುತ್ತಾರೋ ಇಲ್ಲವೋ ಎಂಬ ಸಂಶಯ ನನಗಿತ್ತು ಎಂದು ನಾನು ಮೊದಲಿನಿಂದಲೂ ಹೇಳುತ್ತಿದ್ದೇನೆ," ಎಂದು ಟ್ರಂಪ್ ತಿಳಿಸಿದರು.

ಪರ್ಷಿಯನ್ ಕೊಲ್ಲಿಯಿಂದ ಆಮದು ಮಾಡಿಕೊಳ್ಳುವ ಗ್ಯಾಸ್ ಮತ್ತು ತೈಲದ ಮೇಲೆ ವಾಷಿಂಗ್ಟನ್‌ಗಿಂತ ಹೆಚ್ಚಾಗಿ ಅವಲಂಬಿತವಾಗಿರುವ ಯುರೋಪಿಯನ್ ಆರ್ಥಿಕತೆಗಳ ಮೇಲೆ ಈ ಯುದ್ಧವು ತೀವ್ರ ಪರಿಣಾಮ ಬೀರಿದೆ. ಅದರಲ್ಲೂ ಹಾರ್ಮುಜ್ ಜಲಸಂಧಿಯ ಮೂಲಕ ಸಾಗುವ ಹಡಗು ಸಂಚಾರದ ಮೇಲಿನ ನಿರ್ಬಂಧಗಳು ಪರಿಸ್ಥಿತಿಯನ್ನು ಮತ್ತಷ್ಟು ಹದಗೆಡಿಸಿವೆ.

ಹಲವಾರು ನ್ಯಾಟೋ ಸದಸ್ಯ ರಾಷ್ಟ್ರಗಳು ಇರಾನ್ ವಿರುದ್ಧದ ಕಾರ್ಯಾಚರಣೆಗಾಗಿ ತಮ್ಮ ಭೂಪ್ರದೇಶ, ವಾಯುಪ್ರದೇಶ ಅಥವಾ ಮಿಲಿಟರಿ ಸೌಲಭ್ಯಗಳನ್ನು ಬಳಸಿಕೊಳ್ಳಲು ಅಮೆರಿಕಕ್ಕೆ ಸ್ಪಷ್ಟವಾಗಿ ಅನುಮತಿ ನಿರಾಕರಿಸಿದ್ದವು. ಇನ್ನು ಕೆಲವು ದೇಶಗಳು ಈ ಯುದ್ಧವನ್ನು ಯುಎಸ್ ಮತ್ತು ಇಸ್ರೇಲ್ ನ್ಯಾಟೋ ಒಕ್ಕೂಟದ ಚೌಕಟ್ಟಿನ ಹೊರಗೆ ಆರಂಭಿಸಿವೆ ಎಂದು ವಾದಿಸಿ, ಕಾರ್ಯಾಚರಣೆಯಿಂದ ಸಂಪೂರ್ಣವಾಗಿ ದೂರ ಉಳಿದಿದ್ದವು. ಬ್ರಿಟನ್ ಮಾತ್ರ ಕೊಲ್ಲಿಯಲ್ಲಿ ಬ್ರಿಟಿಷ್ ಹಿತಾಸಕ್ತಿಗಳು ಮತ್ತು ಮಿತ್ರರಾಷ್ಟ್ರಗಳನ್ನು ರಕ್ಷಿಸುವ ಉದ್ದೇಶದ "ಸೀಮಿತ ರಕ್ಷಣಾತ್ಮಕ ಕಾರ್ಯಾಚರಣೆಗಳಿಗಾಗಿ" ತನ್ನ ಕೆಲವು ಮಿಲಿಟರಿ ಸೌಲಭ್ಯಗಳನ್ನು ಬಳಸಲು ವಾಷಿಂಗ್ಟನ್‌ಗೆ ಅನುಮತಿ ನೀಡುವ ಮೂಲಕ ಸೀಮಿತ ಬೆಂಬಲವನ್ನು ನೀಡಿತ್ತು. ಆದರೆ ಲಂಡನ್ ಕೂಡ ಯಾವುದೇ ಆಕ್ರಮಣಕಾರಿ ಕಾರ್ಯಾಚರಣೆಗಳಲ್ಲಿ ಭಾಗವಹಿಸುವುದರಿಂದ ದೂರ ಉಳಿದಿತ್ತು.

# ಟರ್ಕಿ ಮೇಲಿನ ನಿರ್ಬಂಧ ತೆರವು: ಟ್ರಂಪ್ ಘೋಷಣೆ

**ಅಂಕಾರಾ, ಜು.7:** ನ್ಯಾಟೋ ಶೃಂಗಸಭೆಗಾಗಿ ಅಂಕಾರಾದಲ್ಲಿರುವ ಅಮೇರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು, ಟರ್ಕಿ ಅಧ್ಯಕ್ಷ ರಿಸೆಪ್ ತಯ್ಯಿಪ್ ಎರ್ಡೋಗನ್ ಅವರೊಂದಿಗೆ ಮಂಗಳವಾರ ಮಾತುಕತೆ ನಡೆಸಿದರು. ಈ ವೇಳೆ ಕೌಂಟರಿಂಗ್ ಅಮೆರಿಕಾಸ್ ಅಡ್ವರ್ಸರೀಸ್ ಥ್ರೂ ಸ್ಯಾಂಕ್ಷನ್ಸ್ ಆಕ್ಟ್ ಅಡಿ ಟರ್ಕಿಯ ಮೇಲೆ ಹೇರಲಾಗಿದ್ದ ನಿರ್ಬಂಧಗಳನ್ನು ತೆಗೆದುಹಾಕುವುದಾಗಿ ಘೋಷಿಸಿದರು. ಇದು ವಾಷಿಂಗ್ಟನ್ ಮತ್ತು ಅಂಕಾರಾ ನಡುವಿನ ಸಂಬಂಧಗಳಲ್ಲಿ ಸಂಭವಿಸಬಹುದಾದ ಪ್ರಮುಖ ಬದಲಾವಣೆಯ ಸಂಕೇತವಾಗಿದೆ.

ಸಭೆ ನಂತರ ಸುದ್ದಿಗಾರರ ಜತೆ ಮಾತನಾಡಿದ ಟ್ರಂಪ್, ನಾವು ನಿರ್ಬಂಧಗಳನ್ನು ತೆಗೆದುಹಾಕಲಿದ್ದೇವೆ... ಸ್ನೇಹಿತರ ಮೇಲೆ ನಿರ್ಬಂಧ ಹೇರಲು ಬಯಸುವುದಿಲ್ಲ," ಎಂದು ಹೇಳಿದರು.

ಮುಂದುವರಿದು ಮಾತನಾಡಿದ ಟ್ರಂಪ್, "ಎರ್ಡೋಗನ್ ಅವರೊಂದಿಗೆ ನಾವು ಹೊಂದಿರುವ ಸಂಬಂಧದಿಂದಾಗಿ ಅವರೊಂದಿಗಿನ ಒಡನಾಟ ಉತ್ತಮವಾಗಿದೆ. ಅಧ್ಯಕ್ಷರ ಬಗ್ಗೆ ನನಗೆ ಅಪಾರ ಗೌರವವಿದೆ. ನಾವು ವ್ಯಾಪಾರ, ಮಿಲಿಟರಿ ಮತ್ತು ಇರಾನ್ ಕುರಿತು ಚರ್ಚಿಸಲಿದ್ದೇವೆ. ಇರಾನ್ ಪರಮಾಣು ಅಸ್ತ್ರವನ್ನು ಹೊಂದಲು ಸಾಧ್ಯವಿಲ್ಲ. ನಾವು ಟರ್ಕಿಯೊಂದಿಗೆ ಹೆಚ್ಚಿನ ವ್ಯಾಪಾರವನ್ನು ಹೊಂದಿದ್ದೇವೆ, ಆದ್ದರಿಂದ ಚರ್ಚಿಸಲು ಅನೇಕ ಪ್ರಮುಖ ವಿಷಯಗಳಿವೆ," ಎಂದರು. ಈ ನಿರ್ಧಾರವನ್ನು ಅಂತಿಮಗೊಳಿಸಲು ತಾವು ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ಮತ್ತು ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಅವರೊಂದಿಗೆ ಸಮನ್ವಯ ಸಾಧಿಸುತ್ತಿರುವುದಾಗಿ ಯುಎಸ್ ಅಧ್ಯಕ್ಷರು ತಿಳಿಸಿದರು. ರಷ್ಯಾದ ಎಸ್–400 ಕ್ಷಿಪಣಿ ರಕ್ಷಣಾ ವ್ಯವಸ್ಥೆಯನ್ನು ಅಂಕಾರಾ ಖರೀದಿಸಿದ್ದಕ್ಕೆ ಸಂಬಂಧಿಸಿದ ನಿರ್ಬಂಧಗಳ ಹೊರತಾಗಿಯೂ, ಟರ್ಕಿಯನ್ನು ಎಫ್–35 ಫೈಟರ್ ಜೆಟ್ ಕಾರ್ಯಕ್ರಮಕ್ಕೆ ಮರುಸೇರ್ಪಡೆಗೊಳಿಸುವ ಬಗ್ಗೆ ಪರಿಶೀಲಿಸುವುದಾಗಿ ಯುಎಸ್ ಅಧ್ಯಕ್ಷರು ಹೇಳಿದರು. "ನಾವು ಟರ್ಕಿಯೊಂದಿಗೆ ಉತ್ತಮ ಬಾಂಧವ್ಯವನ್ನು ಹೊಂದಿದ್ದೇವೆ ಮತ್ತು ನಾವು ನಿಷ್ಠಾವಂತರೆಂದು ಭಾವಿಸುವ ಇತರ ದೇಶಗಳಿಗಿಂತ ಟರ್ಕಿ ಹಲವು ವಿಧಗಳಲ್ಲಿ ಹೆಚ್ಚು ನಿಷ್ಠಾವಂತವಾಗಿದೆ," ಎಂದು ಟ್ರಂಪ್ ಹೇಳಿದರು. ಎಫ್–35 ಅನ್ನು "ಇಲ್ಲಿಯವರೆಗಿನ ಅತ್ಯುತ್ತಮ ವಿಮಾನ" ಎಂದು ಬಣ್ಣಿಸಿದ ಟ್ರಂಪ್, ಟರ್ಕಿಗೆ ಸುಧಾರಿತ ಯುದ್ಧ ವಿಮಾನಗಳ ಸಂಭವನೀಯ ಮಾರಾಟ ಮಾಡುವ ಬಗ್ಗೆ ಪರಿಶೀಲಿಸುವುದಾಗಿ ತಿಳಿಸಿದರು.

ರಾಜಧಾನಿ ಅಂಕಾರಾದಲ್ಲಿ ನಡೆಯುತ್ತಿರುವ ನ್ಯಾಟೋ ಶೃಂಗಸಭೆಯು ಅಮೆರಿಕದಿಂದ ಎಫ್–35 ಯುದ್ಧ ವಿಮಾನಗಳನ್ನು ಸ್ವಾಧೀನಪಡಿಸಿಕೊಳ್ಳುವ ಟರ್ಕಿಯ ದೀರ್ಘಕಾಲದ ಪ್ರಯತ್ನಕ್ಕೆ "ಅನುಕೂಲಕರ ನಿರ್ಧಾರ" ನೀಡಬಹುದು ಎಂದು ನಂಬಿರುವುದಾಗಿ ಎರ್ಡೋಗನ್ ಮಂಗಳವಾರ ಹೇಳಿದ್ದಾರೆ. ಯುಎಸ್ ಈ ಹಿಂದೆ ನೀಡಿದ ಬದ್ಧತೆಗಳನ್ನು ಗೌರವಿಸುತ್ತದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದ ಎರ್ಡೋಗನ್, ಈ ವಿಷಯದಲ್ಲಿ ಟ್ರಂಪ್ ಅವರ ವಿಧಾನವನ್ನು ಶ್ಲಾಘಿಸಿದರು.






# ಮ್ಯಾಕ್ರಾನ್ ತಂಗಿದ್ದ ಡಮಾಸ್ಕಸ್ ಹೋಟೆಲ್ ಬಳಿ ಸ್ಫೋಟ: ಫ್ರಾನ್ಸ್ ಅಧ್ಯಕ್ಷರು ಸುರಕ್ಷಿತ



**ಡಮಾಸ್ಕಸ್, ಜು.7:** ಸಿರಿಯನ್ ಅಧ್ಯಕ್ಷ ಅಹ್ಮದ್ ಅಲ್–ಶಾರಾ ಅವರೊಂದಿಗಿನ ಭೇಟಿಗೆ ಮುನ್ನ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ತಂಗಿದ್ದ ಡಮಾಸ್ಕಸ್‌ನ ಫೋರ್ ಸೀಸನ್ಸ್ ಹೋಟೆಲ್ ಬಳಿ ಮಂಗಳವಾರ ನಡೆದ ಎರಡು ಸ್ಫೋಟಗಳಲ್ಲಿ ಕನಿಷ್ಠ 18 ಜನರು ಗಾಯಗೊಂಡಿದ್ದಾರೆ. ಎರಡು ಸುಧಾರಿತ ಸಾಧನಗಳಿಂದ ಈ ಸ್ಫೋಟಗಳು ಸಂಭವಿಸಿವೆ ಎಂದು ಭದ್ರತಾ ಮೂಲಗಳು ತಿಳಿಸಿವೆ. ನಾಲ್ಕು ಪೊಲೀಸ್ ಅಧಿಕಾರಿಗಳು ಸೇರಿದಂತೆ 18 ಜನರು ಗಾಯಗೊಂಡಿದ್ದಾರೆ ಎಂದು ಸಿರಿಯಾದ ಸರ್ಕಾರಿ ಮಾಧ್ಯಮ ವರದಿ ಮಾಡಿದೆ.

ಸ್ಫೋಟ ಸಂಭವಿಸಿದಾಗ ಮ್ಯಾಕ್ರಾನ್ ಅವರು ಅಧ್ಯಕ್ಷೀಯ ಅರಮನೆಯಲ್ಲಿದ್ದರಿಂದ ಯಾವುದೇ ಅಪಾಯ ಸಂಭವಿಸಿಲ್ಲ ಎಂದು ಎಲಿಸೀ ಪ್ಯಾಲೇಸ್ ಹೇಳಿಕೆಯಲ್ಲಿ ತಿಳಿಸಿದೆ. ಅಧ್ಯಕ್ಷರು ಫೋರ್ ಸೀಸನ್ಸ್ ಹೋಟೆಲ್‌ನಲ್ಲಿ ತಂಗಿದ್ದರು ಎಂದು ಸುದ್ದಿವಾಹಿನಿಯೊಂದು ವರದಿ ಮಾಡಿದೆ.

ಸಿರಿಯಾದ ರಾಜಧಾನಿಯಲ್ಲಿ ಅಧ್ಯಕ್ಷ ಅಹ್ಮದ್ ಅಲ್–ಶಾರಾ ಅವರೊಂದಿಗೆ ಮಾತುಕತೆ ನಡೆಸಲು ಭೇಟಿ ನೀಡಿರುವ ಮ್ಯಾಕ್ರಾನ್ ಅವರು ತಂಗಿದ್ದ ಹೋಟೆಲ್ ಮತ್ತು ಪ್ರವಾಸೋದ್ಯಮ ಸಚಿವಾಲಯದ ಸಮೀಪದಲ್ಲೇ ಈ ಸ್ಫೋಟಗಳು ನಡೆದಿವೆ. ಈ ಹೋಟೆಲ್ ಅನ್ನು ರಾಜತಾಂತ್ರಿಕರು, ಪತ್ರಕರ್ತರು ಮತ್ತು ಪರಿಹಾರ ಕಾರ್ಯಕರ್ತರು ಸೇರಿದಂತೆ ವಿದೇಶಿ ಪ್ರವಾಸಿಗರು ಹೆಚ್ಚಾಗಿ ಬಳಸುತ್ತಾರೆ. "ಫ್ರೆಂಚ್ ಅಧ್ಯಕ್ಷರ ನಿವಾಸಕ್ಕಾಗಿ ನಿಗದಿಪಡಿಸಲಾದ ಭದ್ರತಾ ವಲಯದ ಹೊರಗೆ" ಈ ಸ್ಫೋಟಗಳು ಸಂಭವಿಸಿದ್ದು, ನಿವಾಸಕ್ಕೆ ಅಥವಾ ಅಧಿಕೃತ ಭೇಟಿ ಕಾರ್ಯಕ್ರಮಕ್ಕೆ ಯಾವುದೇ ನೇರ ಮುನ್ಸೂಚನೆಯ ಭೀತಿ ಇರಲಿಲ್ಲ ಎಂದು ಅಲ್ ಜಜೀರಾ ವರದಿ ಮಾಡಿದೆ.

ಅಲ್–ಶಾರಾ ಅವರನ್ನು ಭೇಟಿ ಮಾಡಲು ತೆರಳುತ್ತಿದ್ದ ಫ್ರಾನ್ಸ್ ಅಧ್ಯಕ್ಷರಿಗೆ ಸ್ಫೋಟದ ಶಬ್ದ ಕೇಳಿಸಲಿಲ್ಲ ಮತ್ತು ಅವರ ಭೇಟಿ ಯೋಜನೆಯಂತೆಯೇ ಮುಂದುವರಿದಿದೆ ಎಂದು ಮ್ಯಾಕ್ರಾನ್ ಅವರ ಕಚೇರಿ ತಿಳಿಸಿದೆ.

ಸುದ್ದಿ ಸಂಸ್ಥೆಯೊಂದರ ಪ್ರಕಾರ, ಎರಡೂ ಸ್ಫೋಟಕ ಸಾಧನಗಳನ್ನು ಪ್ರಾಥಮಿಕ ವಿಧಾನಗಳನ್ನು ಬಳಸಿ ತಯಾರಿಸಲಾಗಿತ್ತು. ಮೊದಲ ಸಾಧನವನ್ನು ರಸ್ತೆಬದಿಯಲ್ಲಿ ನಿಲ್ಲಿಸಿದ್ದ ವಾಹನದೊಳಗೆ ಇರಿಸಲಾಗಿತ್ತು, ಆದರೆ ಎರಡನೆಯದನ್ನು ಕಸದ ತೊಟ್ಟಿಯಲ್ಲಿ ಬಚ್ಚಿಡಲಾಗಿತ್ತು. ದಾಳಿಯ ಸಂದರ್ಭ ಮತ್ತು ಅದಕ್ಕೆ ಕಾರಣರಾದವರನ್ನು ಗುರುತಿಸಲು ಅಧಿಕಾರಿಗಳು ತನಿಖೆ ಆರಂಭಿಸಿದ್ದಾರೆ ಎಂದು ಸನಾ ವರದಿ ಮಾಡಿದೆ.

ಡಿಸೆಂಬರ್ 2024 ರಲ್ಲಿ ಬಶರ್ ಅಲ್–ಅಸ್ಸಾದ್ ಆಡಳಿತದ ಪತನದ ನಂತರ ಪಾಶ್ಚಿಮಾತ್ಯ ದೇಶದ ನಾಯಕರೊಬ್ಬರು ಸಿರಿಯಾಕ್ಕೆ ನೀಡುತ್ತಿರುವ ಮೊದಲ ಅಧಿಕೃತ ಭೇಟಿ ಇದಾಗಿದ್ದು, ಮ್ಯಾಕ್ರಾನ್ ಅವರು ಅಲ್–ಶಾರಾ ಅವರೊಂದಿಗೆ ಮಾತುಕತೆ ನಡೆಸಲು ಸೋಮವಾರ ಸಂಜೆ ಸಿರಿಯಾಕ್ಕೆ ಆಗಮಿಸಿದ್ದರು. ಸಿರಿಯಾದ ಆರೋಗ್ಯ ಸಚಿವಾಲಯದ ಪ್ರಕಾರ, ಡಮಾಸ್ಕಸ್‌ನಲ್ಲಿ ಒಂಬತ್ತು ಜನರನ್ನು ಬಲಿ ತೆಗೆದುಕೊಂಡು 22 ಜನರನ್ನು ಗಾಯಗೊಳಿಸಿದ ಮತ್ತೊಂದು ದಾಳಿ ನಡೆದ ಒಂದು ವಾರದೊಳಗೆ ಈ ಅವಳಿ ಸ್ಫೋಟಗಳು ಸಂಭವಿಸಿವೆ. ಸಿರಿಯಾ ಪ್ರವಾಸದ ನಂತರ, ಮ್ಯಾಕ್ರಾನ್ ಅವರು ನ್ಯಾಟೋ ಶೃಂಗಸಭೆಗಾಗಿ ಟರ್ಕಿಗೆ ಪ್ರಯಾಣಿಸಲಿದ್ದಾರೆ.



ಇಂಡೋನೇಷ್ಯಾದ ಜಕಾರ್ತದಲ್ಲಿರುವ ಇಂಡೋನೇಷ್ಯಾ ಸಂಸತ್ತಿನಲ್ಲಿ ಮಂಗಳವಾರ ಸಮೂಹ ಛಾಯಾಚಿತ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಂಡಿದ್ದರು.

# ಏಷ್ಯಾ ಖರೀದಿದಾರರಿಗೆ ಕಚ್ಚಾತೈಲ ಬೆಲೆಯಲ್ಲಿ ಕಡಿತ

**ರಿಯಾದ್, ಜು.7:** ಮಧ್ಯಪ್ರಾಚ್ಯದಲ್ಲಿ ಸಂಘರ್ಷ ಕಡಿಮೆಯಾದ ಪರಿಣಾಮ ಜಾಗತಿಕ ತೈಲ ಸರಬರಾಜು ಹೆಚ್ಚಾಗುತ್ತಿದ್ದು, ಮಾರುಕಟ್ಟೆಯ ಮೇಲೆ ಪರಿಣಾಮ ಬೀರುತ್ತಿರುವುದರಿಂದ, ಸೌದಿ ಅರೇಬಿಯಾ ಎರಡು ದಶಕಗಳಲ್ಲೇ ಇದೇ ಮೊದಲ ಬಾರಿಗೆ ಏಷ್ಯಾ ಖರೀದಿದಾರರಿಗೆ ಕಚ್ಚಾತೈಲ ಬೆಲೆಯಲ್ಲಿ ಅತಿದೊಡ್ಡ ಕಡಿತ ಘೋಷಿಸಿದೆ. ಸರ್ಕಾರಿ ಸ್ವಾಮ್ಯದ ಸೌದಿ ಅರಾಮ್ಕೊ ತನ್ನ ಪ್ರಮುಖ ಅರಬ್ ಲೈಟ್ ಕಚ್ಚಾ ತೈಲದ ಅಧಿಕೃತ ಮಾರಾಟ ಬೆಲೆಯನ್ನು ಏಷ್ಯಾ ಖರೀದಿದಾರರಿಗೆ, ಆಗಸ್ಟ್‌ನಿಂದ ಜಾರಿಗೆ ಬರುವಂತೆ ಬ್ಯಾರಲ್‌ಗೆ 11 ಡಾಲರ್‌ನಷ್ಟು ಕಡಿತಗೊಳಿಸಿದ್ದು, ಇದು 20 ವರ್ಷಗಳಲ್ಲಿ ಅತಿದೊಡ್ಡ ಕಡಿತವಾಗಿದೆ. ಮಧ್ಯಪ್ರಾಚ್ಯದಲ್ಲಿನ ಸಂಘರ್ಷ ಕಡಿಮೆಯಾದ ನಂತರ, ಏಷ್ಯಾದಲ್ಲಿ ಬೇಡಿಕೆ ಕಡಿಮೆಯಾಗುವುದರೊಂದಿಗೆ ಪೂರೈಕೆ ಪರಿಸ್ಥಿತಿಗಳು ಸುಧಾರಿಸುತ್ತಿವೆ. ಇದು ವಿಶ್ವದ ಅತಿದೊಡ್ಡ ಕಚ್ಚಾತೈಲ ರಫ್ತುದಾರ ರಾಷ್ಟ್ರವಾದ ಸೌದಿ ಅರೇಬಿಯಾ ಮೇಲೆ, ಬೆಲೆ ಕಡಿಮೆ ಮಾಡುವ ಒತ್ತಡ ಹೆಚ್ಚಿಸಿದೆ. ಇದಕ್ಕೂ ಮುನ್ನ ಜುಲೈನಲ್ಲಿ ಪ್ರತಿ ಬ್ಯಾರಲ್ ಕಚ್ಚಾತೈಲಕ್ಕೆ 6 ಡಾಲರ್‌ನಷ್ಟು ಬೆಲೆ ಕಡಿತ ಮಾಡಿತ್ತು. ಸದ್ಯ71.7 ಡಾಲರ್ ಬೆಲೆ ಪ್ರತಿ ಬ್ಯಾರಲ್ ಕಚ್ಚಾತೈಲ ಮಾರಾಟ ಮಾಡುತ್ತಿದ್ದು, ಹೊಸ ದರ ಆಗಸ್ಟ್‌ನಿಂದ ಅನ್ವಯವಾಗಲಿದೆ.



ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ಬಹ್ರೇನ್‌ನ ಉಪಪ್ರಧಾನಿ ಖಾಲಿದ್ ಬಿನ್ ಅಬ್ದುಲ್ಲಾ ಅಲ್ ಖಲೀಫಾ ಅವರೊಂದಿಗೆ ಮಾತುಕತೆ ನಡೆಸಿದರು.

# ನಿರ್ಮಾಣ ಹಂತದ ಅಣೆಕಟ್ಟು ಕಾವಲು ಕಾಯುತ್ತಿದ್ದವರ ಮೇಲೆ ದಾಳಿ 9 ಪಾಕ್ ಪೊಲೀಸರ ಸಾವು

**ಬಲೂಚಿಸ್ತಾನ್, ಜು.7:** ಪಾಕಿಸ್ತಾನದ ನೈಋತ್ಯ ಬಲೂಚಿಸ್ತಾನ್ ಪ್ರಾಂತ್ಯದಲ್ಲಿ ಬಂದೂಕುಧಾರಿಗಳು ನಡೆಸಿದ ದಾಳಿಯಲ್ಲಿ ಕನಿಷ್ಠ ಒಂಬತ್ತು ಪೊಲೀಸ್ ಅಧಿಕಾರಿಗಳು ಮೃತಪಟ್ಟಿದ್ದರೆ, ಹಲವಾರು ಮಂದಿ ನಾಪತ್ತೆಯಾಗಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ.

ಜಿಯಾರತ್ ಜಿಲ್ಲೆಯಲ್ಲಿ ನಡೆಯುತ್ತಿರುವ ಬಹುಕೋಟಿ ರೂಪಾಯಿ ಮೌಲ್ಯದ ಅಣೆಕಟ್ಟು ನಿರ್ಮಾಣ ಸ್ಥಳದಲ್ಲಿ ಕಾವಲು ಕಾಯುತ್ತಿದ್ದ ಪೊಲೀಸರ ಮೇಲೆ ಉಗ್ರರು ಗುಂಡಿನ ದಾಳಿ ನಡೆಸಿದ್ದಾರೆ ಎಂದು ಉಪ ಆಯುಕ್ತ ಅಬ್ದುಲ್ ಕುದ್ದೂಸ್ ಅಚಕ್ಜೈ ಅವರು ತಿಳಿಸಿದ್ದಾರೆ. ದಾಳಿಯಲ್ಲಿ ಇಬ್ಬರು ಹಿರಿಯ ಅಧಿಕಾರಿಗಳೂ ಮೃತಪಟ್ಟಿದ್ದು, ಕಾಣೆಯಾದ ಸಿಬ್ಬಂದಿಯನ್ನು ಹುಡುಕಲು ಶೋಧ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅವರು ಹೇಳಿದ್ದಾರೆ.

ಯಾವುದೇ ಉಗ್ರ ಸಂಘಟನೆ ಈ ದಾಳಿಯ ಹೊಣೆಯನ್ನು ಹೊತ್ತುಕೊಂಡಿಲ್ಲ. ಜಿಯಾರತ್‌ನಲ್ಲಿ "ಉಗ್ರ ವಿರೋಧಿ ಕಾರ್ಯಾಚರಣೆ"ಯ ಭಾಗವಾಗಿ ಭದ್ರತಾ ಪಡೆಗಳು, ಪಾಕಿಸ್ತಾನಿ ತಾಲಿಬಾನ್(ಟಿಪಿಪಿ)ನ 15 ಸದಸ್ಯರನ್ನು ಕೊಂದಿವೆ ಎಂದು ಬಲೂಚಿಸ್ತಾನ್ ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆ ನಡೆದ ಸ್ಥಳದ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಪೊಲೀಸರ ಮೇಲಿನ ದಾಳಿ ಖಂಡಿಸಿ ಪ್ರತಿಭಟನೆಗಳು ನಡೆಯುತ್ತಿವೆ.

ಪಾಕಿಸ್ತಾನದ ಆಂತರಿಕ ಸಚಿವ ಮೊಹ್ಸಿನ್ ನಖ್ವಿ ಸಹ ಈ ದಾಳಿಯನ್ನು ಖಂಡಿಸಿದ್ದು, ಹತ್ಯೆಗೀಡಾದ ಅಧಿಕಾರಿಗಳು "ನಮ್ಮ ರಾಷ್ಟ್ರದ ಹೆಮ್ಮೆ" ಎಂದು ಹೇಳಿದ್ದಾರೆ.

ಬಲೂಚಿಸ್ತಾನ ರಾಜಧಾನಿ ಕ್ವೆಟ್ಟಾ ಎದುರಿಸುತ್ತಿರುವ ನೀರಿನ ಕೊರತೆಯನ್ನು ನೀಗಿಸಲು ನಿರ್ಮಿಸಲಾಗುತ್ತಿರುವ ಮಾಂಗಿ ಅಣೆಕಟ್ಟಿನ ನಿರ್ಮಾಣ ಸ್ಥಳದಲ್ಲಿ ನಾವು ಕಾವಲು ಕಾಯುತ್ತಿದ್ದೆವು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ನ್ಯಾಟೋ ಶೃಂಗಸಭೆಗಾಗಿ ಅಂಕಾರಾ ತಲುಪಿದ ಅಮೆರಿಕ ಅಧ್ಯಕ್ಷ ಟ್ರಂಪ್



**ಅಂಕಾರಾ, ಜು.7:** ಇರಾನ್ ವಿರುದ್ಧದ ವಾಷಿಂಗ್ಟನ್‌ನ ಮಿಲಿಟರಿ ಕಾರ್ಯಾಚರಣೆಗೆ ಬೆಂಬಲ ನೀಡಲು ನಿರಾಕರಿಸಿದ ಹಲವಾರು ಯುರೋಪಿಯನ್ ಮಿತ್ರರಾಷ್ಟ್ರಗಳೊಂದಿಗಿನ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆಯೇ, ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ನ್ಯಾಟೋ ಶೃಂಗಸಭೆಯಲ್ಲಿ ಭಾಗವಹಿಸಲು ಮಂಗಳವಾರ ಅಂಕಾರಾ ತಲುಪಿದ್ದಾರೆ.

ಶೃಂಗಸಭೆ ವೇಳೆ ಟ್ರಂಪ್ ಅವರು ಟರ್ಕಿ ಅಧ್ಯಕ್ಷ ರಿಸೆಪ್ ತಯ್ಯಿಪ್ ಎರ್ಡೋಗನ್ ಅವರೊಂದಿಗೆ ಮಾತುಕತೆ ನಡೆಸುವ ನಿರೀಕ್ಷೆಯಿದೆ. ಟರ್ಕಿಯು ವಾಷಿಂಗ್ಟನ್‌ನೊಂದಿಗೆ ಸುಧಾರಿತ ಮಿಲಿಟರಿ ತಂತ್ರಜ್ಞಾನಕ್ಕೆ ನವೀಕೃತ ಪ್ರವೇಶ ಸೇರಿದಂತೆ ವಿಸ್ತೃತ ರಕ್ಷಣಾ ಸಹಕಾರವನ್ನು ಬಯಸುತ್ತಿರುವ ಸಮಯದಲ್ಲಿ ಈ ಸಭೆ ನಡೆಯುತ್ತಿದೆ. ಇರಾನ್ ಸಂಬಂಧಿತ ಉದ್ವಿಗ್ನತೆಗಳು ಸಹ ಚರ್ಚೆಗಳಲ್ಲಿ ಪರೋಕ್ಷವಾಗಿ ಪ್ರಮುಖ ಪಾತ್ರ ವಹಿಸುವ ನಿರೀಕ್ಷೆಯಿದೆ. ಇಸ್ರೇಲ್ ವಿರುದ್ಧ ಅಂಕಾರಾದ ಹೆಚ್ಚುತ್ತಿರುವ ಪ್ರತಿಕೂಲ ವಾಕ್ಚಾತುರ್ಯವನ್ನು ಉಲ್ಲೇಖಿಸಿ, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಟರ್ಕಿಗೆ ಸುಧಾರಿತ ಯುಎಸ್ ಶಸ್ತ್ರಾಸ್ತ್ರ ವ್ಯವಸ್ಥೆಗಳ ಮಾರಾಟವನ್ನು ಅನುಮೋದಿಸದಂತೆ ಟ್ರಂಪ್ ಅವರನ್ನು ಒತ್ತಾಯಿಸಿದ್ದಾರೆ ಎಂದು ವರದಿಯಾಗಿದೆ. ಬುಧವಾರದಂದು ನ್ಯಾಟೋ ನಾಯಕರ ಅಧಿವೇಶನದಲ್ಲಿ ಟ್ರಂಪ್ ಪಾಲ್ಗೊಳ್ಳಲಿದ್ದಾರೆ ಮತ್ತು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಮತ್ತು ಸಿರಿಯನ್ ಅಧ್ಯಕ್ಷ ಅಹ್ಮದ್ ಅಲ್–ಶಾರಾ ಅವರೊಂದಿಗೆ ಪ್ರತ್ಯೇಕ ಸಭೆಗಳನ್ನು ನಡೆಸಲಿದ್ದಾರೆ.

ಆದಾಗ್ಯೂ, ವಾಷಿಂಗ್ಟನ್‌ನಿಂದ ಇತ್ತೀಚಿನ ಸಂಕೇತಗಳು ವೈಟ್ ಹೌಸ್ ಉಕ್ರೇನ್‌ನ ಯುದ್ಧಭೂಮಿಯ ಸ್ಥಿತಿ ಸುಧಾರಿಸಿದೆ ಎಂದು ನಂಬುತ್ತದೆ, ಇದು ಹೊಸ ರಾಜತಾಂತ್ರಿಕ ಉಪಕ್ರಮದ ತುರ್ತುಸ್ಥಿತಿಯನ್ನು ಕಡಿಮೆ ಮಾಡುತ್ತದೆ ಎಂದು ಯುರೋಪಿಯನ್ ಅಧಿಕಾರಿಗಳು ಹೇಳುತ್ತಾರೆ. ಟ್ರಂಪ್ ಅವರು ವಾರಾಂತ್ಯದಲ್ಲಿ ಝೆಲೆನ್ಸ್ಕಿ ಮತ್ತು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಇಬ್ಬರೊಂದಿಗೂ ಪ್ರತ್ಯೇಕವಾಗಿ ಮಾತನಾಡಿದ್ದಾರೆ ಮತ್ತು ಸಂಘರ್ಷವನ್ನು ಕೊನೆಗೊಳಿಸುವ ಚರ್ಚೆಗಳು ಮುಂದುವರಿದಿವೆ ಎಂದು ಸೂಚಿಸಿದ್ದಾರೆ. "ಅವರು ಒತ್ತಡವನ್ನು ಅನುಭವಿಸುತ್ತಿದ್ದಾರೆ ಎಂದು ನಾನು ಭಾವಿಸುತ್ತೇನೆ. ಅವರು ಇದನ್ನು ಕೊನೆಗೊಳಿಸಲು ಬಯಸುತ್ತಾರೆ. ಉಕ್ರೇನ್ ಕೂಡ ಇದನ್ನು ಕೊನೆಗೊಳಿಸಲು ಬಯಸುತ್ತದೆ. ನಾವು ಎರಡೂ ಕಡೆಯವರೊಂದಿಗೆ ಮಾತನಾಡುತ್ತಿದ್ದೇವೆ," ಎಂದು ಟ್ರಂಪ್ ವರದಿಗಾರರಿಗೆ ತಿಳಿಸಿದರು.